ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 250, ಪುಟಗಳು: 8, ಮಂಗಳವಾರ, 18 ಜೂನ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ನೇಣು ಸಾರಥ್ಯದಲ್ಲಿ...



ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



### ಸುಭಾಷಿತ

ನಿಮ್ಮ ಕನಸುಗಳ ಬೆನ್ನುಹತ್ತಿ... ಆದರೆ, ಅದಕ್ಕೆ ಅಡ್ಡದಾರಿಗಳು ಇಲ್ಲ ಎಂಬುದನ್ನು ಅರಿಯಿರಿ.

। ಸಚಿನ್ ತೆಂಡೂಲ್ಕರ್

### ಪಂಚಾಂಗ

(ಮಂಗಳವಾರ 18, ಜೂನ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಜೇಷ್ಠ ಮಾಸ, ಶುಕ್ಲ ಪಕ್ಷ,
- ಮಂಗಳವಾರ, ಏಕಾದಶಿ ಉಪರಿದ್ವಾದಶಿ, ಸ್ವಾತಿ ನಕ್ಷತ್ರ
- ರಾಹುಕಾಲ : 03:37 ರಿಂದ 05:13
- ಗುಳಿಕಕಾಲ : 12:24 ರಿಂದ 02:01
- ಯಮಗಂಡಕಾಲ : 9:12 ರಿಂದ 10:48

## ಸಂಕ್ಷಿಪ್ತ ಸುದ್ದಿ

### ಪತ್ನಿಗೆ ಗುಂಡಿಕ್ಕಿ ಕೊಂದ ಪತಿ ಆತ್ಮಹತ್ಯೆ




**ಹಾಸನ:** ಕೌಟುಂಬಿಕ ಕಲಹ ಹಿನ್ನೆಲೆಯಲ್ಲಿ ಪತ್ನಿಗೆ ಗುಂಡಿಕ್ಕಿ ಕೊಂದು ಬಳಿಕ ಪತಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೇಲೂರು ತಾಲೂಕಿನ ದೊಡ್ಡಸಾಲಾವರ ಗ್ರಾಮದಲ್ಲಿ ನಡೆದಿದೆ. ಪತಿ ಹರೀಶ್ (50) ಪತ್ನಿ ಜಾಜಿ (45) ಮೃತಪಟ್ಟವರು.ದಂಪತಿ ಪ್ರತಿದಿನ ಒಂದಲ್ಲ ಒಂದು ಕಾರಣಕ್ಕೆ ಜಗಳವಾಡುತ್ತಿದ್ದರು. ಪುಟ 2

### ಮಗಳೊಂದಿಗೆ NEET ಪರೀಕ್ಷೆ ಬರೆದ ಅಪ್ಪ; ಮೊದಲ ಪ್ರಯತ್ನದಲ್ಲೇ ತೇರ್ಗಡೆ



**ದೆಹಲಿ:** ವಿಕಾಸ್ ಮಂಗೋತ್ರ (50) ದೆಹಲಿಯಲ್ಲಿ ಕಾರ್ಪೊರೇಟ್ ಉದ್ಯೋಗಿ. ಅವರ ಮಗಳು ಮೀಮಾಂಸಾ ಮಂಗೋತ್ರ (18) ಈ ವರ್ಷ ನೀಟ್ ಯುಜಿ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದಾಗ ಆಕೆಗೆ ಅನುಮಾನ ಬಂದಿತ್ತು. ತಕ್ಷಣ ಅಪ್ಪನ ಬಳಿ ಬಂದು ಕೇಳಿದಾಗ ಸರಳವಾಗಿ ಹೇಳಿಕೊಟ್ಟಿದ್ದಾರೆ. ಕ್ಲಿಷ್ಟಕರವಾದ ಪರಿಕಲ್ಪನೆಗಳನ್ನು ಅತ್ಯಂತ ಸುಲಭವಾಗಿ ವಿವರಿಸುತ್ತಿದ್ದ ತಂದೆಯನ್ನು ನೋಡಿ ಮಗಳಿಗೆ ಆಶ್ಚರ್ಯವಾಗಿದೆ. ಆದ್ದರಿಂದ ತಂದೆಯನ್ನೂ ಕೂಡ NEET ಪರೀಕ್ಷೆ ಬರೆಯುವಂತೆ ಮಗಳು ಒತ್ತಾಯಿಸಿದ್ದಾಳೆ. ಅದರಂತೆ ಇಬ್ಬರೂ ಸೇರಿ ನೀಟ್ ಯುಜಿ ಪರೀಕ್ಷೆಗೆ ತಯಾರಿ ನಡೆಸಿದ್ದರು. ನಂತರ ಇಬ್ಬರೂ ದೆಹಲಿ ಎನ್‌ಸಿಆರ್‌ನ ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆದಿದ್ದರು. ಇತ್ತೀಚೆಗಷ್ಟೇ ಬಿಡುಗಡೆಯಾದ NEET UG ಫಲಿತಾಂಶದಲ್ಲಿ ಇಬ್ಬರೂ ಒಂದೇ ಪ್ರಯತ್ನದಲ್ಲಿ ಅರ್ಹತೆ ಪಡೆದು ಎಲ್ಲರಲ್ಲೂ ಅಚ್ಚರಿ ಮೂಡಿಸಿದ್ದಾರೆ. ಪುಟ 2

### ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಕೇಸ್‌ಗೆ ಬಿಗ್ ಟ್ವಿಸ್ಟ್

# ಇಂದು ಮೈಸೂರಿಗೆ ದರ್ಶನ್

**ಬೆಂಗಳೂರು:** ಚಿತ್ರದುರ್ಗದ ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ಸೇರಿ ಅನೇಕರು ಅರೆಸ್ಟ್ ಆಗಿದ್ದಾರೆ. ಸ್ಟಾರ್ ಹೀರೋಗಳಿಗೆ ನೋಟಿಸ್ ನೀಡೋ ಕೆಲಸ ಆಗುತ್ತಿದೆ. ಪಾರ್ಟಿಯಲ್ಲಿ ಚಿಕ್ಕಣ್ಣ ಇದ್ದರು ಅನ್ನೋ ಕಾರಣಕ್ಕೆ ಅವರಿಗೂ ನೋಟಿಸ್ ಹೋಗಿದೆ. ಅವರು ವಿಚಾರಣೆಗೆ ಹಾಜರಾಗಿ ಮಾಹಿತಿ ಹಂಚಿಕೊಂಡಿದ್ದಾರೆ. ಈ ಮಧ್ಯೆ ಇಂದು (ಜೂನ್ 18) ನಟ ದರ್ಶನ್ ಅವರನ್ನು ಮೈಸೂರಿಗೆ ಕರೆದುಕೊಂಡು ಹೋಗಲು ಪೊಲೀಸರು ಸಿದ್ಧತೆ ಮಾಡಿಕೊಂಡಿದ್ದಾರೆ.

ದರ್ಶನ್ ಅವರು ಕೊಲೆ ಬಳಿಕ ಮೈಸೂರಿಗೆ ತೆರಳಿದ್ದರು. ಅಲ್ಲಿ ಹೋಟೆಲ್ ನಲ್ಲಿ ಉಳಿದುಕೊಂಡಿದ್ದರು. ಇನ್ನು, ಶರಣಾಗಲು ಕೆಲವರು ಒಪ್ಪದೇ ಇದ್ದಾಗ ಮೈಸೂರಿಗೆ ಕರೆಸಿ ಅವರ ಮನ ಒಲಿಸೋ ಪ್ರಯತ್ನವನ್ನು ದರ್ಶನ್ ಮಾಡಿದ್ದರು. ಹೀಗಾಗಿ, ಕೊಲೆ ಆರೋಪಿ ದರ್ಶನ್ ಜೊತೆ ಪವನ್, ನಾಗರಾಜ್, ನಂದೀಶ್, ಲಕ್ಷ್ಮಣ್, ದೀಪಕ್ ನನ್ನು ಮೈಸೂರಿಗೆ ಕರೆದೊಯ್ಯುವ ಸಾಧ್ಯತೆ ಇದೆ.



ದರ್ಶನ್ ಉಳಿದುಕೊಂಡಿದ್ದ ಖಾಸಗಿ ಹೋಟೆಲ್ ಸೇರಿದಂತೆ ಹಲವೆಡೆ ಸ್ಥಳ ಮಹಜರು ಮಾಡೋ ಸಾಧ್ಯತೆ ಇದೆ. ವಿಚಾರಣೆ ದೃಷ್ಟಿಯಲ್ಲಿ ಇದು ತುಂಬಾನೇ ಮುಖ್ಯ ಆಗಲಿದೆ. ದರ್ಶನ್ ಮೈಸೂರಿನಲ್ಲಿ ಏನು ಮಾಡಿದರು, ಕೊಲೆಗೆ ಸಂಬಂಧಿಸಿ ಅವರು ಹೋಟೆಲ್ ನಲ್ಲಿ ಚರ್ಚೆ ಮಾಡಿದ್ದರೇ ಎನ್ನುವ ಕುರಿತು ತನಿಖೆ ನಡೆಯಲಿದೆ. ಕಳೆದ ಮಂಗಳವಾರ (ಜೂನ್ 11) ದರ್ಶನ್ ಅರೆಸ್ಟ್ ಆಗಿದ್ದರು. ದರ್ಶನ್ ಜೊತೆ ಪವಿತ್ರಾ, ಗೌಡ, ಪವನ್, ವಿನಯ್ ಸೇರಿ 19 ಜನರ ಬಂಧನ ಆಗಿದೆ. ಅವರ ವಿಚಾರಣೆ ಪ್ರಗತಿಯಲ್ಲಿದೆ. ಈಗಾಗಲೇ ಪೊಲೀಸರು ಎರಡನೇ ಬಾರಿಗೆ ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.

## 30 ನಿಮಿಷದ ಹಲ್ಲೆ ವಿಡಿಯೋ ಆಧರಿಸಿಯೇ ದರ್ಶನ್ ಅರೆಸ್ಟ್

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಮತ್ತು ಪವಿತ್ರಾ ಗೌಡರನ್ನು ಪೊಲೀಸರು ವಿಡಿಯೋವನ್ನು ಆಧರಿಸಿ ಬಂಧನ ಮಾಡಿದ್ದಾರೆ.

ಹೌದು, ಚಿತ್ರದುರ್ಗದಿಂದ ಅಪಹರಣ ಮಾಡಿದ ಬಳಿಕ ರೇಣುಕಾಸ್ವಾಮಿಯನ್ನು ಆರ್‌ಆರ್ ನಗರದಲ್ಲಿರುವ ಪಟ್ಟಣಗೆರೆ ಶೆಡ್‌ಗೆ ಕರೆ ತಂದಿದ್ದರು. ಈ ಶೆಡ್‌ನಲ್ಲಿ ದರ್ಶನ್ ಗ್ಯಾಂಗ್ ಹಲ್ಲೆ ನಡೆಸಿ ಹತ್ಯೆ ನಡೆಸಿತ್ತು.

ದರ್ಶನ್ ಗ್ಯಾಂಗ್ ಹಲ್ಲೆ ನಡೆಸುತ್ತಿರುವ ದೃಶ್ಯ ಶೆಡ್ ನಲ್ಲಿ ಅಳವಡಿಸಿದ್ದ ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ದರ್ಶನ್ ಮತ್ತು ಪವಿತ್ರಾ ಗೌಡ ಇಬ್ಬರು ಸೇರಿ ರೇಣುಕಾಸ್ವಾಮಿ ಮೇಲೆ ಹಲ್ಲೆ ನಡೆಸಿದ್ದಾರೆ.

ಪ್ರಕರಣ ಬೆಳಕಿಗೆ ಬಂದಾಗ ಆರೋಪಿಗಳ ಹೇಳಿಕೆ




ನೀಡಿ ಪೊಲೀಸರು ದರ್ಶನ್ ಅವರನ್ನು ಬಂಧಿಸಿದ್ದಾರೆ ಎಂಬ ಮಾಹಿತಿ ಸಿಕ್ಕಿತ್ತು. ಪುಟ 2

## ದರ್ಶನ್ ಮನೆ ತೂಗುದೀಪ ನಿವಾಸಕ್ಕೂ ಸಂಚಕಾರ

**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಸಿಲುಕಿರೋ ದರ್ಶನ್‌ಗೆ ಮತ್ತೊಂದು ಕಂಟಕ ಎದುರಾಗಿದೆ. ಆರ್‌ಆರ್ ನಗರದ ಐಡಿಯಲ್ ಹೋಮ್ಸ್‌ನಲ್ಲಿರುವ ದರ್ಶನ್ ಮನೆ ತೂಗುದೀಪ ನಿವಾಸಕ್ಕೂ ಸಂಚಕಾರ ಬರುವ ಸಾಧ್ಯತೆಯಿದೆ.

**ಯಾಕೆ ಸಂಕಷ್ಟ?** 2016ರಲ್ಲಿ ರಾಜ ಕಾಲುವೆ ಒತ್ತುವರಿ ತೆರವಿಗೆ ಸರ್ಕಾರ ಸೂಚಿಸಿತ್ತು. ಒತ್ತುವರಿ ಮಾಡಿಕೊಂಡ ಕಟ್ಟಡಗಳ ಪಟ್ಟಿ ಮಾಡಿ ಬಿಬಿಎಂಪಿ ಬಿಡುಗಡೆ ಮಾಡಿತ್ತು. ರಾಜಕಾಲುವೆಯ ಬಫರ್ ಝೋನ್ ಮೇಲೆ ದರ್ಶನ್ ನಿವಾಸ ನಿರ್ಮಾಣವಾಗಿದ್ದ ವಿಚಾರ ಬೆಳಕಿಗೆ ಬಂದಿತ್ತು.

ಒತ್ತುವರಿ ತೆರವು ಕಾರ್ಯಾಚರಣೆ ಮಾಡುವಾಗ ದರ್ಶನ್ ಹೈಕೋರ್ಟ್‌ನಿಂದ ತಡೆಯಾಜ್ಞೆ ತಂದಿದ್ದರು. ಆರ್.ಆರ್ ನಗರದಲ್ಲಿ ಒಟ್ಟು 70 ಕಡೆ ಒತ್ತುವರಿ ಆಗಿರುವುದು ಪತ್ತೆಯಾಗಿತ್ತು. ಹಳೆಯ 37 ಕಡೆ, ಹೊಸದಾಗಿ 33 ಕಡೆ ಒತ್ತುವರಿಯಾಗಿರುವುದು ಬಿಬಿಎಂಪಿ ತನಿಖೆ ವೇಳೆ ಬೆಳಕಿಗೆ ಬಂದಿತ್ತು. ಪುಟ 2

## ಹಾಸ್ಯನಟ ಚಿಕ್ಕಣ್ಣ ಬೆನ್ನಲ್ಲೇ ನಟ ಯಶಸ್ ಸೂರ್ಯಗೂ ನೋಟೀಸ್, ವಿಚಾರಣೆ

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಅರೆಸ್ಟ್ ಆಗಿರುವ ನಟ ದರ್ಶನ್ ಜೊತೆ ಅದೇ ದಿನ ಪಾರ್ಟಿ ಮಾಡಿದ್ದ ಹಾಸ್ಯನಟ ಚಿಕ್ಕಣ್ಣ ಅವರ ವಿಚಾರಣೆ ನಡೆಸಲಾಗಿದ್ದು, ಅದೇ ಪಾರ್ಟಿಯಲ್ಲಿದ್ದ ಇನ್ನೊಬ್ಬ ನಟನಿಗೂ ಪೊಲೀಸ್ ವಿಚಾರಣೆ ನೋಟೀಸ್ ಹೋಗಿದೆ.

ನಟ ಯಶಸ್ ಸೂರ್ಯ ಕೂಡ ಅಂದು ಕುಖ್ಯಾತ ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ಲ್ಲಿ ಡಿ ಗ್ಯಾಂಗ್ ಪಾರ್ಟಿಯಲ್ಲಿ ಭಾಗಿಯಾಗಿದ್ದರು ಎಂದು ಗೊತ್ತಾಗಿದೆ. ಈತ ದರ್ಶನ್ ಗೆ ಆಪ್ತನಾಗಿದ್ದು, ಅದೇ ದಿನ ನಡೆಸಲಾದ ಪಾರ್ಟಿಯಲ್ಲಿ ಚಿಕ್ಕಣ್ಣ ಜೊತೆಗೆ ಹಾಜರಿದ್ದರು. ಇದೀಗ ವಿಚಾರಣೆಗೆ ಹಾಜರಾಗಲು ಯಶಸ್‌ಗೂ ನೋಟೀಸ್ ನೀಡಲಾಗಿದೆ. ಪುಟ 2



### ಇಂದು ಪ್ರಜ್ವಲ್ ರೇವಣ್ಣ ಎಸ್‌ಐಟಿ ಕಸ್ಟಡಿ ಅಂತ್ಯ

## ಕೋರ್ಟ್ ಮುಂದೆ ಹಾಜರು

**ಬೆಂಗಳೂರು:** ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ, ಅತ್ಯಾಚಾರ ಆರೋಪದಲ್ಲಿ ಬಂಧನಕ್ಕೊಳಗಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಎಸ್‌ಐಟಿ ಕಸ್ಟಡಿ ಇಂದಿಗೆ ಅಂತ್ಯ ಆಗಲಿದೆ. ಆರೋಪಿಯನ್ನು ಅಧಿಕಾರಿಗಳು ನ್ಯಾಯಾಲಯದ ಮುಂದೆ ಹಾಜರುಪಡಿಸಲಿದ್ದಾರೆ.

ಎರಡೆರಡು ಬಾರಿ ಕಸ್ಟಡಿಗೆ ಪಡೆದು ವಿಚಾರಣೆ ನಡೆಸಿದರೂ ಪೊಲೀಸರಿಗೆ ತಲೆ ಬಿಸಿ ತಪ್ಪಿಲ್ಲ. ಪ್ರಜ್ವಲ್ ರೇವಣ್ಣ ವಿರುದ್ಧ ಪ್ರಬಲ ಸಾಕ್ಷಿಗಳ ಸಂಗ್ರಹಕ್ಕೆ ಎಸ್‌ಐಟಿ ಅಧಿಕಾರಿಗಳು ಹರಸಾಹಸ ಪಡುತ್ತಿದ್ದಾರೆ. ಈವರೆಗೆ ಆರೋಪಿ ವಿರುದ್ಧದ ಎರಡು ಪ್ರಕರಣಗಳ ತನಿಖೆಯನ್ನು ಅಧಿಕಾರಿಗಳು ಮುಗಿಸಿದ್ದಾರೆ.



ಹೊಳೆನರಸೀಪುರ ಟೌನ್ ಠಾಣೆಯಲ್ಲಿ ದಾಖಲಾದ ಲೈಂಗಿಕ ದೌರ್ಜನ್ಯ, ಅತ್ಯಾಚಾರ ಪ್ರಕರಣ ಹಾಗೂ ಸಿಐಡಿಯಲ್ಲಿ ದಾಖಲಾದ ಅತ್ಯಾಚಾರ ಪ್ರಕರಣದ ತನಿಖೆ ಬಹುತೇಕ ಪೂರ್ಣಗೊಂಡಿದೆ. ಎಸ್ ಐಟಿ ತನಿಖೆ ಮುಗಿದ ಹಿನ್ನೆಲೆ ಇಂದು ಪ್ರಜ್ವಲ್ ರೇವಣ್ಣ ಅವರನ್ನು ಕೋರ್ಟ್‌ಗೆ ಹಾಜರುಪಡಿಸಲಾಗುವುದು.

ಸಿಐಡಿಯಲ್ಲಿ ದಾಖಲಾಗಿರುವ ಅತ್ಯಾಚಾರ ಪ್ರಕರಣ ಮತ್ತೆ ಕಸ್ಟಡಿಗೆ ಪಡೆಯಲು ಎಸ್‌ಐಟಿ ತಯಾರಿ ನಡೆಸಿದೆ. ಕಸ್ಟಡಿಗೆ ಪಡೆಯಲು ಕೋರ್ಟ್‌ಗೆ ಎಸ್‌ಐಟಿ ಮನವಿ ಮಾಡಲಿದೆ. ಬಾಡಿ ವಾರೆಂಟ್ ಮೇಲೆ ಮತ್ತೆ ಪ್ರಜ್ವಲ್ ರೇವಣ್ಣರನ್ನು ಕಸ್ಟಡಿಗೆ ಪಡೆಯಲು ಎಸ್‌ಐಟಿ ಮುಂದಾಗಿದೆ. ಪುಟ 2

## ನಟ ದರ್ಶನ್ ಅಬ್ ನಾರ್ಮಲ್



**ಚಾಮರಾಜನಗರ:** ನಟ ದರ್ಶನ್ ಮತ್ತು ಗ್ಯಾಂಗ್ ನಿಂದ ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿರುವ ಮಾಜಿ ಸಚಿವ ಎನ್. ಮಹೇಶ್ ನಟ ದರ್ಶನ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಜನ ಜೈ ಅಂತಾರೆ, ತಾನೂ ಏನ್ ಮಾಡಿದ್ರು ಬೆಂಬಲ ನೀಡ್ತಾರೆ ಅಂತಾ ಕೊಲೆ ಮಾಡೋದ, ಉಪ್ಪು ತಿಂದವ ನೀರು ಕುಡಿಯಬೇಕು. ಈಗ ಕುಡಿತಿದ್ದಾರೆ, ಇನ್ನೂ ಕುಡಿಯಬೇಕು. ಆತನ ಮನಸ್ಥಿತಿ ಸ್ಥಿರವಾಗಿಲ್ಲ ಎಂದು ನನಗನ್ನಿಸುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

**ದರ್ಶನ್ ಅಬ್‌ನಾರ್ಮಲ್ ಪರ್ಸನ್:** ಒಬ್ಬ ಸಿನಿಮಾ ನಟನಿಗೆ ಜನ ಕನೆಕ್ಟ್ ಹಾಗ್ತಾರೆ, ಅದನ್ನು ನಟರು ಭಾವನಾತ್ಮಕವಾಗಿ ಬಳಸಿಕೊಳ್ಳಬೇಕು. ಆದರೆ ನನಗೆ ಜನ ಕನೆಕ್ಟ್ ಆಗ್ತಾರೆ, ಜನ ಜೈ ಅಂತಾರೆ ಅಂತಾ ರೌಡಿ ಆಗ್ಬಿಡೋದಾ? ಕೊಲೆ ಮಾಡುವ ಹಂತಕ್ಕೆ ರೌಡಿ ಆಗೋದಾ? ತಲೆ ಕೆಟ್ಟಿದಿಯಾ, ಆತನ ಅಬ್ ನಾರ್ಮಲ್ ಪರ್ಸನ್ ಅನ್ನಿಸುತ್ತೆ ಎಂದು ಕಿಡಿ ಕಾರಿದ್ದಾರೆ. ಪುಟ 2

### ಉಡುಪಿಯಲ್ಲಿ ಮತ್ತೊಂದು

## ಗ್ಯಾಂಗ್ ವಾರ್

**ಉಡುಪಿ:** ಉಡುಪಿಯಲ್ಲಿ ಮತ್ತೊಂದು ಗ್ಯಾಂಗ್ ವಾರ್ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ. ಜೂನ್ 15ರ ರಾತ್ರಿ ಘಟನೆ ನಡೆದಿದೆ. ಪುತ್ತೂರಿನ ಸೆಲೂನ್ ನೌಕರ ಚರಣ್, ಶಬರಿ ಎಂಬಾತನಿಗೆ ಬೈದಿದ್ದನು. ಈ ವಿಚಾರ ತಿಳಿದ ಪ್ರವೀಣ್ ಮತ್ತು ಈತನ ಗ್ಯಾಂಗ್ ಮಾತುಕತೆಗೆಂದು ಚರಣ್‌ನನ್ನು ಉಡುಪಿ ನಗರದ ಪುತ್ತೂರಿನ ಬಿರಿಯಾನಿ ಪಾಯಿಂಟ್ ಬಳಿ ಕರೆದಿದ್ದರು.




ಚರಣ್ ತನ್ನ ಮೂವರು ಸ್ನೇಹಿತರ ಜೊತೆಗೂಡಿ ಆಗಮಿಸಿದ್ದನು. ಪ್ರವೀಣ್ ಆಂಡ್ ಟೀಂ ಇವರ ತಲವಾರು ಬೀಸಿದೆ. ದಾಳಿಯಿಂದ ತಪ್ಪಿಸಿಕೊಳ್ಳಲು ಚರಣ್ ಮತ್ತು ಸಂಗಡಿಗರು ಬೈಕ್, ಸ್ಕೂಟರ್ ಬಿಟ್ಟು ಓಡಿದ್ದಾರೆ. ಚರಣ್ ಸಿಗದಿದ್ದಕ್ಕೆ ಪ್ರವೀಣ್ ಮತ್ತು ಆತನ ಟೀಂ ಆತನ ಬೈಕ್ ಮೇಲೆ ತಲವಾರಿನಿಂದ ಹಾನಿ ಮಾಡಿದ್ದಾರೆ. ಪುಟ 2

## ಪಾಕಿಸ್ತಾನಕ್ಕಿಂತ ಹೆಚ್ಚು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿದೆ ಭಾರತ

**ನವದೆಹಲಿ:** 1974ರಲ್ಲೇ ಪರಮಾಣು ಬಾಂಬ್ ಪರೀಕ್ಷೆ ನಡೆಸುವ ಮೂಲಕ ಭಾರತ ಪರಮಾಣು ಸ್ವಾವಲಂಬನೆಯನ್ನು ಕಂಡಿತ್ತು. ಈ ಪ್ರಾಜೆಕ್ಟ್ ಹೆಸರು ಸ್ಮೈಲಿಂಗ್ ಬುದ್ಧ ಎಂಬುದಾಗಿತ್ತು. ವಿಶ್ವದೆಲ್ಲೆಡೆ ಪರಮಾಣು ಶಸ್ತ್ರಾಸ್ತ್ರಗಳನ್ನು ಸಿದ್ಧಪಡಿಸುವ ಪ್ರಮಾಣ ಹೆಚ್ಚುತ್ತಿದೆ, ಭಾರತವು ಪಾಕಿಸ್ತಾನಕ್ಕಿಂತ ಹೆಚ್ಚು ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದಿದೆ ಎನ್ನುವುದು ವರದಿಯೊಂದರಿಂದ ತಿಳಿದುಬಂದಿದೆ.

ಚೀನಾ ತನ್ನ ಪರಮಾಣು ಸಾಮರ್ಥ್ಯವನ್ನು ಕ್ರಮೇಣ ಹೆಚ್ಚಿಸುತ್ತಿದೆ. ಸ್ಟಾಕ್‌ಹೋಮ್ ಇಂಟರ್‌ನ್ಯಾಶನಲ್ ಪೀಸ್ ರಿಸರ್ಚ್ ಇನ್‌ಸ್ಟಿಟ್ಯೂಟ್ (ಎಸ್‌ಐಪಿಆರ್‌ಐ) ವರದಿಯಲ್ಲಿ ಇದು ಬಹಿರಂಗವಾಗಿದೆ. ವರದಿಯ ಪ್ರಕಾರ, ಚೀನಾ ತನ್ನ ಪರಮಾಣು ಸಾಮರ್ಥ್ಯಗಳನ್ನು ವಿಸ್ತರಿಸುತ್ತಿದೆ ಮತ್ತು ಆಧುನೀಕರಿಸುತ್ತಿದೆ ಮತ್ತು 2030 ರ



ವೇಳೆಗೆ ಇದು ಖಂಡಾಂತರ ಬ್ಯಾಲಿಸ್ಟಿಕ್ ಕ್ಷಿಪಣಿಗಳಲ್ಲಿ ಯುಎಸ್ ಅಥವಾ ರಷ್ಯಾಗೆ ಸಮನಾಗಿರುತ್ತದೆ ಎಂದು ಅಂದಾಜಿಸಲಾಗಿದೆ. ವರದಿಯ ಪ್ರಕಾರ, ವಿಶ್ವಾದ್ಯಂತ ಪರಮಾಣು ಶಸ್ತ್ರಾಸ್ತ್ರಗಳ ಸಂಖ್ಯೆ ಕಡಿಮೆಯಾಗುತ್ತಿದ್ದರೂ, ಕಾರ್ಯಾಚರಣಾ ಪರಮಾಣು ಶಸ್ತ್ರಾಸ್ತ್ರಗಳ ಸಂಖ್ಯೆ ಹೆಚ್ಚುತ್ತಿದೆ. ವರದಿ ಪ್ರಕಾರ ಜನವರಿ ವೇಳೆಗೆ ಚೀನಾದ ಪರಮಾಣು ಸಂಗ್ರಹ ಕಳೆದ ವರ್ಷಕ್ಕೆ ಹೋಲಿಸಿದರೆ 410ರಿಂದ 500ಕ್ಕೆ ಏರಿಕೆಯಾಗಿದೆ. ಪುಟ 2

### ಸಾವಿರ ಬಸ್‌ಗಳನ್ನು ರಸ್ತೆಗೆ ಇಳಿಸಲು

## ಕೆಎಸ್‌ಆರ್‌ಟಿಸಿ ಚಿಂತನೆ

**ಬೆಂಗಳೂರು:** ಶಕ್ತಿ ಯೋಜನೆ ಜಾರಿಯಾದ ನಂತರ ಹಲವು ಮಾರ್ಗಗಳಲ್ಲಿ ಬಸ್‌ಗಳ ಕೊರತೆ ಉಂಟಾಗಿತ್ತು. ವಿದ್ಯಾರ್ಥಿಗಳು ಹಾಗೂ ಪ್ರಯಾಣಿಕರಿಂದ ಹೆಚ್ಚಿನ ಬಸ್ ಗಳ ನಿಯೋಜನೆಗೆ ಬೇಡಿಕೆ ಬಂದಿತ್ತು. ಇದರಿಂದ 300ಕ್ಕೂ ಹೆಚ್ಚಿನ ಹೊಸ ಮಾರ್ಗಗಳಲ್ಲಿ ಹೆಚ್ಚುವರಿ ಬಸ್ ಸೇವೆ ಆರಂಭಿಸಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ನಿರ್ಧಾರ ಮಾಡಿದೆ. ಶಾಲೆ-ಕಾಲೇಜುಗಳು ಹೆಚ್ಚಿರುವ ಮಾರ್ಗಗಳನ್ನು ಕೆಎಸ್‌ಆರ್ ಟಿಸಿ ಗುರುತಿಸಿದೆ. ಅಂತಹ ಭಾಗಗಳಿಗೆ ಹೆಚ್ಚುವರಿ ಅಥವಾ ಹೊಸದಾಗಿ ಬಸ್ ಸೇವೆ ಆರಂಭಿಸಲು ಸಿದ್ಧತೆ ನಡೆಸಿದೆ. ಕೆಎಸ್‌ಆರ್ ಟಿಸಿಗೆ ಸೇರ್ಪಡೆಯಾಗಿರುವ 814 ಬಸ್ ಗಳ ಪೈಕಿ 500 ಬಸ್ ಗಳನ್ನು ನಿಯೋಜಿಸಲು ನಿರ್ಧಾರ ಮಾಡಲಾಗಿದೆ.




ನಮ್ಮ ಸರ್ಕಾರ ಹೊಸ ಬಸ್ ಖರೀದಿಗೆ ಮುಂದಾಗಿದೆ. ಬಿಜೆಪಿ ಸರ್ಕಾರದಲ್ಲಿ ಒಂದು ಹೊಸ ಬಸ್ ಖರೀದಿ ಮಾಡಿರಲಿಲ್ಲ ಇದರಿಂದ ಪ್ರಯಾಣಿಕರಿಗೆ ತುಂಬಾ ಕಷ್ಟ ಆಗಿತ್ತು. ವಿಭಾಗೀಯ ಮಟ್ಟದಲ್ಲಿ ಗುರುತಿಸಲಾಗಿರುವ ಹೊಸ ಮಾರ್ಗಗಳಲ್ಲಿ ಮುಂದಿನ 3 ತಿಂಗಳಲ್ಲಿ ಸೇವೆ ಆರಂಭ ಮಾಡಲಾಗುತ್ತದೆ. ಬಸ್ ಸೇವೆ ಅವಶ್ಯಕತೆಯಿರುವ ಮಾರ್ಗಗಳ ಬಗ್ಗೆ ಪರಿಶೀಲಿಸಿ ವರದಿ ನೀಡುವಂತೆ ಸೂಚನೆ ನೀಡಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗ ರೆಡ್ಡಿ ಹೇಳಿದರು. ಪುಟ 2

### ಮುಂಗಾರು ಅಧಿವೇಶನ ಬಳಿಕ 19 ಮಂದಿ ಎನ್ ಸಿಪಿ ಶಾಸಕರು ನಿಲುವು

## ಬದಲಿಸಲಿದ್ದಾರೆ

**ನವದೆಹಲಿ:** ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಅಜಿತ್ ಪವಾರ್ ನೇತೃತ್ವದ ಆಡಳಿತಾರೂಢ ಎನ್‌ಸಿಪಿಯ 18 ರಿಂದ 19 ಶಾಸಕರು ಮುಂಬರುವ ರಾಜ್ಯ ವಿಧಾನಸಭೆಯ ಮುಂಗಾರು ಅಧಿವೇಶನದ ನಂತರ ತಮ್ಮ ಪಕ್ಷವನ್ನು ಸೇರಿಕೊಳ್ಳಲಿದ್ದಾರೆ ಎಂದು ನ್ಯಾಷನಲಿಸ್ಟ್ ಕಾಂಗ್ರೆಸ್ ಪಕ್ಷದ (ಶರದ್ ಪವಾರ್) ನಾಯಕ ರೋಹಿತ್ ಪವಾರ್ ಸೋಮವಾರ ಹೇಳಿದ್ದಾರೆ.

2023 ರ ಜುಲೈನಲ್ಲಿ ಪಕ್ಷವು ವಿಭಜನೆಯಾದ ನಂತರ ಪಕ್ಷದ ಸಂಸ್ಥಾಪಕ ಶರದ್ ಪವಾರ್ ಮತ್ತು ಇತರ ಹಿರಿಯ ನಾಯಕರ ವಿರುದ್ಧ ಎಂದಿಗೂ ತಪ್ಪಾಗಿ ಮಾತನಾಡದ ನ್ಯಾಷನಲಿಸ್ಟ್ ಕಾಂಗ್ರೆಸ್ ಪಕ್ಷದ (ಎನ್‌ಸಿಪಿ) ಅನೇಕ ಶಾಸಕರಿದ್ದಾರೆ ಎಂದು ರೋಹಿತ್ ಪವಾರ್ ಹೇಳಿಕೆ ನೀಡಿದ್ದಾರೆ, ಮುಂಗಾರು ಅಧಿವೇಶನದ ನಂತರ ಪರಿಸ್ಥಿತಿ ಬದಲಾಗಲಿದೆ ಎಂದರು.



ಆದರೆ ಅವರು ವಿಧಾನಸಭೆ ಅಧಿವೇಶನಕ್ಕೆ ಹಾಜರಾಗಬೇಕು ಮತ್ತು ತಮ್ಮ ಕ್ಷೇತ್ರಗಳ ಅಭಿವೃದ್ಧಿ ಹಣವನ್ನು ಪಡೆಯಬೇಕು ಎಂದು ಎನ್‌ಸಿಪಿ (ಶರದ್ಚಂದ್ರ ಪವಾರ್) ಅಧ್ಯಕ್ಷ ಶರದ್ ಪವಾರ್ ಅವರ ಮೊಮ್ಮಗ ಹೇಳಿದ್ದಾರೆ.

ಹೀಗಾಗಿ ಅಧಿವೇಶನ ಮುಗಿಯುವವರೆಗೂ ಕಾಯುತ್ತೇವೆ. 18 ರಿಂದ 19 ಎನ್‌ಸಿಪಿ ಶಾಸಕರು ನಮ್ಮೊಂದಿಗೆ ಮತ್ತು ಪವಾರ್ ಸಾಹೇಬ್ ಅವರೊಂದಿಗೆ ಸಂಪರ್ಕದಲ್ಲಿದ್ದಾರೆ ಮತ್ತು ಪುಟ 2

## ರೇಣುಕಾಸ್ವಾಮಿಯನ್ನು ಕೊಲ್ಲುವಾಗ ಸರ್ಕಾರ ಏನು ಮಾಡ್ತಿತ್ತು?

**ಚಿತ್ರದುರ್ಗ:** ರೇಣುಕಾಸ್ವಾಮಿಯನ್ನು ಕಿಡ್ನಾಪ್ ಮಾಡಿ ಕೊಲ್ಲುವಾಗ ಸರ್ಕಾರ ಏನು ಮಾಡುತ್ತಿತ್ತು ಸರ್ಕಾರ ಜೀವಂತವಿದೆಯೋ ಇಲ್ಲವೋ ಎಂದು ಅನುಮಾನ ಮೂಡಿಸಿದೆ ಎಂದು ಸಂಸದ ಗೋವಿಂದ ಕಾರಜೋಳ ಕಾಂಗ್ರೆಸ್ ವಿರುದ್ಧ ಕಿಡಿಕಾರಿದ್ದಾರೆ. ದರ್ಶನ್ ಮತ್ತು ಗ್ಯಾಂಗ್‌ನಿಂದ ರೇಣುಕಾಸ್ವಾಮಿ ಕೊಲೆ ಕೇಸ್ ಬಗ್ಗೆ



ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಇಂಟೆಲಿಜೆನ್ಸ್ ಇಲಾಖೆ ಏನು ಮಾಡುತ್ತಿತ್ತು ಈ ಕೇಸಲ್ಲಿ ಪೊಲೀಸ್ ಅಧಿಕಾರಿಗಳ ನಿಷ್ಕ್ರಿಯರೊಂದಿದ್ದು ಯಾಕೆ, ಈ ಸ್ಥಿತಿ ನೋಡಿದಾಗ ಸರ್ಕಾರ ಜೀವಂತ ಇಲ್ಲ ಎನ್ನಿಸಿದೆ ಎಂದರು.

ಸ್ಥಳೀಯ ಶಾಸಕ 24 ಗಂಟೆಯೊಳಗೆ ನೊಂದ ಕುಟುಂಬಕ್ಕೆ ಸಾಂತ್ವನ ಹೇಳಿಲ್ಲ ಎಂದು ಚಿತ್ರದುರ್ಗ ಶಾಸಕ ವೀರೇಂದ್ರ, ಪಪ್ಪಿ ಹೆಸರು ಹೇಳದೆ ವಾಗ್ದಾಳಿ ನಡೆಸಿದರು. ಜಿಲ್ಲಾ ಉಸ್ತುವಾರಿ ಸಚಿವ ಈವರೆಗೆ ತಿರುಗಿ ನೋಡಿಲ್ಲ, ಚಿತ್ರದುರ್ಗ ಉಸ್ತುವಾರಿ ಸಚಿವ ಸುಧಾಕರ್ ನಡೆಯನ್ನು ಖಂಡಿಸುತ್ತೇನೆ ಎಂದು ಹರಿಹಾಯ್ದರು.

# ಮತ್ತೊಂದು ಧರ್ಮವನ್ನೂ ಪ್ರೀತಿಸಿ; ಸಿಎಂ

**ಬೆಂಗಳೂರು:** ಸಮಾಜದಲ್ಲಿ ನಾವೆಲ್ಲರೂ ಅಣ್ಣ ತಮ್ಮಂದಿರ ರೀತಿ ಬಾಳಬೇಕು. ನಾವೆಲ್ಲರೂ ಇನ್ನೊಂದು ಧರ್ಮವನ್ನು ಪ್ರೀತಿಸುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಬಕ್ರೀದ್ ಅಂಗವಾಗಿ ಚಾಮರಾಜಪೇಟೆ ಮೈದಾನದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಪಾಲ್ಗೊಂಡು ಮಾತನಾಡಿದರು.



ತ್ಯಾಗ ಬಲಿದಾನದ ಪ್ರತೀಕವಾಗಿರುವ ಬಕ್ರೀದ್ ಹಬ್ಬವನ್ನು ರಾಜ್ಯಾದ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಮುಸ್ಲಿಮರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಒಬ್ಬರಿಗೊಬ್ಬರು ಶುಭಕೋರಿದರು. ಬೆಂಗಳೂರಿನ ಚಾಮರಾಜಪೇಟೆಯ ಈದ್ಗಾ ಮೈದಾನದಲ್ಲಿ ಸಾವಿರಾರು ಜನರು ಸಾಮೂಹಿಕ ಪ್ರಾರ್ಥನೆ ನೆರವೇರಿಸಿದರು. ಸಾಮೂಹಿಕ ಪ್ರಾರ್ಥನೆಯಲ್ಲಿ ಸಿಎಂ ಸಿದ್ದರಾಮಯ್ಯ, ಸಚಿವ ಜಮೀರ್ ಅಹ್ಮದ್ ಉಪಸ್ಥಿತಿ ಇದ್ದರು. ಮುಸಲ್ಮಾನರ ಅಮಾಮ್ ಶಾಲು (ಟೋಪಿ) ಹಾಕಿ ಸಿದ್ದರಾಮಯ್ಯನಿಗೆ ಸನ್ಮಾನ ಮಾಡಲಾಯಿತು.

ಬಳಿಕ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಇಡೀ ಭಾರತದಲ್ಲಿ ಬಕ್ರೀದ್ ಹಬ್ಬವನ್ನು ಆಚರಣೆ ಮಾಡಲಾಗುತ್ತಿದೆ. ಮನುಕುಲಕ್ಕೆ ಒಳ್ಳೆಯದಾಗಲಿ ಎಂದು ನೀವೆಲ್ಲರೂ ಪ್ರಾರ್ಥನೆ ಮಾಡಿದ್ದೀರಿ. ಸಮಾಜದಲ್ಲಿ ನಾವೆಲ್ಲರೂ ಅಣ್ಣ ತಮ್ಮಂದಿರ ರೀತಿ ಬಾಳಬೇಕು. ಎಲ್ಲಾ ಭಾಷೆ, ಧರ್ಮಕ್ಕೆ ಸಮಾನತೆ ಕೊಡುವ ಏಕೈಕ ದೇಶವಿದು. ನಾವೆಲ್ಲರೂ ಇನ್ನೊಂದು ಧರ್ಮವನ್ನು ಪ್ರೀತಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಆಗಲೇ ರಾಷ್ಟ್ರ ಹಾಗೂ ಸಮಾಜದ ಏಳಿಗೆ ಸಾಧ್ಯವಾಗುತ್ತದೆ. ನಾವು ಸಂವಿಧಾನದ ಮೇಲೆ ನಂಬಿಕೆ ಇಟ್ಟವರು, ಯಾವುದೇ ತಾರತಮ್ಯ ಮಾಡಲ್ಲ ಎಂದರು.

ಕೊಪ್ಪಳದಲ್ಲೂ ತ್ಯಾಗ ಬಲಿದಾನದ ಪ್ರತೀಕವಾಗಿರುವ ಬಕ್ರೀದ್ ಹಬ್ಬವನ್ನು ಆಚರಿಸಲಾಯಿತು. ಈದ್ಗಾ ಮೈದಾನದಲ್ಲಿ ಸಾವಿರಾರು ಜನರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಈ ವೇಳೆ ಸಂಸದ ಕೆ. ರಾಜಶೇಖರ ಹಿಟ್ನಾಳ, ಶಾಸಕ ಕೆ. ರಾಘವೇಂದ್ರ ಹಿಟ್ನಾಳ ಸೇರಿ ಹಲವರು ಭಾಗಿಯಾಗಿದ್ದರು.

ಬೆಳಗಾವಿ ಅಂಜುಮಾನ ಮೈದಾನ ಹಾಗೂ ಶಿವಮೊಗ್ಗ, ವಿಜಯನಗರ ಹೊಸಪೇಟೆಯ ಅಂಬೇಡ್ಕರ್ ಸರ್ಕಲ್ ಬಳಿ ಇರುವ ಈದ್ಗಾ ಮೈದಾನದಲ್ಲೂ ಸಾಮೂಹಿಕ ಪ್ರಾರ್ಥನೆ ನಡೆಯಿತು. ಹೂಡಾ ಅಧ್ಯಕ್ಷ ಇಮಾಮ್, ಆನಂದ್ ಸಿಂಗ್ ಪುತ್ರ ಸಿದ್ಧಾರ್ಥ್ ಸಿಂಗ್ ಸೇರಿ ಹಲವರು ಭಾಗಿಯಾಗಿದ್ದರು.

ಬಳ್ಳಾರಿ ನಗರದ ಈದ್ಗಾ ಮೈದಾನದಲ್ಲಿ ಸಾಮೂಹಿಕ ಪ್ರಾರ್ಥನೆ ನಡೆದಿದೆ. ಇದೇ ವೇಳೆ ಧರ್ಮಗುರುಗಳಿಂದ ಪ್ರವಾದಿ ಮಹಮದ್ ಪೈಗಂಬರರ ಜೀವನದ ಮಹತ್ವ ಬೋಧನೆ ಮಾಡಲಾಯಿತು. ತ್ಯಾಗ ಹಾಗೂ ಬಲಿದಾನಗಳ ಬಗ್ಗೆ ಧರ್ಮ ಗುರು ವಿವರಿಸಿದರು. ಪ್ರಾರ್ಥನೆ ನಂತರ ಪರಸ್ಪರ ಶುಭಾಶಯ ಕೋರಿದರು.

ಬಾಗಲಕೋಟೆಯ ಮುಧೋಳ ನಗರದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಮುಧೋಳ ಶಾಸಕ, ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಭಾಗಿಯಾದರು. ಪ್ರಾರ್ಥನೆ ಬಳಿಕ ಮುಸ್ಲಿಂ ಬಾಂಧವರಿಗೆ ಶುಭಾಶಯ ತಿಳಿಸಿದರು. ಹುಬ್ಬಳ್ಳಿಯ ರಾಣಿ ಚೆನ್ನಮ್ಮ ವೃತ್ತದ ಈದ್ಗಾ ಮೈದಾನದಲ್ಲಿ ನಮಾಜ್ ಮಾಡಲಾಯಿತು.

ಮೈಸೂರು ಹಾಗೂ ಮಂಡ್ಯದಲ್ಲೂ ಬಕ್ರೀದ್ ಅಂಗವಾಗಿ ವಿವಿಧೆಡೆಗಳಲ್ಲಿರುವ ಮಸೀದಿಗಳಲ್ಲಿ ಮುಸ್ಲಿಮರಿಂದ ಸಾಮೂಹಿಕ ಪ್ರಾರ್ಥನೆ ನಡೆಯಿತು. ಮೈಸೂರಿನ ತಿಲಕ್ ನಗರದಲ್ಲಿರುವ ಈದ್ಗಾ ಮೈದಾನದಲ್ಲಿ ಮುಸ್ಲಿಂ ಧರ್ಮಗುರು ಉಸ್ಮಾನ್ ಷರೀಫ್ ಅವರು ಭಾಗಿಯಾಗಿದ್ದರು. ಮಂಡ್ಯದ ಈದ್ಗಾ ಮೈದಾನದಲ್ಲಿ ನಗರಸಭೆ ಸದಸ್ಯ ನಹೀಮ್ ಪ್ರಾರ್ಥನೆ ಸಲ್ಲಿಸಿದರು.

## ರಾಜಕಾಲುವೆಯಲ್ಲಿ ಮೊಬೈಲ್ ಹುಡುಕಾಟ

**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆಯಾಗಿ 10 ದಿನ ಕಳೆದರೂ ಮೊಬೈಲ್ ಮಾತ್ರ ಇನ್ನೂ ಸಿಕ್ಕಿಲ್ಲ. ಹೀಗಾಗಿ ಮೊಬೈಲ್ ಪತ್ತೆ ಹಚ್ಚಲು ಪೊಲೀಸರು ಆರೋಪಿಯನ್ನು ಮತ್ತೆ ಸ್ಥಳ ಮಹಜರು ಮಾಡಲು ಕರೆ ತಂದಿದ್ದಾರೆ. ಕೊಲೆ ಪ್ರಕರಣದಲ್ಲಿ ಮೊಬೈಲ್ ಪ್ರಮುಖ ಸಾಕ್ಷ್ಯವಾಗುವ ಕಾರಣ ಪೊಲೀಸರು ಎಲ್ಲಾ ಕಡೆ ಆತನ ಮೊಬೈಲ್ ಹುಡುಕಾಡಿದ್ದಾರೆ. ಎಲ್ಲಿಯೂ ಮೊಬೈಲ್ ಸಿಗದ ಕಾರಣ ಪೊಲೀಸರು ಕೊನೆಯ ಬಾರಿಗೆ ಸಿಗ್ನಲ್ ಇದ್ದ ಜಾಗವನ್ನು ಸರ್ಚ್ ಮಾಡಿದ್ದಾರೆ. ರಾಜಕಾಲುವೆ ಜಾಗದಲ್ಲೇ ಕೊನೆಯ ಬಾರಿಗೆ ಸಿಗ್ನಲ್ ತೋರಿಸಿದೆ. ಈ ಕಾರಣಕ್ಕೆ ಈಗ ಆರೋಪಿ ಪ್ರದೂಶ್‌ನನ್ನು ಮತ್ತೆ ಸುಮನಹಳ್ಳಿ ಸತ್ವ ಅಪಾರ್ಟ್‌ಮೆಂಟ್ ಮುಂಭಾಗದಲ್ಲಿರುವ ರಾಜಕಾಲುವೆ ಬಳಿ ಕರೆ ತಂದು ಶವ ಎಸೆದ ಜಾಗದತ್ತ ಕರೆತಂದಿದ್ದಾರೆ. ಪೊಲೀಸರ ಮನವಿಯ ಮೇರೆಗೆ ಪೌರ ಕಾರ್ಮಿಕರು ರಾಜಕಾಲುವೆಗೆ ಇಳಿದು ಮೊಬೈಲ್ ಹುಡುಕಾಡಿದ್ದಾರೆ. ಆದರೆ ಮೊಬೈಲ್ ಪತ್ತೆಯಾಗದ ಕಾರಣ ಶೋಧ ಕಾರ್ಯ ನಿಲ್ಲಿಸಿದ್ದಾರೆ. ಜೂನ್ 8ರಂದು ಸಂಜೆ 'ಡಿ' ಗ್ಯಾಂಗ್ ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿಯನ್ನು ಕೊಲೆ ಮಾಡಿತ್ತು. ಅದೇ ದಿನ ಬೆಳಗ್ಗೆ ಆರೋಪಿಗಳು ಚಿತ್ರದುರ್ಗದಿಂದ ರೇಣುಕಾಸ್ವಾಮಿಯನ್ನು ಕಿಡ್ನಾಪ್ ಮಾಡಿ ಕರೆತಂದಿದ್ದಾರೆ. ಅದೇ ದಿನ ತಡರಾತ್ರಿ ರೇಣುಕಾಸ್ವಾಮಿಯನ್ನು ಹತ್ಯೆಗೈದು ಆರೋಪಿಗಳು ಮೃತದೇಹವನ್ನು ಸುಮನಹಳ್ಳಿ ಸತ್ವಾ ಅಪಾರ್ಟ್ಮೆಂಟ್ ಬಳಿ ಇರುವ ರಾಜಕಾಲುವೆ ಬಳಿ ಬಿಸಾಕಿದ್ದರು. ನಂತರ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆಗೆ ಆರೋಪಿಗಳು ಶರಣಾಗಿದ್ದಾರೆ. ಆದರೆ ಪೊಲೀಸ್ ವಿಚಾರಣೆ ವೇಳೆ ರೇಣುಕಾಸ್ವಾಮಿ ಮೊಬೈಲ್ ಅನ್ನು ಸುಮನಹಳ್ಳಿ ರಾಜ ಕಾಲುವೆಗೆ ಬಿಸಾಕಿದ್ದಾಗಿ ಹೇಳಿದ್ದಾರೆ. ಈ ಹಿನ್ನೆಲೆ ಕಳೆದ ಹತ್ತು ದಿನಗಳಿಂದ ಹುಡುಕಾಡಿದರೂ ರೇಣುಕಾಸ್ವಾಮಿ ಮೊಬೈಲ್ ಪತ್ತೆಯಾಗಿಲ್ಲ.

## ರೇಣುಕಾಸಾಮಿ ಹತ್ಯೆ ಪ್ರಕರಣ ಹಾಸ್ಯ ನಟ ಚಿಕ್ಕಣ್ಣಗೆ ನೋಟಿಸ್

**ಬೆಂಗಳೂರು:** ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ದರ್ಶನ್ ಗ್ಯಾಂಗ್ ಬಂಧನವಾದ ಬೆನ್ನಲ್ಲೇ ವಿಚಾರಣೆಗೆ ಹಾಜರಾಗುವಂತೆ ಸ್ಯಾಂಡಲ್‌ವುಡ್ ಖ್ಯಾತ ಹಾಸ್ಯನಟ ಚಿಕ್ಕಣ್ಣಗೆ ಪೊಲೀಸರು ನೋಟಿಸ್ ನೀಡಿದ್ದಾರೆ. ಹೌದು. ಕೊಲೆ ನಡೆದ ಜೂನ್ 8 ಶನಿವಾರದಂದು ದರ್ಶನ್ ಮತ್ತು ಗ್ಯಾಂಗ್ ಸದಸ್ಯರು ಆರ್ ಆರ್ ನಗರದ ಸ್ಟೋನಿಬ್ರೂಕ್ ಪಬ್‌ನಲ್ಲಿ ಮಧ್ಯಾಹ್ನದಿಂದ ಪಾರ್ಟಿ ಮಾಡಿದ್ದರು. ಈ ಪಾರ್ಟಿಯಲ್ಲಿ ಚಿಕ್ಕಣ್ಣ ಭಾಗಿಯಾಗಿದ್ದರು. ಸಂಜೆ ವೇಳೆಗೆ ಸ್ವಲ್ಪ ಕೆಲಸವಿದೆ ಎಂದು ಹೇಳಿ ದರ್ಶನ್ ಹೊರಟಿದ್ದರು. ರೇಣುಕಾಸ್ವಾಮಿ ಕೊಲೆಯಾದ ದಿನವೇ ದರ್ಶನ್ ಜೊತೆ ಪಾರ್ಟಿ ಮಾಡಿದ್ದರಿಂದ ಪೊಲೀಸರು ಈಗ ತುರ್ತು ವಿಚಾರಣೆಗೆ ಹಾಜರಾಗುವಂತೆ ನೋಟಿಸ್‌ನಲ್ಲಿ ಉಲ್ಲೇಖಿಸಿದ್ದಾರೆ. ಕೊಲೆ ವಿಚಾರವಾಗಿ ಪಬ್‌ನಲ್ಲಿ ಏನಾದರೂ



ಚರ್ಚೆ ನಡೆದಿತ್ತಾ ಎಂಬುದರ ಬಗ್ಗೆ ಮಾಹಿತಿ ಪಡೆಯುವ ಸಾಧ್ಯತೆಯಿದೆ. ಈಗ ನೋಟಿಸ್ ಕೊಟ್ಟು ಕರೆಸಬೇಕೇ? ಬೇಡವೇ ಎಂಬುದರ ಬಗ್ಗೆ ಪೊಲೀಸರು ಹಿರಿಯ ಅಧಿಕಾರಿಗಳ ಸಲಹೆ ಕೇಳಿದ್ದ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ಈ ಪ್ರಕರಣದಲ್ಲಿ ನೇರವಾಗಿ ಭಾಗಿಯಾಗದ ಕಾರಣ ಚಿಕ್ಕಣ್ಣ ಅವರನ್ನು ಬಂಧನ ಮಾಡುವುದಿಲ್ಲ. ಬದಲಾಗಿ ಸಾಕ್ಷಿಯನ್ನಾಗಿ ಪರಿಗಣಿಸಲಿದ್ದಾರೆ. ಕೊಲೆಯ ಬಗ್ಗೆ ಮಾಹಿತಿ ಇಲ್ಲದೇ ಇದ್ದರೂ ಕೂಡ, ಪಾರ್ಟಿಯಲ್ಲಿದ್ದ ಎಂಬ ಕಾರಣಕ್ಕೆ ಸಾಕ್ಷಿಯಾಗಿ ಪರಿಗಣನೆ ಮಾಡಲು ಪೊಲೀಸರು ಮುಂದಾಗಿದ್ದಾರೆ.

# ಸಿಸಿಟಿವಿ ದಾಖಲೆ ಸಂಪೂರ್ಣ ನಾಶ ಮಾಡಿದ ಪಾತಕಿಗಳು!

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆಯ ನಂತರ ಆಸುಪಾಸಿನ ಸ್ಥಳಗಳಲ್ಲಿದ್ದ ಸಿಸಿ ಕ್ಯಾಮೆರಾದಲ್ಲಿ ದಾಖಲಾಗಿದ್ದ ಎಲ್ಲ ದೃಶ್ಯಗಳನ್ನು ಡಿಲೀಟ್ ಮಾಡಲಾಗಿದೆ ಎಂಬ ಆಘಾತಕಾರಿ ಸಂಗತಿ ಬಯಲಾಗಿದೆ. ದರ್ಶನ್ ನಡೆಸಿದ ಕರಾಳ ಕೃತ್ಯದ ನಂತರ ಕಳೆದ ಒಂದು ವರ್ಷದ ಸಿಸಿಟಿವಿ ದಾಖಲಾತಿಗಳನ್ನು ಡಿಲೀಟ್ ಮಾಡಲಾಗಿದೆ ಎಂಬ ಮಾಹಿತಿ ದೊರೆತಿದೆ.



ಕೊಲೆಯ ಬಳಿಕ, ಸ್ಟೋನಿಬ್ರೂಕ್ ರೆಸ್ಟೋರೆಂಟ್ ನ ಹಾಗೂ ಹಲ್ಲೆ ನಡೆದ ಪಟ್ಟಣಗೆರೆಯ ಶೆಡ್‌ನ ದೃಶ್ಯಗಳನ್ನು ಡಿಲೀಟ್ ಮಾಡಿಸಲಾಗಿದೆ. ಆರೋಪಿಗಳು ಕಳೆದ ಒಂದು ವರ್ಷದ ಸಿಸಿ ಟಿವಿ ದೃಶ್ಯಗಳನ್ನು ಡಿಲೀಟ್ ಮಾಡಿಸಿದ್ದಾರೆ. ಸಿಸಿ ಟಿವಿ ದೃಶ್ಯಗಳೇ ಕೊಲೆಯ ಪ್ರಮುಖ ಸಾಕ್ಷಿ ಆಗಲಿವೆ ಎಂಬ ಹಿನ್ನೆಲೆಯಲ್ಲಿ, ಇವುಗಳನ್ನು ಪೂರ್ತಿಯಾಗಿ ಡಿಲೀಟ್ ಮಾಡಲು ಆರೋಪಿಗಳು ಅಪರಾಧ ಪರಿಣಿತರ ಸಲಹೆ ಪಡೆದೇ ಈ ಕೃತ್ಯ ಎಸಗಿದ್ದಾರೆ ಎಂದು ತರ್ಕಿಸಲಾಗಿದೆ.

ರೇಣುಕಾಸ್ವಾಮಿ ಕೊಲೆಯ ಮೊದಲಿನ ಹಾಗೂ ನಂತರದ ಎಲ್ಲಾ ಸಿಸಿ ಕ್ಯಾಮರಾ ದೃಶ್ಯಗಳನ್ನು ಡಿಲೀಟ್ ಮಾಡಿಸಿದ್ದಾರೆ. ತನಿಖೆಗೆ ಇವು ಅತ್ಯಂತ ಅಗತ್ಯವಾಗಿದ್ದು, ಶೆಡ್ ಹಾಗೂ ರೆಸ್ಟೋರೆಂಟ್‌ನ ಸಿಸಿ ಟಿವಿ ರೆಕಾರ್ಡಿಂಗ್ ರಿಕವರಿ ಮಾಡಲು ಪೊಲೀಸರು ಹರಸಾಹಸಪಡುತ್ತಿದ್ದಾರೆ. ದರ್ಶನ್ ಸೇರಿದಂತೆ ಆರೋಪಿಗಳ ಬಂಧನ ಆದ ಬಳಿಕ ಈ ರೆಕಾರ್ಡಿಂಗ್ ಡಿಲೀಟ್ ಮಾಡಲಾಗಿದೆಯೇ ಅಥವಾ ಮೊದಲೇ ಮಾಡಲಾಗಿದೆಯೇ ಎಂದು ತಿಳಿದುಬರಬೇಕಿದೆ.

ಕೊಲೆಯ ಪ್ರಮುಖ ಸಾಕ್ಷಿಗಳನ್ನೇ ಖತರ್ ನಾಕ್ ಆರೋಪಿಗಳು ಡಿಲೀಟ್ ಮಾಡಿದ್ದು, ಈ ಹಿನ್ನೆಲೆಯಲ್ಲಿ ಸಾಕ್ಷಿ ನಾಶಕ್ಕೆ ಪೊಲೀಸ್ ಇಲಾಖೆಯಲ್ಲಿರುವವರಿಂದಲೂ ಆರೋಪಿಗಳು ಸಲಹೆ ಪಡೆದಿದ್ದಾರೆಯೇ ಎಂಬುದು ಕೂಡ ತನಿಖಾಧಿಕಾರಿಗಳಿಗೆ ಕುತೂಹಲ ಮೂಡಿಸಿದೆ. ಈಗಾಗಲೇ ಪ್ರಶ್ನೆಗೆ ಒಳಗಾಗುತ್ತಿರುವವರ ಪಟ್ಟಿಯಲ್ಲಿ ಒಬ್ಬ ಪೊಲೀಸ್ ಅಧಿಕಾರಿ ಕೂಡ ಇದ್ದಾರೆ ಎಂಬುದನ್ನು ಇಲ್ಲಿ ಗಮನಿಸಬಹುದು.

ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಪಟ್ಟಣಗೆರೆಯ ಶೆಡ್‌ನಲ್ಲಿ ಕೂಡಿಹಾಕಿ ಥಳಿಸಿ ಸಾಯಿಸಲಾಗಿತ್ತು. ನಂತರ ಇದನ್ನು ಮುಚ್ಚಿಹಾಕುವುದು ಹೇಗೆ ಎಂಬ ಕುರಿತು ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ನಲ್ಲಿ ನಟ ಹಾಗೂ ಆರೋಪಿಗಳು ಕೂತು ಮಾತನಾಡಿದ್ದರು. ಇಲ್ಲೇ 30 ಲಕ್ಷ ರೂಪಾಯಿಯ ಡೀಲ್ ಕೂಡ ನಡೆದಿತ್ತು. ಇದೀಗ ಎರಡೂ ಕಡೆಗಳ ಸಿಸಿಟಿವಿ ಹಾರ್ಡ್ ಡ್ರೈವ್ ಗಳು ಕೂಡ ನಾಶವಾಗಿವೆ ಎಂದು ಗೊತ್ತಾಗಿದೆ. ಈ ಹಿನ್ನೆಲೆಯಲ್ಲಿ ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ನ ಮಾಲಿಕ ವಿನಯ್‌ನನ್ನು ಕೂಡ ಪ್ರಶ್ನಿಸಲಾಗುತ್ತಿದೆ.

**ಆ ಭಯಾನಕ ಶೆಡ್!:** ರೇಣುಕಾಸ್ವಾಮಿ ಕೊಲೆಯಾದ ಪಟ್ಟಣಗೆರೆಯ ಆ ಶೆಡ್ ಬಗ್ಗೆ ಇದೀಗ ಇನ್ನಿತರ ಕೆಲವು ಭಯಾನಕ ಸತ್ಯಗಳು ಹೊರಬೀಳುತ್ತಿವೆ. ಇಲ್ಲಿ ಅದೆಷ್ಟೋ ಕನ್ನಡ ಚಿತ್ರ ನಿರ್ಮಾಪಕರು ಕೂಡ ಗೂಸಾ ತಿಂದಿದ್ದಾರೆ ಎಂಬುದು ಬಯಲಾಗಿದೆ. ತನಗೆ ಆಗದವರು, ತನ್ನ ವಿರೋಧಿಗಳು ಹಾಗೂ ಪೇಮೆಂಟ್ ಮಾಡದ ನಿರ್ಮಾಪಕರನ್ನು ಅಟ್ಯಾಕ್ ಮಾಡಲು ದರ್ಶನ್ ಬಳಸುತ್ತಿದ್ದ ಜಾಗವೇ ಈ ಶೆಡ್ ಎನ್ನಲಾಗಿದೆ.

ನಟ ದರ್ಶನ್ ಎಷ್ಟೋ ಮಂದಿಗೆ ಇಲ್ಲೇ ಹಲ್ಲೆ ಮಾಡಿ, 2ರಿಂದ 3 ದಿನಗಳ ಕಾಲ ಇಲ್ಲೇ ಇರಿಸಿಕೊಳ್ಳುತ್ತಿದ್ದ. ಕಳಿಸಿಕೊಡುವಾಗ ಬ್ಯಾಂಡೇಜ್ ಹಾಕಿಸಿ ಕೈಗೆ ಹಣ ಕೊಟ್ಟು ಕಳುಹಿಸುತ್ತಿದ್ದ ಎಂದು ಕೆಲವರು ಇದೀಗ ಪೊಲೀಸರ ಮುಂದೆ ಹೇಳಿಕೊಂಡಿದ್ದಾರೆ. ದರ್ಶನ್ ಕಾರು ಇಲ್ಲಿಗೆ ಆಗಾಗ ಬಂದು ಹೋಗುತ್ತಿದ್ದುದನ್ನು ಕೆಲವು ಸ್ಥಳೀಯರು ಗಮನಿಸಿದ್ದಾರೆ. ದರ್ಶನ್‌ಗೆ ಇನ್ನೆಷ್ಟು ಕರಾಳ ಮುಖಗಳಿವೆ ಎಂದು ಪೊಲೀಸರೇ ಇದೀಗ ಬೆಚ್ಚಿ ಬೀಳುವಂತಾಗಿದೆ.

## ಕಾವೇರಿ ನೀರು ಹಂಚಿಕೆಯಲ್ಲಿ ಅನ್ಯಾಯ



**ಬೆಂಗಳೂರು:** ಕಾವೇರಿ ನದಿ ನೀರು ಹಂಚಿಕೆಗೆ ಸಂಬಂಧಿಸಿದಂತೆ ರಾಜ್ಯಕ್ಕೆ ಅನ್ಯಾಯವಾಗಿದೆ. ಮಳೆ ಪ್ರಮಾಣ, ಜನಸಂಖ್ಯೆ ಹೆಚ್ಚಳ ಮತ್ತಿತರ ವಿಚಾರಗಳ ಬಗ್ಗೆ ರಾಜ್ಯದಿಂದಲೂ ಪ್ರಬಲ ವಾದ ಮಂಡನೆಯಾಗಿಲ್ಲ. ಕೇಂದ್ರ ಸರ್ಕಾರ ಸಹ ರಾಜ್ಯಕ್ಕೆ ನ್ಯಾಯ ನೀಡುತ್ತಿಲ್ಲ ಎಂದು ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ವಿ.ಗೋಪಾಲಗೌಡ ಅಭಿಪ್ರಾಯಪಟ್ಟಿದ್ದಾರೆ. ಗಾಂಧಿ ಭವನದಲ್ಲಿ 'ಕಾಡುಮಲ್ಲೇಶ್ವರ ಗೆಳೆಯರ ಬಳಗ' ಸಹಯೋಗದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಅಭಿರುಚಿ ಪ್ರಕಾಶನ ಪ್ರಕಟಿಸಿದ ನಿವೃತ್ತ ಐಪಿಎಸ್ ಅಧಿಕಾರಿ ಸಿ.ಚಂದ್ರಶೇಖರ್ ಅವರ 'ಕಾವೇರಿ ವಿವಾದ ಒಂದು ಐತಿಹಾಸಿಕ ಹಿನ್ನೋಟ' ಕೃತಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ತಮಿಳುನಾಡಿಗೆ ಕಾವೇರಿ ನೀರು ಹಂಚಿಕೆ ಕುರಿತ ಒಪ್ಪಂದದಿಂದ ರಾಜ್ಯಕ್ಕೆ ಅನ್ಯಾಯವಾಗಿದೆ. ನ್ಯಾಯ ಮಂಡಳಿಗೆ ಸದಸ್ಯರ ಆಯ್ಕೆಯಲ್ಲೂ ನ್ಯಾಯ ಸಿಕ್ಕಿಲ್ಲ. ಹೆಚ್ಚುತ್ತಿರುವ ಜನಸಂಖ್ಯೆ, ಮಳೆಯ ಪ್ರಮಾಣ, ಪರಿಸರ ಬದಲಾವಣೆ, ಕೃಷಿಗೆ ಬೇಕಾಗುವ ನೀರಿನ ಲೆಕ್ಕ, ಆರ್ಥಿಕ ನೀತಿ ಹೀಗೆ ಹಲವು ವಿಚಾರಗಳಲ್ಲಿ ರಾಜ್ಯದಿಂದ ಪ್ರಬಲ ವಾದ ಮಂಡನೆಯಾಗಿಲ್ಲ. ಕೇಂದ್ರ ಸರ್ಕಾರ ಕೂಡ ರಾಜ್ಯಕ್ಕೆ ನ್ಯಾಯ ನೀಡುತ್ತಿಲ್ಲ ಎಂದರು. ಕಾವೇರಿ ನೀರಿನ ಬಿಕ್ಕಟ್ಟು ಕುರಿತು ಚರ್ಚಿಸಲು ಕಳೆದ ವರ್ಷ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆ ಕರೆದಿದ್ದರು. ಕಾವೇರಿ ವಿಚಾರದಲ್ಲಿ ವಾದ ಮಾಡಲು ವಕೀಲರಿಗೆ 142 ಕೋಟಿ ವೆಚ್ಚ ಮಾಡಲಾಗಿದೆ. ಈ ಹಣದಲ್ಲಿ ಮತ್ತೊಂದು ಅಣೆಕಟ್ಟೆ ನಿರ್ಮಿಸಬಹುದಾಗಿತ್ತು ಎಂದು ಸಭೆಗೂ ಮುನ್ನ ನಾನು ನೇರವಾಗಿಯೇ ಹೇಳಿದೆ. ಆಗ ಈ ವಿಚಾರವನ್ನು ಮತ್ತೊಮ್ಮೆ ಚರ್ಚಿಸೋಣ ಎಂದು ಸಿದ್ದರಾಮಯ್ಯ ಪ್ರತಿಕ್ರಿಯಿಸಿದರು ಎಂದು ನಿವೃತ್ತ ನ್ಯಾಯಮೂರ್ತಿ ವಿ.ಗೋಪಾಲಗೌಡ ಹೇಳಿದರು. ಲಾಭದ ಉದ್ದೇಶದಿಂದ ಜೀವಮಾನದಲ್ಲಿ ನಾನು ಯಾವುದೇ ತೀರ್ಪು ನೀಡಿಲ್ಲ, ರೈತರು, ಬಡವರು, ಶ್ರಮಿಕರ ಪರವಾಗಿ ಸದಾ ಕಾಲ ನಿಲ್ಲುತ್ತಿದ್ದೆ. ಆದರೆ ಇಂದಿನ ಪರಿಸ್ಥಿತಿ ಸಂಪೂರ್ಣ ಭಿನ್ನವಾಗಿದೆ. ತೀರ್ಪುಗಳನ್ನು ನೀಡಿದ ನ್ಯಾಯಮೂರ್ತಿಗಳು ಲೋಕಾಯುಕ್ತರು, ರಾಜ್ಯಪಾಲರಾಗುತ್ತಿದ್ದಾರೆ. ಹೇಗೆ ಇಂತಹ ಹುದ್ದೆಗಳಿಗೆ ನೇಮಕಗೊಳ್ಳುತ್ತಾರೆ ಎಂಬುದು ಎಲ್ಲರಿಗೂ ತಿಳಿದಿದೆ ಎಂದರು.

## ದರ್ಶನ್ ಅರೆಸ್ಟ್

ಆದರೆ ಪೊಲೀಸರು ಸಿಸಿಟಿವಿ ದೃಶ್ಯವನ್ನು ಆಧಾರಿಸಿ ಬಂಧಿಸಿದ್ದಾರೆ ಎಂಬ ವಿಚಾರ ಈಗ ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ.

ದರ್ಶನ್, ಪವಿತ್ರಗೌಡ ಇಬ್ಬರೂ ರೇಣುಕಾಸ್ವಾಮಿ ಮೇಲೆ ಹಲ್ಲೆ ನಡೆಸಿದ್ದಾರೆ. ಇಬ್ಬರೂ ಒಟ್ಟೊಟ್ಟಿಗೆ ಬಂದು ಹೋಗಿರುವ ದೃಶ್ಯಗಳು ಸೆರೆಯಾಗಿದೆ. ಸದ್ಯ ಪೊಲೀಸರ ಬಳಿಕ 30 ನಿಮಿಷದ ವಿಡಿಯೋವಿದ್ದು ಇದೇ ಪ್ರಕರಣಕ್ಕೆ ಪ್ರಮುಖ ಸಾಕ್ಷಿಯಾಗಲಿದೆ. ಸಿಸಿಟಿವಿ ವಿಚಾರವನ್ನು ಮೇಲಾಧಿಕಾರಿಗಳ ಗಮನಕ್ಕೆ ತಂದ ಬಳಿಕ ದರ್ಶನ್ ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಕೆಲ ದಿನಗಳ ಹಿಂದೆ ಪೊಲೀಸ್ ಅಧಿಕಾರಿಯೊಬ್ಬರು ಸ್ನೇಹಿತನ ಜೊತೆ ಮಾತನಾಡಿದ್ದರು. ಮಾತುಕತೆಯ ವೇಳೆ ಅಧಿಕಾರಿ ದರ್ಶನ್ ಮತ್ತು ಗ್ಯಾಂಗ್ ಬರೆ ಹಾಕಿಸಿ ಸಿಕ್ಕಾಪಟ್ಟೆ ಟಾರ್ಚರ್ ನೀಡಿದ್ದಾರೆ. ಎಲೆಕ್ಟ್ರಿಕ್ ಶಾಕ್ ನೀಡಿ ಕೋಳಿ ಎಸೆದಂತೆ ಎಸೆದು ಮಿನಿ ಟ್ರಕ್‌ಗೆ ಗುದ್ದಿ ಹತ್ಯೆ ಮಾಡಿದ್ದಾರೆ ಎಂದು ವಿವರಿಸಿದ್ದರು.

ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಪವಿತ್ರಾ ಗೌಡ ಮೊದಲ ಆರೋಪಿಯಾಗಿದ್ದರೆ ದರ್ಶನ್ ಎರಡನೇ ಆರೋಪಿಯಾಗಿದ್ದಾರೆ.

## ನಿವಾಸಕ್ಕೂ ಸಂಚಕಾರ

ಈಗ ಬಿಬಿಎಂಪಿ ತಡೆ ನೀಡಲಾಗಿರುವ ಪ್ರಕರಣಗಳನ್ನ ತೆರವು ಮಾಡಿಸಲು ಮುಂದಾಗಿದೆ. ಒಂದು ವೇಳೆ ಕೋರ್ಟ್ ತಡೆಯನ್ನು ತೆರವುಗೊಳಿಸಿದರೆ ದರ್ಶನ್ ಮನೆ ಏನಾಗಬಹುದು ಎಂಬ ಕುತೂಹಲ ಹೆಚ್ಚಾಗಿದೆ.

## ಸೂರ್ಯಗೂ ನೋಟೀಸ್, ವಿಚಾರಣೆ

ಚಿಕ್ಕಣ್ಣ, ಯಶಸ್ ಸೂರ್ಯ ಸೇರಿದಂತೆ ಇನ್ನೂ ಕೆಲ ನಟರಿಗೂ ಪೊಲೀಸರು ನೋಟೀಸ್ ನೀಡುವ ಸಾಧ್ಯತೆ ಇದೆ. ಮುಖ್ಯವಾಗಿ, ಅಂದು ದರ್ಶನ್ ಯಾರುಯಾರನ್ನು ಭೇಟಿಯಾಗಿದ್ದರೋ ಅವರೆಲ್ಲರೂ ಪೊಲೀಸ್ ತನಿಖೆಯನ್ನು ಎದುರಿಸಬೇಕಿದೆ. ಅಂದು ನಡೆಸಿದ ಮಾತುಕತೆಯನ್ನು ದರ್ಶನ್, ರೇಣುಕಾಸ್ವಾಮಿ ವಿಚಾರ ಎತ್ತಿದ್ದರೇ ಎಂಬುದು ತನಿಖೆಯ ಮುಖ್ಯ ವಿಚಾರವಾಗಿರಲಿದೆ.

**ಸಾಕ್ಷಿದಾರರಾಗಿ ಬಳಕೆ:** ದರ್ಶನ್ ಅಂಡ್ ಗ್ಯಾಂಗ್‌ನಿಂದ ನಡೆದ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಬಂಧಿತರಲ್ಲದೇ ಹಲವು ಮಂದಿಯನ್ನು ಪೊಲೀಸರು ವಿಚಾರಣೆಗೊಳಪಡಿಸಿದ್ದು, ಅವರ ಹೇಳಿಕೆಗಳನ್ನು ದಾಖಲಿಸಿದ್ದಾರೆ. ಹೇಳಿಕೆ ನೀಡಿದವರನ್ನು ಸಾಕ್ಷಿಗಳಾಗಿ ಪರಿಗಣಿಸಲಾಗಿದೆ.

ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಆರೋಪಿಗಳು ಸೇರಿ 27ಕ್ಕೂ ಹೆಚ್ಚು ಮಂದಿಯ ವಿಚಾರಣೆ ನಡೆಸಲಾಗಿದೆ. 27 ಮಂದಿಯಲ್ಲಿ 17 ಮಂದಿ ಬಂಧಿತ ಆರೋಪಿಗಳು. ನಟ ದರ್ಶನ್, ಪವಿತ್ರ, ಗೌಡ ಸೇರಿ 17 ಮಂದಿ ಬಂಧಿತ ಆರೋಪಿಗಳು. ಇನ್ನುಳಿದ 10 ಮಂದಿಯನ್ನು ಸಾಕ್ಷಿಗಳಾಗಿ ಪರಿಗಣಿಸಲಾಗಿದೆ. ಸಾಕ್ಷಿಗಳು ಎಂದು ಈವರೆಗೆ 10 ಮಂದಿಯ ಹೇಳಿಕೆಯನ್ನು ಪೊಲೀಸರು ದಾಖಲಿಸಿದ್ದಾರೆ.

ಘಟನಾ ಸ್ಥಳದಲ್ಲಿ ಹಾಜರಿದ್ದ ಕೆಲವರು, ಬೇರೆಬೇರೆ ಕಡೆಗಳಲ್ಲಿ ಪ್ರತ್ಯಕ್ಷ ಪರೋಕ್ಷವಾಗಿ ಕಂಡು ಬಂದ ವ್ಯಕ್ತಿಗಳ ವಿಚಾರಣೆ ನಡೆಸಲಾಗಿದೆ. ಅವರನ್ನು ರೇಣುಕಾಸ್ವಾಮಿ ಕೊಲೆ ಸಂಬಂಧ ಸಾಕ್ಷಿಗಳು ಎಂದು ಪರಿಗಣಿಸಿ ಹೇಳಿಕೆ ದಾಖಲು ಮಾಡಲಾಗಿದೆ. ಶೆಡ್ ಬಳಿ ಇದ್ದ ಇನ್ನೂ ಕೆಲವರ ಹೇಳಿಕೆ ಪಡೆದುಕೊಂಡಿದ್ದಾರೆ. ಘಟನೆ ಹೇಗಾಯ್ತು, ಯಾರು ಯಾರು ಇದ್ದರು, ಎಷ್ಟು ಜನ ಸೇರಿದ್ದರು, ದರ್ಶನ್ ಎಷ್ಟು ಹೊತ್ತಿಗೆ ಬಂದಿದ್ದು, ಯಾವಯಾವ ಆಯುಧಗಳಿಂದ ಹಲ್ಲೆ ಮಾಡಿದರು, ಹೀಗೆ ಹಲವು ವಿಚಾರಗಳ ಬಗ್ಗೆ ಹೇಳಿಕೆ ದಾಖಲಿಸಿದ್ದಾರೆ. ಶೆಡ್‌ನ ಸಿಸಿ ಕ್ಯಾಮೆರಾ ಫೂಟೇಜ್‌ಗಳನ್ನು ದರ್ಶನ್ ಗ್ಯಾಂಗ್ ನಾಶ ಮಾಡಿರುವ ಹಿನ್ನೆಲೆಯಲ್ಲಿ, ಈ ಪ್ರತ್ಯಕ್ಷ ಸಾಕ್ಷಿಗಳ ಹೇಳಿಕೆ ಮಹತ್ವ ಪಡೆದುಕೊಳ್ಳಲಿದೆ.

**ಹಾಸ್ಯನಟ ಚಿಕ್ಕಣ್ಣಗೆ ಮೂರು ಗಂಟೆ ಪೊಲೀಸರ ಡ್ರಿಲ್:** ನಟ ದರ್ಶನ್ ಜೊತೆ ಕೊಲೆಯ ದಿನ ಪಾರ್ಟಿ ಮಾಡಿದ್ದ ಹಾಸ್ಯನಟ ಚಿಕ್ಕಣ್ಣ ಅವರನ್ನು ಪೊಲೀಸ್ ತನಿಖೆಯ ಉರುಳು ಸುತ್ತಿಕೊಂಡಿದ್ದು, ನಿನ್ನೆ ಮೂರು ಗಂಟೆಗಳ ಕಾಲ ಅವರನ್ನು ವಿಶೇಷ ತನಿಖಾ ತಂಡ ವಿಚಾರಣೆ ನಡೆಸಿದೆ. ವಿಚಾರಣೆ ಸಂದರ್ಭದಲ್ಲಿ, ಅದೇ ದಿನ ತಾನು ದರ್ಶನ್ ಜೊತೆ ಪಾರ್ಟಿ ಮಾಡಿದ್ದು ನಿಜ ಎಂದು ಚಿಕ್ಕಣ್ಣ ಒಪ್ಪಿಕೊಂಡಿದ್ದಾರೆ.

## ಗ್ಯಾಂಗ್ ವಾರ್

ಪುಂಡರು ತಾವು ಕೃತ್ಯವೆಸಗಿರುವ ದೃಶ್ಯವನ್ನು ವೀಡಿಯೋ ಮಾಡಿ ಅಟ್ಟಹಾಸ ಮೆರೆದಿದ್ದಾರೆ. ಉಡುಪಿ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮೊದಲನೇ ಪುಟದಿಂದ...

ಉಡುಪಿ ಜಿಲ್ಲೆಯಲ್ಲಿ ಒಂದೇ ತಿಂಗಳು ಅಂತರದಲ್ಲಿ ಮೂರು ಗ್ಯಾಂಗ್ ವಾರ್ ಪ್ರಕರಣ ವರದಿಯಾದವು. ಹೆಚ್ಚುತ್ತಿರುವ ಗ್ಯಾಂಗ್ ವಾರ್‌ನಿಂದ ಉಡುಪಿ ನಗರದ ಜನತೆ ಭಯ ಭೀತರಾಗಿದ್ದಾರೆ.

ಮೇ 18 ರಂದು ನಡೆದಿತ್ತು ಭಯಾನಕ ಗ್ಯಾಂಗ್ ವಾರ್: ಉಡುಪಿ ನಗರದ ಕುಂಜಿಬೆಟ್ಟುವಿನಲ್ಲಿ ಮೇ 18ರ ಮುಂಜಾನೆ 2 ಗಂಟೆಯ ಹೊತ್ತಿಗೆ ಕುಂಜಿಬೆಟ್ಟು ರಸ್ತೆಯಲ್ಲಿ ಟೀಂ ಗರುಡ ಎರಡು ತಂಡಗಳು ಗಾಂಜಾ ಅಮಲಿನಲ್ಲಿ ಸಿನಿಮೀಯ ರೀತಿಯಲ್ಲಿ ಕಾರು ಕಾಳಗ ನಡೆಸಿದ್ದವು. ಅಲ್ಲದೆ ತಲವಾರು ಹಿಡಿದು, ಬಡಿದಾಡಿಕೊಂಡಿದ್ದವು. ನಗರವೆಲ್ಲ ಸೈಲೆಂಟ್ ಆಗಿರುವ ಹೊತ್ತಿಗೆ ಕಾರುಗಳ ಗುದ್ದಾಟ, ತಲವಾರು ಹಿಡಿದು ಬಡಿದಾಡುತ್ತಿರುವುದನ್ನು ಸುತ್ತಲಿನ ಫ್ಲ್ಯಾಟ್ ನಿವಾಸಿಗಳು ಕಂಡು ಬೆಚ್ಚಿ ಬಿದ್ದಿದ್ದರು.

## ಅಬ್ ನಾರ್ಮಲ್ ಅನ್ನಿಸುತ್ತೆ

**ಸಿಎಂ ಮಧ್ಯಪ್ರವೇಶ ಮಾಡಿದಿರುವುದಕ್ಕೆ ಸ್ವಾಗತ:** ತಾನು ಅಜಾನು ಬಾಹು ಅಂತ ತೋರಿಸ್ಕೊಳ್ಳೋಕೆ ಹೋಗಿದ್ದಾನೆ. ರೇಣುಕಾ ಸ್ವಾಮಿಯ ಕಾಲು ಎತ್ತಿ ಹಿಡ್ಕೊಂಡು ಗೋಡೆಗೆ ಹೊಡೆಯೋದು ಎಂತ ವಿಕೃತಿ, ಮರ್ಮಾಂಗಕ್ಕೆ ಒದೆಯೋದು ಎಂತಾ ವಿಕೃತಿ. ಎದೆ ಮೂಳೆ ಮುರಿದಿದೆ. ಇಂತಹವನಿಗೆ ಕಠಿಣ ಶಿಕ್ಷೆಯಾಗಬೇಕು. ಇಂತಹವ ಬೆಂಬಲಕ್ಕೆ ಮುಖ್ಯಮಂತ್ರಿಗಳು ಹೋಗದೆ ಇರೋದಕ್ಕೆ ನಾನು ಸ್ವಾಗತ ಮಾಡ್ತೀನಿ. ಯಾವ ಮಂತ್ರಿಗಳು ಶಾಸಕರು ದರ್ಶನ್ ಪರ ನಿಲ್ಲಕೂಡದು ಎಂದು ಒತ್ತಾಯಿಸುತ್ತೇನೆ ಎಂದರು.

## ಕೋರ್ಟ್ ಮುಂದೆ ಹಾಜರು

ಒಂದು ಪ್ರಕರಣ ಮುಗಿದ ಬೆನ್ನಲ್ಲೆ ಮತ್ತೊಂದು ಪ್ರಕರಣದ ತನಿಖೆ ನಡೆಯುತ್ತಿದೆ. ಪ್ರತಿಯೊಂದು ಪ್ರಕರಣದಲ್ಲಿ ಕಸ್ಟಡಿಗೆ ಪಡೆದು ಪ್ರತ್ಯೇಕವಾಗಿ ತನಿಖೆ ನಡೆಸಲಾಗುವುದು. ಈಗ ಇನ್ನೊಂದು ಪ್ರಕರಣದಲ್ಲಿ ಕಸ್ಟಡಿಗೆ ಪಡೆದು ವಿಚಾರಣೆ ನಡೆಸಲು ಎಸ್‌ಐಟಿ ನಿರ್ಧರಿಸಿದೆ.

## ಬದಲಿಸಲಿದ್ದಾರೆ

ಅವರು ಮುಂಗಾರು ಅಧಿವೇಶನದ ನಂತರ ನಮ್ಮ ಪರವಾಗಿ ಬರುತ್ತಾರೆ.

2019 ರ ಚುನಾವಣೆಯಲ್ಲಿ ಅವಿಭಜಿತ ಎನ್‌ಸಿಪಿ 54 ವಿಧಾನಸಭಾ ಸ್ಥಾನಗಳನ್ನು ಗೆದ್ದಿತ್ತು. ಜುಲೈ 2023 ರಲ್ಲಿ ಪಕ್ಷವು ವಿಭಜನೆಯಾದಾಗ, ಅಜಿತ್ ಪವಾರ್ ನೇತೃತ್ವದ ಬಣವು ಸುಮಾರು 40 ಶಾಸಕರ ಬೆಂಬಲವನ್ನು ಪ್ರತಿಪಾದಿಸಿತು.

ವಿಧಾನಮಂಡಲದ ಮುಂಗಾರು ಅಧಿವೇಶನ ಜೂನ್ 27ರಂದು ಆರಂಭವಾಗಿ ಜುಲೈ 12ಕ್ಕೆ ಮುಕ್ತಾಯವಾಗಲಿದೆ. ಅಕ್ಟೋಬರ್‌ನಲ್ಲಿ ರಾಜ್ಯದಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಗೂ ಮುನ್ನ ನಡೆಯುವ ಕೊನೆಯ ಅಧಿವೇಶನ ಇದಾಗಿದೆ.

ಯಾರನ್ನು ಹಿಂತೆಗೆದುಕೊಳ್ಳಬೇಕು ಎಂಬುದರ ಕುರಿತು ಶರದ್ ಪವಾರ್ ಮತ್ತು ಇತರ ಎನ್‌ಸಿಪಿ (ಎಸ್‌ಪಿ) ನಾಯಕರು ನಿರ್ಧರಿಸುತ್ತಾರೆ ಎಂದು ಅಹ್ಮದ್‌ನಗರ ಜಿಲ್ಲೆಯ ಕರ್ಜತ್-ಜಮಖೇಡ್‌ನ ಶಾಸಕ ಹೇಳಿದ್ದಾರೆ.

ಅಜಿತ್ ಪವಾರ್ ಪಕ್ಷದ ಮೇಲೆ ಹಿಡಿತ ಯಾರದ್ದು ಮುಂದಿನ ಕೇಂದ್ರ ಸಚಿವ ಸಂಪುಟ ವಿಸ್ತರಣೆಯಾದಾಗ ಸಚಿವರಾಗುತ್ತೇನೆ ಎಂದು ಎನ್ ಸಿಪಿ ರಾಜ್ಯಸಭಾ ಸಂಸದ ಪ್ರಫುಲ್ ಪಟೇಲ್ ಹೇಳಿಕೆ ಬಗ್ಗೆ ಮಾತನಾಡಿದ ರೋಹಿತ್ ಇದರರ್ಥ ಅಜಿತ್ ಪವಾರ್ ಪಕ್ಷದ ಮೇಲೆ ಪ್ರಫುಲ್ಲ ಪಟೇಲ್ ಸಂಪೂರ್ಣ ಹಿಡಿತ ಸಾಧಿಸಿದ್ದಾರೆಯೇ ಎಂದು ಪ್ರಶ್ನಿಸಿದರು. ಅಜಿತ್ ಪವಾರ್ ಅವರು ಅಭಿವೃದ್ಧಿಗಾಗಿ ಬದಿಗೆ ಸರಿದಿದ್ದಾರೆಯೇ ಅಥವಾ ಇಡಿಯಿಂದ ಪ್ರಫುಲ್ ಪಟೇಲ್ ಅವರನ್ನು ರಕ್ಷಿಸಲು ಮುಂದಾಗಿದ್ದಾರೆಯೇ ಎಂಬುದನ್ನು ಪರಿಶೀಲಿಸಬೇಕಾಗಿದೆ.

ಶರದ್ ಪವಾರ್ ಬಣ ಎಂಟು ಸ್ಥಾನಗಳನ್ನು ಗೆದ್ದಿದೆ ಜೂನ್ 9 ರಂದು, ಹೊಸ ಎನ್‌ಡಿಎ ಸರ್ಕಾರದಲ್ಲಿ ಸ್ವತಂತ್ರ ಉಸ್ತುವಾರಿ ಹೊಂದಿರುವ ರಾಜ್ಯ ಸಚಿವರಾಗಿ ಪಟೇಲ್ ಅವರನ್ನು ಸೇರ್ಪಡೆಗೊಳಿಸುವ ಬಿಜೆಪಿಯ ಪ್ರಸ್ತಾಪವನ್ನು ಎನ್‌ಸಿಪಿ ತಿರಸ್ಕರಿಸಿತು. ಅಜಿತ್ ಪವಾರ್ ನೇತೃತ್ವದ ಪಕ್ಷವು ಬಿಜೆಪಿಯ ಮಿತ್ರಪಕ್ಷವಾಗಿದೆ ಮತ್ತು ಆಡಳಿತಾರೂಢ ಎನ್‌ಡಿಎಯ ಒಂದು ಘಟಕವಾಗಿದೆ. ಇತ್ತೀಚೆಗಷ್ಟೇ ನಡೆದ ಲೋಕಸಭೆ ಚುನಾವಣೆಯಲ್ಲಿ ಎನ್ ಸಿಪಿ (ಎಸ್‌ಪಿ) ಮಹಾರಾಷ್ಟ್ರದಲ್ಲಿ ಎಂಟು ಸ್ಥಾನಗಳನ್ನು ಗೆದ್ದುಕೊಂಡಿದ್ದರೆ, ಎನ್‌ಸಿಪಿ ಕೇವಲ ಒಂದು ಸ್ಥಾನವನ್ನು ಪಡೆದುಕೊಂಡಿದೆ.

## ಕೆಎಸ್‌ಆರ್‌ಟಿಸಿ ಚಿಂತನೆ

ಕೆಎಸ್‌ಆರ್ ಟಿಸಿ ವ್ಯಾಪ್ತಿಯಲ್ಲಿ ಬಸ್‌ಗಳ ಕೊರತೆ ನೀಗಿಸುವ ಸಲುವಾಗಿ ಹೊಸ ಬಸ್ ಖರೀದಿ ಮಾಡಲಾಗುತ್ತಿದೆ. ಸದ್ಯ 814 ಹೊಸ ಬಸ್ ಗಳ ಸೇರ್ಪಡೆ ಜತೆಗೆ 977 ಹಳೇ ಬಸ್‌ಗಳನ್ನು ಪುನಶ್ಚೇತನ ಮಾಡಲಾಗುತ್ತದೆ. 100 ಹೊಸ ಪಲ್ಲಕ್ಕಿ ಸ್ಲೀಪರ್ ಬಸ್‌ಗಳ ಸೇರ್ಪಡೆಗೆ ಸರ್ಕಾರ ಅನುಮತಿ ನೀಡಿದ್ದು, 20 ಅಂಬಾರಿ, 20 ಐರಾವತ ಉತ್ಸವ ಬಸ್‌ಗಳ ಖರೀದಿಗೆ ಅನುಮತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಸರ್ಕಾರ ಕೂಡ ಈಗಾಗಲೇ ಗ್ರೀನ್ ಸಿಗ್ನಲ್ ನೀಡಿದೆ. ಸಾಮಾನ್ಯ ಸಾರಿಗೆ ಬಸ್‌ಗಳ ಜತೆಗೆ ಪ್ರೀಮಿಯಂ ಬಸ್‌ಗಳ ಸಂಖ್ಯೆಯನ್ನೂ ಹೆಚ್ಚಿಸಲು ನಿಗಮ ಯೋಜನೆ ಮಾಡಿದೆ.

ಈ ಬಗ್ಗೆ ಬಸ್ ಪ್ರಯಾಣಿಕ ವಿನಯ್ ಮಾತನಾಡಿ, ನಾವು ಸಾಕಷ್ಟು ಬಾರಿ ಹೊಸ ಬಸ್ ಖರೀದಿಗೆ ಮನವಿ ಮಾಡಿದ್ದೀವೆ. ಹೊಸ ಬಸ್ ಖರೀದಿಗೆ ಮುಂದಾಗಿರುವುದು ತುಂಬಾ ಸಂತೋಷ ಆಗುತ್ತದೆ ಇದರಿಂದ ವಿದ್ಯಾರ್ಥಿಗಳಿಗೆ ಸಾಕಷ್ಟು ತುಂಬಾ ಉಪಯೋಗ ಆಗುತ್ತದೆ ಎಂದರು.

ಒಟ್ಟಿನಲ್ಲಿ ಶಕ್ತಿ ಯೋಜನೆಯಿಂದ ವಿದ್ಯಾರ್ಥಿಗಳಿಗೆ ಸರಿಯಾಗಿ ಬಸ್ ಸಿಗುತ್ತುಲ್ಲ ಎನ್ನುತ್ತಿದ್ದವರಿಗೆ ಹೊಸ ಬಸ್ ಆರಂಭ ಮಾಡುತ್ತಿರುವುದ ನಿಜಕ್ಕೂ ಸಂತೋಷದ ವಿಷಯ.

## ಶಸ್ತ್ರಾಸ್ತ್ರಗಳನ್ನು ಹೊಂದಿದೆ ಭಾರತ6

ಇದೇ ವೇಳೆ ಭಾರತ ಮತ್ತು ಪಾಕಿಸ್ತಾನ ಹೊಂದಿರುವ ಅಣ್ವಸ್ತ್ರಗಳ ಸಂಖ್ಯೆಯನ್ನೂ ವರದಿಯಲ್ಲಿ ಬಹಿರಂಗಪಡಿಸಲಾಗಿದೆ. ವರದಿಯ ಪ್ರಕಾರ ಭಾರತದಲ್ಲಿ 172 ಪರಮಾಣು ಸಿಡಿತಲೆಗಳಿವೆ. ಆದರೆ ಪಾಕಿಸ್ತಾನವು ಪ್ರಸ್ತುತ 170 ಪರಮಾಣು ಬಾಂಬ್‌ಗಳನ್ನು ಹೊಂದಿದೆ.

ಕಳೆದ ಒಂದು ವರ್ಷದಲ್ಲಿ ಭಾರತ 8 ಹೊಸ ಅಣುಬಾಂಬ್‌ಗಳನ್ನು ತಯಾರಿಸಿದೆ ಎಂದು ವರದಿ ಹೇಳಿದೆ. ಅದೇ ಸಮಯದಲ್ಲಿ, ಕಳೆದ ಒಂದು ವರ್ಷದಲ್ಲಿ ಪಾಕಿಸ್ತಾನವು ಯಾವುದೇ ಹೊಸ ನ್ಯೂಕ್ಲಿಯರ್ ಬಾಂಬ್ ತಯಾರಿಸಿಲ್ಲ.

ವಿಶ್ವಾದ್ಯಂತ ಸರಿಸುಮಾರು 12,121 ಪರಮಾಣು ಶಸ್ತ್ರಾಸ್ತ್ರಗಳಿವೆ ನಿರ್ಮಾಣ ಹಂತದಲ್ಲಿರುವ ಪರಮಾಣು ಶಸ್ತ್ರಾಸ್ತ್ರಗಳ ಸಂಖ್ಯೆಯೂ ಹೆಚ್ಚುತ್ತಿದೆ ಎಂದು ವರದಿ ಹೇಳಿದೆ. ಜನವರಿಯಲ್ಲಿ ವಿಶ್ವಾದ್ಯಂತ ಸುಮಾರು 12,121 ಪರಮಾಣು ಶಸ್ತ್ರಾಸ್ತ್ರಗಳಲ್ಲಿ, ಸುಮಾರು 9,585 ಸಂಭಾವ್ಯ ಬಳಕೆಗಾಗಿ ಮಿಲಿಟರಿ ದಾಸ್ತಾನುಗಳ ಭಾಗವಾಗಿದೆ. ಇವುಗಳಲ್ಲಿ, ಸುಮಾರು 3,904 ಪರಮಾಣು ಸಿಡಿತಲೆಗಳನ್ನು ಕ್ಷಿಪಣಿಗಳು ಮತ್ತು ವಿಮಾನಗಳಲ್ಲಿ ಸ್ಥಾಪಿಸಲಾಗಿದೆ.

ನಿರ್ಮಾಣ ಹಂತದಲ್ಲಿರುವ ಪರಮಾಣು ಶಸ್ತ್ರಾಸ್ತ್ರಗಳ ಸಂಖ್ಯೆಯೂ ಹೆಚ್ಚುತ್ತಿದೆ ಎಂದು ವರದಿ ಹೇಳಿದೆ. ಜನವರಿಯಲ್ಲಿ ವಿಶ್ವಾದ್ಯಂತ ಸುಮಾರು 12,121 ಪರಮಾಣು ಶಸ್ತ್ರಾಸ್ತ್ರಗಳಲ್ಲಿ, ಸುಮಾರು 9,585 ಸಂಭಾವ್ಯ ಬಳಕೆಗಾಗಿ ಮಿಲಿಟರಿ ದಾಸ್ತಾನುಗಳ ಭಾಗವಾಗಿದೆ. ಇವುಗಳಲ್ಲಿ, ಸುಮಾರು 3,904 ಪರಮಾಣು ಸಿಡಿತಲೆಗಳನ್ನು ಕ್ಷಿಪಣಿಗಳು ಮತ್ತು ವಿಮಾನಗಳಲ್ಲಿ ಸ್ಥಾಪಿಸಲಾಗಿದೆ.

## ಆತ್ಮಹತ್ಯೆ

ಸೋಮವಾರ (ಜೂ.17) ರಾತ್ರಿಯೂ ಮನೆಯಲ್ಲಿ ದಂಪತಿ ನಡುವೆ ಗಲಾಟೆಯಾಗಿದೆ.

ಕಲಹ ವಿಕೋಪಕ್ಕೆ ತಿರುಗಿದೆ, ಬಳಿಕ ಹರೀಶ್ ಪತ್ನಿ ಜಾಜಿಗೆ ನಾಡ ಬಂದೂಕಿನಿಂದ ಗುಂಡು ಹಾರಿಸಿ ಕೊಲೆ ಮಾಡಿದ್ದಾನೆ. ನಂತರ ಹರೀಶ್ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಅರೇಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ತೇರ್ಗಡೆ

ವಾಸ್ತವವಾಗಿ, ಜಮ್ಮುವಿನ ಮಂಗೋತ್ರ ಅವರು NEET 2022 ರಲ್ಲಿ ಅರ್ಹತೆ ಪಡೆದಿದ್ದರು. 90 ರ ದಶಕದ ಆರಂಭದಲ್ಲಿ ರಾಜ್ಯದ ಪಿಎಂಟಿಗೆ ಹಾಜರಾಗಿ ಮತ್ತು ಒಃಃಖ ಮಾಡಲು ಬಯಸಿದ್ದರು. ವೈದ್ಯಕೀಯ ಕಾಲೇಜಿನಲ್ಲಿ ಸೀಟು ಪಡೆಯಲು ಸಾಕಷ್ಟು ಅಂಕಗಳಿದ್ದರೂ, ಕೆಲವು ವೈಯಕ್ತಿಕ ಸಮಸ್ಯೆಗಳಿಂದಾಗಿ ಅದನ್ನು ಬಿಟ್ಟು ಮರುವರ್ಷ ಎಂಜಿನಿಯರಿಂಗ್ ಕೋರ್ಸ್‌ಗೆ ಸೇರಿಕೊಂಡರು. ಇದೀಗ ಮತ್ತೆ 2024ರಲ್ಲಿ ಪರೀಕ್ಷೆ ಬರೆದಿದ್ದು, ತನ್ನ ಮಗಳನ್ನು ಪ್ರೇರೇಪಿಸಲು ಮತ್ತು ಅವಳ ಬೋಧನಾ ಕೌಶಲ್ಯವನ್ನು ಸುಧಾರಿಸಲು 2024 ರಲ್ಲಿ ಎರಡನೇ ಬಾರಿಗೆ NEET ಪರೀಕ್ಷೆಯನ್ನು ಬರೆದಿದ್ದೇನೆ ಎಂದು ಮಂಗೋತ್ರ ಮಾಧ್ಯಮದವರೊಂದಿಗೆ ಹೇಳಿಕೊಂಡಿದ್ದಾರೆ.

''ನೀಟ್ ಪರೀಕ್ಷೆ ಬರೆಯುವ ಮುನ್ನ ನನ್ನ ವಯಸ್ಸಿನ ಬಗ್ಗೆ ನನಗೆ ಮೊದಲ ಅನುಮಾನಗಳಿದ್ದವು. ಆದರೆ 2021 ರಲ್ಲಿ ಒಡಿಶಾದಲ್ಲಿ 60 ವರ್ಷದ ವ್ಯಕ್ತಿ ಕೂಡ ನೀಟ್‌ಗೆ ಅರ್ಹತೆ ಪಡೆದಿದ್ದರು ಎಂದು ನನಗೆ ತಿಳಿಯಿತು. ಇದರೊಂದಿಗೆ ಮಗಳ ಜೊತೆಯಲ್ಲಿ ಪರೀಕ್ಷೆ ಬರೆಯಲು ತಯಾರಿ ನಡೆಸಿದೆ'' ಎಂದು ಹೇಳಿದ್ದಾರೆ.

# ಪೆಟ್ರೋಲ್-ಡೀಸೆಲ್ ಬೆಲೆ ಏರಿಕೆ ಹಿಂಪಡೆಯುವವರೆಗೂ ಹೋರಾಟ

**ಬೆಂಗಳೂರು:** ಪೆಟ್ರೋಲ್ ಬೆಲೆ ಲೀಟರ್ ಗೆ 3 ರೂ., ಡೀಸೆಲ್ ಬೆಲೆ 3.5 ರೂ. ಹೆಚ್ಚಳದ ಅವಿವೇಕದ ಮತ್ತು ಜನವಿರೋಧಿ ನಿರ್ಧಾರವನ್ನು ಕಾಂಗ್ರೆಸ್ ಸರ್ಕಾರ ಕೈಗೊಂಡಿದೆ. ಏರಿಸಿದ ದರ ಹಿಂಪಡೆಯುವವರೆಗೆ ಬಿಜೆಪಿ ಹೋರಾಟ ಮಾಡಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಘೋಷಣೆ ಮಾಡಿದ್ದಾರೆ.



ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಸಿದ ಸರ್ಕಾರದ ಕ್ರಮವನ್ನು ಖಂಡಿಸಿ ತಮ್ಮ ನೇತೃತ್ವದಲ್ಲಿ ಇಂದು ಸ್ವಾತಂತ್ರ್ಯ ಉದ್ಯಾನವನದ ಬಳಿ ನಡೆದ ಬೃಹತ್ ಪ್ರತಿಭಟನೆಯಲ್ಲಿ ಪ್ರತಿಭಟನಾಕಾರರನ್ನು ಉದ್ದೇಶಿಸಿ ಅವರು ಮಾತನಾಡಿದರು. ನಾವು ವಿಪಕ್ಷವಾಗಿ ಜನರ ಪರವಾಗಿ ಧ್ವನಿ ಎತ್ತಬೇಕಿದೆ. ರಾಜ್ಯದ ರೈತರು, ಬಡವರು, ಜನಸಾಮಾನ್ಯರಿಗೆ ನ್ಯಾಯ ಕೊಡಿಸುವ ಕೆಲಸವನ್ನು ನಾವು ನೀವೆಲ್ಲರೂ ಸೇರಿ ಮಾಡಬೇಕಿದೆ ಎಂದು ತಿಳಿಸಿದರು.

ಜನವಿರೋಧಿ ಸರ್ಕಾರ ಮತ್ತು ಜನವಿರೋಧಿ ಮುಖ್ಯಮಂತ್ರಿಗಳ ವಿರುದ್ಧ ರಾಜ್ಯಾದ್ಯಂತ ಬಿಜೆಪಿ ಹೋರಾಟ ಕೈಗೆತ್ತಿಕೊಂಡಿದೆ. ಲೋಕಸಭಾ ಚುನಾವಣೆಯಲ್ಲಿ 18ರಿಂದ 20 ಸ್ಥಾನ ಗೆಲ್ಲುವ ನಿರೀಕ್ಷೆ ಇಟ್ಟುಕೊಂಡಿದ್ದ ಕಾಂಗ್ರೆಸ್ ಮುಖಂಡರು ಫಲಿತಾಂಶ ಬಂದ ಬಳಿಕ ಹತಾಶರಾಗಿದ್ದಾರೆ. ಇನ್ನೊಂದೆಡೆ ಕಾಂಗ್ರೆಸ್ ಪಕ್ಷದ ಶಾಸಕರೇ ಗ್ಯಾರಂಟಿ ವಿರುದ್ಧ ಧ್ವನಿ ಎತ್ತುತ್ತಿದ್ದಾರೆ ಎಂದ ಅವರು, ವಿರೋಧ ಪಕ್ಷದಲ್ಲಿ ಇದ್ದಾಗ ಸಿದ್ದರಾಮಯ್ಯನವರಿಗೆ ಇದ್ದ ಜನಪರ ಕಾಳಜಿ ಮುಖ್ಯಮಂತ್ರಿಗಳಾದ ಬಳಿಕ ಎಲ್ಲಿ ಕಳೆದುಹೋಗಿದೆ ಎಂದು ಪ್ರಶ್ನಿಸಿದರು.

ಬಿಜೆಪಿ ಸರ್ಕಾರ ಇದ್ದಾಗ ಬಸವರಾಜ ಬೊಮ್ಮಾಯಿಯವರು ಮುಖ್ಯಮಂತ್ರಿ ಸ್ಥಾನದಿಂದ ಇಳಿಯುವಾಗ ರಾಜ್ಯದಲ್ಲಿ ಕಂದಾಯ ಮಿಗತೆ ಇತ್ತು. ಹೆಚ್ಚು ಸಾಲಗಳೂ ಇರಲಿಲ್ಲ. ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆದ ಒಂದೇ ಒಂದು ವರ್ಷದಲ್ಲಿ ಕರ್ನಾಟಕ ರಾಜ್ಯದ ಆರ್ಥಿಕ ಪರಿಸ್ಥಿತಿ ಸಂಪೂರ್ಣ ಹದಗೆಟ್ಟಿದೆ. ರಾಜ್ಯ ದಿವಾಳಿ ಅಂಚಿಗೆ ಹೋಗಿದೆ. ಹಾಗಿದ್ದರೆ ಯಾವ ಪುರುಷಾರ್ಥಕ್ಕೆ ಆಡಳಿತ ನಡೆಸುತ್ತಿದ್ದೀರಿ ಎಂದು ಪ್ರಶ್ನಿಸಿದರು. ಬೆಲೆ ಏರಿಕೆ, ಹಣದುಬ್ಬರದ ಕುರಿತು ತಿಳಿದಿದ್ದರೂ ಅನುಭವಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಲೋಕಸಭಾ ಚುನಾವಣೆ ನಂತರ ಪೆಟ್ರೋಲ್, ಡೀಸೆಲ್ ದರ ಹೆಚ್ಚಳದ ಈ ಜನವಿರೋಧಿ ನಿರ್ಧಾರ ಮಾಡಿದ್ದು, ಇದು ಅಕ್ಷಮ್ಯ ಅಪರಾಧ ಎಂದು ಆಕ್ಷೇಪ ವ್ಯಕ್ತಪಡಿಸಿದರು.

## ಅಪಹರಣ ಪ್ರಕರಣ: ಭವಾನಿ ರೇವಣ್ಣಗೆ ನಿರೀಕ್ಷಣಾ ಜಾಮೀನು ನೀಡಿದ ಕೋರ್ಟ್

**ಬೆಂಗಳೂರು:** ಲೈಂಗಿಕ ದೌರ್ಜನ್ಯಕ್ಕೆ ಒಳಗಾದ ಸಂತ್ರಸ್ತೆಯನ್ನು ಅಪರಹರಿಸಿದ ಪ್ರಕರಣದಲ್ಲಿ ಹೈಕೋರ್ಟ್ ಭವಾನಿ ರೇವಣ್ಣ ಅವರಿಗೆ ನಿರೀಕ್ಷಣಾ ಜಾಮೀನು ನೀಡಿದೆ.ಭವಾನಿ ರೇವಣ್ಣ ಅವರು ಮೈಸೂರು, ಹಾಸನ ಜಿಲ್ಲೆ ಪ್ರವೇಶಿಸದಂತೆ ಷರತ್ತು ವಿಧಿಸಿ ಏಕಸದಸ್ಯ ಪೀಠ ಆದೇಶ ಹೊರಡಿಸಿದೆ. ಪೊಲೀಸರ 85 ಪ್ರಶ್ನೆಗಳಿಗೆ ಭವಾನಿ ರೇವಣ್ಣ ಅವರು ಉತ್ತರಿಸಿದ್ದಾರೆ. ಹೀಗಾಗಿ ತನಿಖೆಗೆ ಸಹಕರಿಸಿಲ್ಲ ಎಂಬ ವಾದ ಒಪ್ಪಲಾಗುವುದಿಲ್ಲ. ಪೊಲೀಸರಿಗೆ ಬೇಕಾದಂತಹ ಉತ್ತರ ಕೊಡಬೇಕೆಂದಿಲ್ಲ. ಸಂತ್ರಸ್ತೆಗೆ ಊಟ ಬಟ್ಟೆ ಕೊಟ್ಟಿಲ್ಲವೆಂಬ ವಾದವನ್ನು ಒಪ್ಪಲಾಗುವುದಿಲ್ಲ. ಅಕ್ಕ (ಭವಾನಿ ರೇವಣ್ಣ) ಬಟ್ಟೆ ಊಟ ಕಳುಹಿಸಿದ್ದರೆಂದು ಸಂತ್ರಸ್ತೆ ಹೇಳಿಕೆಯಿದೆ ಎಂದು ನ್ಯಾ. ಕೃಷ್ಣ ಎಸ್ ದೀಕ್ಷಿತ್ ಅವರಿದ್ದ ಏಕಸದಸ್ಯ ಪೀಠ ಹೇಳಿತು.

**ಏನಿದು ಪ್ರಕರಣ:** ಪ್ರಜ್ವಲ್ ರೇವಣ್ಣ ಅವರದ್ದು ಅಂತ ಬಿಡುಗಡೆಯಾಗಿರುವ ಅಶ್ಲೀಲ ವಿಡಿಯೋದಲ್ಲಿ ನನ್ನ ತಾಯಿಯ ಚಿತ್ರವೂ ಇದ್ದು, ಇದೀಗ ಅವರು ಕಣ್ಮರೆಯಾಗಿದ್ದಾರೆ ಎಂದು ಮೇ 2ರ ತಡರಾತ್ರಿ ಮೈಸೂರಿನ ಕೆಆರ್ ನಗರ ಠಾಣೆಯಲ್ಲಿ ಸಂತ್ರಸ್ತೆ ಪುತ್ರ ದೂರು ನೀಡಿದ್ದರು. ಹೆಚ್ ಡಿ ರೇವಣ್ಣ, ಭವಾನಿ ರೇವಣ್ಣ ಮತ್ತು ಭವಾನಿ ರೇವಣ್ಣ ಸಂಬಂಧಿ ಬಾಬು ವಿರುದ್ಧ ದೂರು ದಾಖಲಾಗಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಎಸ್ ಐಟಿ ಅಧಿಕಾರಿಗಳು ಈಗಾಗಲೆ ಆರೋಪಿ ಬಾಬು ಅನ್ನು ಬಂಧಿಸಿದ್ದಾರೆ. ಪ್ರಕರಣದ ಮೊದಲ ಆರೋಪಿಯಾಗಿರುವ ಮಾಜಿ ಸಚಿವ ಹೆಚ್ ಡಿ ರೇವಣ್ಣ ಅವರನ್ನು ಎಸ್ ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡು, ವಿಚಾರಣೆ ನಡೆಸಿದ್ದರು.

ಹೆಚ್ ಡಿ ರೇವಣ್ಣ ಅವರಿಗೆ ಜನಪ್ರತಿನಿಧಿಗಳ ನ್ಯಾಯಾಲಯ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಸದ್ಯ ಹೆಚ್ ಡಿ ರೇವಣ್ಣ ಜಾಮೀನಿನ ಮೇಲೆ ಹೊರಗಡೆ ಇದ್ದಾರೆ. ಇದೇ ಪ್ರಕರಣದಲ್ಲಿ ಭವಾನಿ ರೇವಣ್ಣ ಅವರೂ ಕೂಡ ಎಸ್ ಐಟಿ ಅಧಿಕಾರಿಗಳ ವಿಚಾರಣೆಗೆ ಹಾಜರಾಗಬೇಕು. ಈ ಸಂಬಂಧ ಎಸ್ ಐಟಿ ಭವಾನಿ ರೇವಣ್ಣ ಅವರಿಗೆ ಎರಡೆರಡು ನೋಟಿಸ್ ಕೊಟ್ಟಿತ್ತು. ನೋಟಿಸ್ ನೀಡುತ್ತಿದ್ದಂತೆ ಭವಾನಿ ರೇವಣ್ಣ ಅವರು ವಿಚಾರಣಾ ನ್ಯಾಯಾಲಯಕ್ಕೆ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದರು. ಆದರೆ ನ್ಯಾಯಾಲಯ ನಿರೀಕ್ಷಣಾ ಜಾಮೀನು ಅರ್ಜಿ ತಿರಸ್ಕತಿಸಿತ್ತು.

### ಪ್ರತಿ ವಾರ್ಡ್‌ನಲ್ಲಿ ಸ್ವಚ್ಛತಾ ಕಾರ್ಯಕೈಗೊಂಡು ತ್ಯಾಜ್ಯ ವಿಲೇವಾರಿ ಮಾಡಲು ಸೂಚನೆ

# ಡೆಂಘೆ, ಕಾಲರಾ ನಿಯಂತ್ರಣಕ್ಕೆ ಮುನ್ನೆಚ್ಚರಿಕೆ ಕ್ರಮ

**ಮೈಸೂರು:** ಡೆಂಗ್ಯೂ ಮತ್ತು ಚಿಕೂನ್ ಗುನ್ಯಾ ಕಾಯಿಲೆಗಳನ್ನು ಹರಡುವ ಈಡಿಸ್ ಈಜಿಪ್ಟ್ ಸೊಳ್ಳೆಯ ಉತ್ಪತ್ತಿ ಹೆಚ್ಚಾಗಿರುವ ಕಾರಣ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ 65 ವಾರ್ಡ್‌ಗಳಲ್ಲಿ ಶೇಖರಣೆಗೊಂಡಿರುವ ತ್ಯಾಜ್ಯ ವಸ್ತುಗಳಾದ ಟೈರು, ಎಳೆನೀರಿನ ಚಿಪ್ಪು, ಮರದ ಪೊಟರೆಯಲ್ಲಿ ಹೂವಿನ ಕಪಾಟುಗಳಲ್ಲಿ, ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆನೀರು ಸಂಗ್ರಹವಾಗದಂತೆ ಎಚ್ಚರ ವಹಿಸುವುದು ಹಾಗೂ ಪ್ರತಿ ವಾರ್ಡ್‌ನಲ್ಲಿ ಸ್ವಚ್ಚತಾ ಕಾರ್ಯಕೈಗೊಂಡು ತ್ಯಾಜ್ಯ ವಿಲೇವಾರಿ ಮಾಡಿಸಬೇಕು.

ಡೆಂಗ್ಯೂ ರೋಗ ಉಲ್ಬಣಗೊಳ್ಳದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಸ್ಪೈಯಿಂಗ್ ಯಂತ್ರದ ಮೂಲಕ ಸೊಳ್ಳೆ ನಿಯಂತ್ರಣ ಔಷಧಿ ಸಿಂಪಡಣೆ ಮಾಡಿಸಬೇಕು. ಪ್ರತಿ ಮನೆಗಳಿಗೆ ಭೇಟಿ ನೀಡಿ ಡೆಂಗ್ಯೂ ರೋಗ ನಿಯಂತ್ರಣ ಕುರಿತಾದ ಕರಪತ್ರ ವಿತರಿಸಿ ಅರಿವು ಮೂಡಿಸಲು ಕ್ರಮ ಕೈಗೊಳ್ಳುವಂತೆ ವಲಯ ಆಯುಕ್ತರು, ಪರಿಸರ ಅಭಿಯಂತರರು ಹಾಗೂ ಆರೋಗ್ಯ ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ. ಒಂದು ವೇಳೆ ವಿಷಯವನ್ನು ಗಂಭೀರವಾಗಿ ಪರಿಗಣಿಸದೇ ನಿರ್ಲಕ್ಷ್ಯ ತೋರಿದಲ್ಲಿ ಸಂಬಂಧಪಟ್ಟ ಅಧಿಕಾರಿ ಅಥವಾ ಸಿಬ್ಬಂದಿ ವರ್ಗದವರನ್ನು ನೇರ ಹೊಣೆಗಾರರನ್ನಾಗಿ



> “ಡೆಂಗ್ಯೂ, ಚಿಕುನ್‌ಗುನ್ಯಾ ಹರಡದಂತೆ ಪಾಲಿಕೆ ವ್ಯಾಪ್ತಿಯಲ್ಲಿನ ಹೋಟೆಲ್ ಮಾಲೀಕರು ಮತ್ತು ಬೀದಿಬದಿ ವ್ಯಾಪಾರಸ್ಥರು ಪಾಲಿಕೆಯೊಂದಿಗೆ ಸಹಕರಿಸಬೇಕು.
> **-ಮಧು** ಪಾಲಿಕೆ ಆಯುಕ್ತೆ

ಮಾಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಸಾರ್ವಜನಿಕ ನೀರಿನ ಕೊಳಾಯಿ ಮತ್ತು ಕುಡಿಯುವ ನೀರನ್ನು ಸಂಗ್ರಹಿಸುವ ಸ್ಥಳವನ್ನು ಸ್ವಚ್ಚವಾಗಿಡುವುದು, ಕುದಿಸಿ ಆರಿಸಿದ ನೀರನ್ನೇ ಕುಡಿಯುವುದು, ಶುದ್ಧ ನೀರಿನ ಘಟಕದಲ್ಲಿನ ನೀರನ್ನು ಉಪಯೋಗಿಸುವುದು, ಹೋಟೆಲ್ ಗಳಲ್ಲಿ ಕಡ್ಡಾಯವಾಗಿ ಕುಡಿಯಲು ಬಿಸಿ ನೀರನ್ನು ಗ್ರಾಹಕರಿಗೆ ನೀಡುವುದು, ರಸ್ತೆ ಬದಿಯಲ್ಲಿ ಮಾರಾಟ ಮಾಡುವ ಪಾನಿಪುರಿ, ತಂಪು ಪಾನೀಯ ಮತ್ತು ಸೋಡಾ ಹಾಗೂ ಇತರೆ ಆಹಾರ ಪದಾರ್ಥಗಳನ್ನು ಸಾರ್ವಜನಿಕರು ಸಾಧ್ಯವಾದಷ್ಟು ಜಾಗೃತೆಯಿಂದ ಉಪಯೋಗಿಸುವುದು, ಊಟ ಮಾಡುವ ಮುನ್ನ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಸ್ವಚ್ಚಗೊಳಿಸಬೇಕು, ಹೋಟೆಲ್, ರೆಸ್ಟೋರೆಂಟ್, ಬೇಕರಿಗಳಲ್ಲಿ ಬಿಸಿಯಾದ ಆಹಾರ ಪದಾರ್ಥಗಳನ್ನೆ ಗ್ರಾಹಕರಿಗೆ ನೀಡುವುದು, ಹೋಟೆಲ್, ರೆಸ್ಟೋರೆಂಟ್, ಬೇಕರಿಗಳಲ್ಲಿ ತಿಂಡಿ ತಿನಿಸು ಮಾರಾಟ ಮಾಡುವ ಎಲ್ಲಾ ವ್ಯಾಪಾರಸ್ಥರು ಮತ್ತು ಹೋಟೆಲ್‌ನಲ್ಲಿ ಕೆಲಸ ನಿರ್ವಹಿಸುವ ಎಲ್ಲಾ ಕಾರ್ಮಿಕರು ಕಡ್ಡಾಯವಾಗಿ ಸುರಕ್ಷಾ ಧಿರಿಸುಗಳನ್ನು ಧರಿಸತಕ್ಕದ್ದು (ಹ್ಯಾಂಡ್‌ಗ್ಲೌಸ್, ಹೆಡ್‌ಕ್ಯಾಪ್, ಮಾಸ್ಕ್, ಏಪ್ರನ್), ರಸ್ತೆ ಬದಿಯಲ್ಲಿ ತೆರೆದ ರೀತಿಯಲ್ಲಿ ಮಾರಾಟ ಮಾಡುವ ಆಹಾರ ಪದಾರ್ಥ, ತಿಂಡಿ ತಿನಿಸುಗಳು, ಕತ್ತರಿಸಿದ ಹಣ್ಣು ಹಂಪಲುಗಳನ್ನು ತಿನ್ನಬಾರದು, ಹೊರಗಡೆ ಬಂದಾಗ ಬಾಟಲ್‌ಗಳಲ್ಲಿ ನೀರನ್ನು ಸಂಗ್ರಹಿಸಿ ಸಾಧ್ಯವಾದಷ್ಟು ಮನೆಯ ನೀರನ್ನು ಬಳಸುವುದು, ಸಿದ್ಧಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿಕೀಟಗಳು ಕುಳಿತುಕೊಳ್ಳದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವುದು.

## ಕೆರೆಗೆ ಹಾರಿ ಯುವಕ ಆತ್ಮಹತ್ಯೆ

**ಚಾಮರಾಜನಗರ:** ಯುವಕನೋರ್ವ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬರಗಿ ಕೆರೆಯಲ್ಲಿ ನಡೆದಿದೆ.



ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಆಲತ್ತೂರು ಗ್ರಾಮದ ದೇವರಾಜು(28) ಆತ್ಮಹತ್ಯೆಗೆ ಶರಣಾದ ಯುವಕ. ಈತ ಕುಡಿದ ಅಮಲಿನಲ್ಲಿ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಬರಗಿ ಕೆರೆಯಲ್ಲಿ ಮೃತದೇಹ ತೇಲುತ್ತಿರುವುದನ್ನು ಗಮನಿಸಿದ ಸ್ಥಳೀಯರು ಗುಂಡ್ಲುಪೇಟೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.ನಂತರ ಸ್ಥಳಕ್ಕಾಗಮಿಸಿದ ಪೊಲೀಸರು ಸ್ಥಳೀಯರ ಸಹಾಯದಿಂದ ಮೇಲೆತ್ತಿದ್ದಾರೆ. ತದ ನಂತರ ಮೃತದೇಹವನ್ನು ಪಟ್ಟಣದ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿ, ಮರಣೋತ್ತರ ಪರೀಕ್ಷೆ ನಡೆಸಿ ವಾರಸುದಾರರಿಗೆ ಹಸ್ತಾಂತರ ಮಾಡಿದ್ದಾರೆ. ಈ ಸಂಬಂಧ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೂಢನಂಬಿಕೆ ಬಿಟ್ಟು ರಕ್ತದಾನ ಮಾಡಿ

**ಮೈಸೂರು:** ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯಲ್ಲಿ ವಿಶ್ವ ರಕ್ತದಾನಿ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಲಯನ್ಸ್ ಬ್ಲಡ್ ಸೆಂಟರ್‌ನ ಡಾ.ಸುಷ್ಮ ಮಾತನಾಡಿ, ಮಹಿಳೆಯರು ಮೂಢನಂಬಿಕೆಯನ್ನು ಬಿಟ್ಟು ಪ್ರತಿ ಆರು ತಿಂಗಳಿಗೊಮ್ಮೆ ರಕ್ತದಾನ ಮಾಡಿದರೆ ಆರೋಗ್ಯವಾಗಿರುತ್ತಾರೆ. ರಕ್ತದಾನ ಮಾಡುವುದರಿಂದ ಹೃದ್ರೋಗ, ಥೈರಾಯಿಡ್ ಸಮಸ್ಯೆ ಹಾಗೂ ಇನ್ನಿತರೆ ಸಮಸ್ಯೆಗಳನ್ನು ತಡೆಯಲು ಪರಿಣಾಮಕಾರಿಯಾರಿತ್ತದೆ ಎಂದು ಮನವರಿಕೆ ಮಾಡಿಕೊಟ್ಟರು.

ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ ಪ್ರಭಾರಿ ನಿರ್ದೇಶಕ ಡಾ.ಕೆ.ಬಿ.ಚಂದ್ರಶೇಖರ್ ಮಾತನಾಡಿ, ಯುವ ಸಮುದಾಯ ರಕ್ತವನ್ನು ದಾನ ಮಾಡಲು ಸ್ವಯಂ ಪ್ರೇರಣೆಯಿಂದ ಮುಂದಾಗಬೇಕು. ಶಿಬಿರಗಳಲ್ಲಿ ಭಾಗವಹಿಸಿ ರಕ್ತದಾನ ಮಾಡಿ ಬೇರೆಯವರ ಜೀವ ರಕ್ಷಣೆಗೆ ಮುಂದಾಗಬೇಕು ಎಂದರು.

ವಿಶ್ವ ರಕ್ತದಾನಿ ದಿನಾಚರಣೆಯನ್ನು 2004ರಿಂದ ಪ್ರತಿ ವರ್ಷ ಜೂ.14ಂದು ಆಚರಿಸುತ್ತೇವೆ. ರಕ್ತದಾನದಿಂದ ಬೇರೊಬ್ಬರ ಜೀವ ಉಳಿಸುವ ಮಹಾಕಾಯಕದಲ್ಲಿ ನಾವು ಭಾಗಿಯಾಗಬೇಕು. ರಕ್ತದಾನದಿಂದ ನಮ್ಮ ಆರೋಗ್ಯದ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಬದಲಾಗಿ ನಮ್ಮ ಆರೋಗ್ಯ ಸುಧಾರಿಸುತ್ತದೆ ಎಂದು ಸಲಹೆ ನೀಡಿದರು. 2024ನೇ ವರ್ಷದ ಘೋಷಣೆ–20 ವರ್ಷಗಳ ಸಂಭ್ರಮಾಚರಣೆ, ರಕ್ತದಾನಿಗಳಿಗೆ ಧನ್ಯವಾದಗಳು. ರಕ್ತದಾನ ಮಾಡಿದ ಭಾವಚಿತ್ರಗಳನ್ನು ತೆಗೆದು ತಾವು ಸಾಮಾಜಿಕ ಜಾಲತಾಣಗಳಲ್ಲಿ ಹರಡುವು ಮೂಲಕ ಬೇರೆಯವರಿಗೆ ಪ್ರೋತ್ಸಾಹಿಸಬೇಕು ಎಂದರು. ಕ್ಯಾಪ್ಟನ್ ಡಾ.ಸುರೇಶ್‌ಕುಮಾರ್ ಸೈನಿ ಮೂಲತಃ ಹರಿಯಾಣದವರು, ಸೇನೆಯಲ್ಲಿ ಸೇವೆ ಸಲ್ಲಿಸುತ್ತಾ 131 ಬಾರಿ ರಕ್ತದಾನ ಮಾಡಿದ್ದಾರೆ ಮತ್ತು 94 ಬಾರಿ ಪ್ಲೇಟ್‌ಲೆಟ್ಸ್ ದಾನ ಮಾಡಿ ದಾಖಲೆ ಮಾಡಿರುವುದನ್ನು ಶ್ಲಾಘಿಸಿದರು.

ಸುಮಾರು 30 ಜನರು ರಕ್ತದಾನ ಮಾಡಿದರು. ಕಾರ್ಯಕ್ರಮದಲ್ಲಿ ಗಾಯಿತ್ರಿ.ಕೆ, ಡಾ.ರಂಜನಿ, ಡಾ.ಕುಸುಮ, ಎಲ್.ವಿ.ರಾಮಕೃಷ್ಣ, ಡಾ.ಎಸ್.ಬಾಲಸರಸ್ವತಿ, ಡಾ.ಸಿ.ಎಂ.ಬಾಬು, ಎಂ.ಎನ್.ಚಂದ್ರಶೇಖರ್ ಹಾಗೂ ಲಯನ್ಸ್ ಬ್ಲಡ್ ಸೆಂಟರ್ ಜೀವಧಾರೆಯ ಮಹಾಂತೇಶ್ ಮತ್ತು ಸುಮಾರು 150ಕ್ಕೂ ಹೆಚ್ಚು ವಿಜ್ಞಾನಿಗಳು, ಅಧಿಕಾರಿಗಳು, ಯೋಜನೆಯ ಸಹಾಯಕರು, ಕಾರ್ಮಿಕರು ಭಾಗವಹಿಸಿದ್ದರು.

### ಲಕ್ಷವೃಕ್ಷ ಯೋಜನಾ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬೇಸರ

# ದುರಾಸೆಯಿಂದ ಕಾಡು ನಾಶ

**ಮೈಸೂರು:** ಮನುಷ್ಯನ ದುರಾಸೆಯಿಂದ ಕಾಡು ನಾಶವಾಗುತ್ತಿದ್ದು, ಇವುಗಳ ಸಂರಕ್ಷಣೆಗೆ ಸರ್ಕಾರದ ಜತೆಗೆ ಸಾರ್ವಜನಿಕರು ಸಹ ಕೈಜೋಡಿಸಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ರಾಜೀವ್ ಸ್ನೇಹ ಬಳಗ ಮತ್ತು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಬಿಸಿ ಟ್ರಸ್ಟ್ ಸಹಯೋಗದಲ್ಲಿ ನಗರದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಶನಿವಾರ ಆಯೋಜಿಸಿದ್ದ ಲಕ್ಷ ವೃಕ್ಷ ಯೋಜನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸಸ್ಯಗಳನ್ನು ಬೆಳೆಸುವುದು ನಮ್ಮೆಲ್ಲರ ಕರ್ತವ್ಯ ಹಾಗೂ ಒಳ್ಳೆಯ ಕೆಲಸವಾಗಿದ್ದು, ಪ್ರಕೃತಿ ನಮ್ಮ ಅವಶ್ಯಕತೆ ಪೂರೈಸಲಿವೆ ಹೊರತು ದುರಾಸೆಗಳನ್ನು ಅಲ್ಲ ಎಂದು ಗಾಂಧೀಜಿ ಹೇಳಿದ್ದರು. ಆದರೆ ಇತ್ತೀಚಿನ ದಿನಗಳಲ್ಲಿ ನಮ್ಮ ದುರಾಸೆಗಳಿಂದ ಕಾಡು ನಶಿಸುತ್ತಿದ್ದು, ನಮ್ಮ ಭೂ ಪ್ರದೇಶದ ಶೇ.30ರಷ್ಟು ಪ್ರದೇಶದಲ್ಲಿ ಕಾಡು ಇರಬೇಕು. ಆದರೆ, ಸದ್ಯದ ಪರಿಸ್ಥಿತಿಯಲ್ಲಿ ಅಂದಾಜು ಶೇ.19–20 ಅರಣ್ಯ ಪ್ರದೇಶವಿದ್ದು, ಅದರಲ್ಲೂ ಕೆಲವು ಜಿಲ್ಲೆಗಳಲ್ಲಿ ಇದಕ್ಕಿಂತಲೂ ಕಡಿಮೆ ಪ್ರಮಾಣದ ಅರಣ್ಯ ಪ್ರದೇಶವಿದೆ ಎಂದರು. ಗಾಳಿ, ನೀರು, ಭೂಮಿ, ಆಕಾಶ ಸ್ವಚ್ಛವಾಗಿದ್ದು ಗಿಡಗಳು ಚೆನ್ನಾಗಿ ಬೆಳೆದರೆ ನಮ್ಮ ಆರೋಗ್ಯವೂ ಸಹ ಉತ್ತಮವಾಗಿರಲಿದೆ. ನಾವೆಲ್ಲರೂ ಪ್ರಕೃತಿಯ ಒಂದು ಭಾಗವಾಗಿದ್ದು, ಪ್ರಕೃತಿಗಾಗಿ ನಾವು ಹೊರತು ನಮಗಾಗಿ ಪ್ರಕೃತಿಯಲ್ಲ, ಹೀಗಾಗಿ ಎಲ್ಲರೂ ಪ್ರಕೃತಿ, ಪರಿಸರ ಸಂರಕ್ಷಣೆ ಮಾಡಬೇಕಿದೆ. ಇತ್ತೀಚಿನ ದಿನಗಳಲ್ಲಿ ಜನಸಂಖ್ಯೆಯೂ ಹೆಚ್ಚಾಗಿದ್ದು, ನಾಡು ಸಹ ಬೆಳೆಯುತ್ತಿದೆ. ಪ್ರಕೃತಿಯಲ್ಲಿ ಸಮತೋಲನ ಇದ್ದಾಗ ಮಾತ್ರ ಜನಜೀವನ ಚೆನ್ನಾಗಿರಲಿದೆ. ಆದರೆ ಪ್ರಕೃತಿಯ ಅಸಮತೋಲನದಿಂದಾಗಿ ಇಂದು ಮಳೆ ಪ್ರಮಾಣ ಕಡಿಮೆಯಾಗಿ, ಉಷ್ಣಾಂಶ ಜಾಸ್ತಿಯಾಗಿದೆ. ಇದರಿಂದಾಗಿ ತಾಪಮಾನ ಹೆಚ್ಚಾಗಿದ್ದು, ಈ ಬಾರಿ ರಾಜ್ಯದಲ್ಲೂ ಬಿಸಿಲಿನ ತಾಪಮಾನ ಹೆಚ್ಚಾಗಿತ್ತು. ಈ ಎಲ್ಲ ಕಾರಣದಿಂದಾಗಿ ಗಿಡಗಳನ್ನು ಬೆಳೆಸಿ, ಪರಿಸರ ಸಂರಕ್ಷಣೆ ಮಾಡುವುದು



> “ಪಂಚಭೂತಗಳನ್ನು ಪವಿತ್ರವಾಗಿ ಇರಿಸಿದಷ್ಟು ಮನುಷ್ಯ ಸುರಕ್ಷಿತವಾಗಿ ಬದುಕುತ್ತಾನೆ. ಆದರೆ ಗಾಳಿ, ನೀರು ಎಲ್ಲವೂ ಹಾಳಾಗಿ ಜನರು ಸಂಕಷ್ಟ ಎದುರಿಸಿದ್ದು, ಈ ಬಗ್ಗೆ ಎಲ್ಲರೂ ಎಚ್ಚರಿಕೆವಹಿಸುವುದರ ಅಗತ್ಯವಿದೆ. ಪರಿಸರದಲ್ಲಿ ಸಮತೋಲನ ಕಾಪಾಡಲು ಹಾಗೂ ಉತ್ತಮ ನೀರು, ಗಾಳಿ ಪಡೆಯಲು ಮರಗಳನ್ನು ಉಳಿಸಬೇಕಿದೆ.
> **-ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ,** ಸುತ್ತೂರು ಮಠ.

ಮುಖ್ಯವಾಗಿದೆ. ಸರ್ಕಾರ ಪ್ರತಿವರ್ಷ ಗಿಡ ಬೆಳೆಸುತ್ತಿದ್ದು, ಈ ವರ್ಷ ಐದು ಕೋಟಿ ಗಿಡಗಳನ್ನು ಬೆಳೆಸುವ ಗುರಿ ಹೊಂದಿದೆ. ಸರ್ಕಾರದ ಕೆಲಸಕ್ಕೆ ಸಾರ್ವಜನಿಕರು ಸಹ ಕೈಜೋಡಿಸಿದರೆ ಪರಿಸರ ಸಂರಕ್ಷಣೆಯಾಗಿ ಮಳೆ, ಬೆಳೆ ಉತ್ತಮವಾಗಿರಲಿದೆ ಎಂದು ಹೇಳಿದರು.

ಮಿತ ಬಳಕೆ ಅಗತ್ಯ: ಅರಣ್ಯ ಸಚಿವ ಈಶ್ವರ ಖಂಡ್ರೆ ಮಾತನಾಡಿ, ಪ್ರಕೃತಿ, ಪರಿಸರ ಉಳಿದರೆ ಮಾತ್ರ ಮಾನವ ಕುಲ ಉಳಿಯಲು ಸಾಧ್ಯ. ಈ ನಿಟ್ಟಿನಲ್ಲಿ ನೈಸರ್ಗಿಕ ಸಂಪನ್ಮೂಲದ ಹಿತಮಿತ ಬಳಕೆ ಇಂದಿನ ಅಗತ್ಯವಾಗಿದೆ. ನಮ್ಮ ಪೂರ್ವಿಕರು ಗಿಡ, ಮರ, ಬೆಟ್ಟ, ಗುಡ್ಡ, ನದಿಗಳನ್ನು ಪೂಜಿಸುತ್ತಾ, ಬೆಟ್ಟದ ಮೇಲೆ ದೇವಾಲಯ ಕಟ್ಟಿ ಬೆಟ್ಟ ಗುಡ್ಡಗಳು ನಾಶವಾಗದಂತೆ ತಡೆದು ಪ್ರಕೃತಿ ಸಮತೋಲನ ಕಾಪಾಡಿದ್ದಾರೆ. ಪ್ರಕೃತಿ, ಪರಿಸರವನ್ನು ನಾವು ರಕ್ಷಿಸಿದರೆ, ಪ್ರಕೃತಿ, ಪರಿಸರ ನಮ್ಮನ್ನು

> “ನಿವೃತ್ತರ ಸ್ವರ್ಗ ಎನ್ನುತ್ತಿದ್ದ ಮೈಸೂರಿನಲ್ಲೂ ಇತ್ತೀಚೆಗೆ ತಾಪಮಾನ ಏರಿಕೆಯಾಗಿದೆ. ಕಾರ್ಬನ್ ಡೈಆಕ್ಸೈಡ್ ಮೂಲಕ ಪರಿಸರ ನಾಶವಾದರೆ ಮನುಷ್ಯನ ಜೀವಿತಾವಧಿ ಕಡಿಮೆ ಆಗಲಿದೆ. ಜನಸಂಖ್ಯೆ ನಿಯಂತ್ರಣ, ಹವಾಮಾನ ವೈಪರಿತ್ಯ ತಡೆಯುವುದು ಅತ್ಯಂತ ಅವಶ್ಯಕವಾಗಿದೆ. ಮೈಸೂರು ಇನ್ನೂ ಕಟ್ಟಿಲ್ಲ, ಜಿಲ್ಲೆಯ 140 ಕಿ.ಮೀ ವ್ಯಾಪ್ತಿಯಲ್ಲಿ ಗಿಡಗಳನ್ನು ನೆಡಲು ಅವಕಾಶವಿದೆ. ಸಂಘ ಸಂಸ್ಥೆಗಳು, ಪರಿಸರ ಪ್ರೇಮಿಗಳು ಇದಕ್ಕೆ ಮುಂದಾದರೆ ಮನುಷ್ಯ ಉತ್ತಮ ಜೀವನ ನಡೆಸಲು ಸಹಕಾರವಾಗಲಿದೆ.
> **-ಡಾ.ಎಚ್.ಸಿ.ಮಹದೇವಪ್ಪ** ಸಚಿವ.

ರಕ್ಷಿಸುತ್ತದೆ. ಇಂದು ಜಗತ್ತಿನ ಮುಂದಿರುವ ದೊಡ್ಡ ಸವಾಲು ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯಾಗಿದೆ. ಭೂಮಿಯನ್ನು ಜತನವಾಗಿ ಕಾಪಾಡಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವ ಜವಾಬ್ದಾರಿ ನಮ್ಮ ಮೇಲಿದೆ. ನಾವು ಪರಿಸರ, ಪ್ರಕೃತಿ ಉಳಿಸಬೇಕು. ಮನೆಯ ಮುಂದೆ ಒಂದು ಗಿಡ ನೆಟ್ಟು ಪೋಷಿಸುವ ಸಂಕಲ್ಪ ಮಾಡಬೇಕು. ಮುಖ್ಯಮಂತ್ರಿಗಳು ಮೈಸೂರು ನಗರವನ್ನು ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ನಗರ ಎಂದು ಘೋಷಿಸಿದ್ದಾರೆ. ನಮ್ಮ ಪರಿಸರ ಇಲಾಖೆ ಪ್ಲಾಸ್ಟಿಕ್ ಗೆ ಕಡಿವಾಣ ಹಾಕಲು ಪ್ರಯತ್ನಿಸುತ್ತಿದೆ. ಇದಕ್ಕೆ ಜನರೂ ಕೈಜೋಡಿಸಬೇಕು ಮತ್ತು ತಾವು ಏಕ ಬಳಕೆ ಪ್ಲಾಸ್ಟಿಕ್ ಬಳಸುವುದಿಲ್ಲ ಎಂಬ ಶಪಥ ಮಾಡಬೇಕು ಎಂದು ಕರೆ ನೀಡಿದರು. ಸಸ್ಯ ಸಂಭ್ರಮ ಕಿರುಹೊತ್ತಿಗೆ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಾಧನ ವರದಿಯನ್ನು ಸಚಿವ ಡಾ.ಎಚ್.ಸಿ. ಮಹದೇವಪ್ಪ ಲೋಕಾರ್ಪಣೆ ಮಾಡಿದರು. ಸಮಾರಂಭದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಕುಂದೂರು ಮಠದ ಶ್ರೀ ಶರತ್ ಚಂದ್ರ ಸ್ವಾಮೀಜಿ, ಸಚಿವ ಕೆ.ವೆಂಕಟೇಶ್, ಶಾಸಕ ತನ್ವಿರ್ ಸೇಠ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ರಾಜೀವ್ ಸ್ನೇಹ ಬಳಗದ ಮುಖ್ಯಸ್ಥ ಎಚ್.ವಿ.ರಾಜೀವ್ ಇತರರಿದ್ದರು.

## ಬಸವರಾಜ ಬೊಮ್ಮಾಯಿಗೆ ಅಭಿನಂದನೆ

**ಬೆಂಗಳೂರು:** ಮಾಜಿ ಸಿಎಂ, ಸಂಸದ ಬಸವರಾಜ ಬೊಮ್ಮಾಯಿ ಅವರನ್ನು ವಿಧಾನಸೌಧದಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷ ಎ.ಸಿ.ತಿಪ್ಪೇಸ್ವಾಮಿ ಮತ್ತು ಸಂಘದ ರಾಜ್ಯ ಉಪಾಧ್ಯಕ್ಷ, ಗದಗ ಕಿತ್ತೂರು ಕರ್ನಾಟಕ, ಪ್ರಾದೇಶಿಕ ಕನ್ನಡ ದಿನ ಪತ್ರಿಕೆ ಸಂಪಾದಕ ಮಂಜುನಾಥ ಬಸಪ್ಪ ಅಬ್ಬಿಗೆರಿ ನೇತೃತ್ವದಲ್ಲಿ ಅಭಿನಂದಿಸಲಾಯಿತು. ಇದೇ ವೇಳೆ ಮುಂದಿನ ತಿಂಗಳು ಗದಗದಲ್ಲಿ ಹಮ್ಮಿಕೊಳ್ಳಲಾಗಿರುವ ರಾಜ್ಯ ಮಟ್ಟದ ಪ್ರಥಮ ವಾರ್ಷಿಕ ಸಮ್ಮೇಳನ ಮತ್ತು ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷರಾದ ಜಿ.ವೈ.ಪದ್ಮ, ಮಹಮ್ಮದ್ ಯುನೂಸ್, ಕಾರ್ಯದರ್ಶಿಗಳಾದ ಹೆಚ್.ನರಸಿಂಹರಾಜು, ಅನೂಪ್ ಕುಮಾರ್, ಸಹ ಕಾರ್ಯದರ್ಶಿ ಡಾ.ಸ್ವಾಮಿ ಪ್ರಜಾಸಂದೇಶ, ಬೆಂಗಳೂರು ನಗರ- ಬೆಂಗಳೂರು ಗ್ರಾಮಾಂತರ ಜಿಲ್ಲೆಗಳ ಅಧ್ಯಕ್ಷ ಮಹೇಂದ್ರ ಉಪಸ್ಥಿತರಿದ್ದರು.



## ಬಿಎಸ್‌ವೈ ವಿರುದ್ಧ ಹಗೆತನದ ರಾಜಕಾರಣ

**ಮೈಸೂರು:** ರಾಜ್ಯ ಕಾಂಗ್ರೆಸ್ ಸರ್ಕಾರ ಬಿ.ಎಸ್.ಯಡಿಯೂರಪ್ಪ ವಿರುದ್ಧ ಹಗೆತನ ಮತ್ತು ಹೇಡಿತನದ ರಾಜಕಾರಣ ನಡೆಸುತ್ತಿದೆ ಎಂದು ಬಿಜೆಪಿ ಹಿರಿಯ ಮುಖಂಡ ಗುರುಪಾದ ಸ್ವಾಮಿ ಆರೋಪಿಸಿದರು.

ಲೋಕಸಭಾ ಚುನಾವಣೆ ಮುಗಿಯುತ್ತಿದ್ದಂತೆ ರಾಜ್ಯ ಸರ್ಕಾರ ಅಸಹ್ಯಕರ ರಾಜಕಾರಣ ಆರಂಭಿಸಿದೆ. ಪೋಕ್ಸೊ ಪ್ರಕರಣ ದಾಖಲಾಗಿರುವ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಅವರನ್ನು ಚುನಾವಣೆ ಸಂದರ್ಭದಲ್ಲಿ ಬಂಧಿಸಿದರೆ ಮತಗಳು ಬರುವುದಿಲ್ಲ ಎಂಬ ಮುಂದಾಲೋಚನೆಯಲ್ಲಿ ಸುಮ್ಮನಿದ್ದು, ಈಗ ಬಂಧಿಸಲು ಪೊಲೀಸ್ ಇಲಾಖೆಗೆ ಹೇಳಿ ವಾರೆಂಟ್ ಹೊರಡಿಸಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ದೂರಿದರು.



ಯಡಿಯೂರಪ್ಪ ಅವರ ಮೇಲೆ ಮಾ.4ರಂದು ಪೋಕ್ಸೊ ಪ್ರಕರಣ ದಾಖಲಾಗಿತ್ತು. ಈ ಬಗ್ಗೆ ಅಂದೇ ಗೃಹ ಸಚಿವ ಜಿ.ಪರಮೇಶ್ವರ್ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ ದೂರುದಾರ ಮಹಿಳೆ ಮಾನಸಿಕ ಅಸ್ವಸ್ಥೆ. ಆಕೆ ಹಿರಿಯ ಅಧಿಕಾರಿಗಳು ಸೇರಿದಂತೆ ಅಂದಾಜು 50 ಜನರ ಮೇಲೆ ಈಗಾಗಲೇ ಸುಳ್ಳು ಕೇಸುಗಳನ್ನು ದಾಖಲಿಸಿದ್ದಾಗಿ ಹೇಳಿದ್ದರು. ಆದರೆ, ಈಗ ಅವರು ಆ ಬಗ್ಗೆ ಮಾತನಾಡುತ್ತಿಲ್ಲ ಎಂದು ಹೇಳಿದರು.

ಸಂತ್ರಸ್ಥೆ ಪರವಾಗಿ ದೂರು ನೀಡಿದ್ದ ಮಹಿಳೆ ಈಗಾಗಲೇ ತೀರಿಕೊಂಡಿದ್ದಾರೆ. ಆದರೂ ಯಡಿಯೂರಪ್ಪ ಅವರನ್ನು ಮಣಿಸುವ ಸಲುವಾಗಿ ಸಂಬಂಧಗಳನ್ನು ಮುಂದಿಟ್ಟು ಬಂಧಿಸುವ ಯತ್ನ ನಡೆಸಲಾಗಿದೆ. ಈ ಪ್ರಕರಣದ ಬಗ್ಗೆ ದೂರು ದಾಖಲು ಆದಾಗಲೇ ತನಿಖೆ ನಡೆಸಬಹುದಿತ್ತು. ಅದನ್ನು ಬಿಟ್ಟು ವೈಯಕ್ತಿಕ ದ್ವೇಷಕ್ಕಾಗಿ ಯಡಿಯೂರಪ್ಪ ಅವರನ್ನು ಈಗ ಬಂಧಿಸಲು ಸರ್ಕಾರ ಮುಂದಾಗಿರುವುದು ಹೇಡಿತನ ಎಂದು ಟೀಕಿಸಿದರು.

ಇದೇ ರೀತಿ ಯಡಿಯೂರಪ್ಪನವರ ಮೇಲೆ ವೈಯಕ್ತಿಕ ದ್ವೇಷ ಸಾಧಿಸಲು ಹೊರಟರೆ ಸರಕಾರ ಮತ್ತು ಇಲಾಖೆಯ ಮೇಲೆ ಪಕ್ಷದ ವತಿಯಿಂದ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

## ಸಾತನೂರಿನಲ್ಲಿ ಕಾವೇರಿ ಹೋರಾಟ

**ಮೈಸೂರು:** ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ನಿರ್ಮಲಾ ಸೀತಾರಾಮನ್ ತಮ್ಮ ಸಚಿವ ಅಧಿಕಾರ ಬಳಸಿ ಕಾವೇರಿ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಬಗೆಹರಿಸಬೇಕು ಮತ್ತು ಮೇಕೆದಾಟು ಯೋಜನೆಯನ್ನು ಈ ಕೂಡಲೇ ಪ್ರಾರಂಭಿಸಿ ತಮ್ಮ ಅಧಿಕಾರದ ಸಾರ್ಥಕತೆಯನ್ನು ಧೈರ್ಯದಿಂದ ನಿಭಾಯಿಸಬೇಕೆಂದು ಬಿಜೆಪಿ ಮುಖಂಡ, ಕಾವೇರಿ ಕ್ರಿಯಾ ಸಮಿತಿಯ ಅಧ್ಯಕ್ಷ ಎಸ್.ಜಯಪ್ರಕಾಶ್ (ಜೆಪಿ) ಒತ್ತಾಯಿಸಿದರು. ಶನಿವಾರ ಕಾವೇರಿ ಕ್ರಿಯಾ ಸಮಿತಿಯ ಆಶ್ರಯದಲ್ಲಿ ಸಾತನೂರು ಸಮೀಪದ ಮೇಕೆದಾಟು ಅರಣ್ಯ ಇಲಾಖೆಯ ಟೋಲ್‌ಗೇಟ್ ಬಳಿ ಏರ್ಪಡಿಸಿದ್ದ ಪ್ರತಿಭಟನಾ ಧರಣಿಯಲ್ಲಿ ಮಾತನಾಡಿದ ಅವರು, ಸಂಸದರು ಮತ್ತು ಸಚಿವರು ತಮ್ಮ ಅಧಿಕಾರ ಮುಗಿದ ಮೇಲೆ ಪಶ್ಚಾತಾಪ ಪಡುವ ಬದಲು ಈಗಲೇ ರಾಜ್ಯದ ಜೀವನದಿ ಕಾವೇರಿ ನೀರಿನ ಸಮಸ್ಯೆಯನ್ನು ಸಂಪೂರ್ಣವಾಗಿ ಬಗೆಹರಿಸಬೇಕು ಎಂದು ಆಗ್ರಹಿಸಿದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಹೋರಾಟಗಾರ ಮೂಗೂರು ನಂಜುಡಸ್ವಾಮಿ, ರೈತ ಮುಖಂಡ ಸಂಪತ್ ಕುಮಾರ್, ತೇಜಸ್ ಲೋಕೇಶ್‌ಗೌಡ, ದೇವರಾಜ್, ನಜೀಬುಲ್ಲಾ ಸೇರಿದಂತೆ ಹಲವರು ಇದ್ದರು.




## ಅರ್ಜಿ ಆಹ್ವಾನ

**ರಾಮನಗರ:** 2024–25ನೇ ಸಾಲಿನ ರೇಷ್ಮೆ ಇಲಾಖೆ ಗೂಡಿನ ನಂತರದ ಚಟುವಟಿಕೆಯ ವಿವಿಧ ಕಾರ್ಯಕ್ರಮಗಳಡಿ ರೇಷ್ಮೆ ನೂಲು ಬಿಚ್ಚಾಣಿಕೆ ಸಂಬಂಧ ರೀಲಿಂಗ್ ಶೆಟ್ ನಿರ್ಮಾಣ, ಮಲ್ಟಿಎಂಡ್ ರೀಲಿಂಗ್ ಘಟಕ ಹಾಗೂ 6 ಬೇಸಿನ್ ಸುಧಾರಿತ ಕಾಟೇಜ್ ಬೇಸಿನ ರೀಲಿಂಗ್ ಘಟಕ ಮತ್ತು ರೀಲಿಂಗ್ ಘಟಕಗಳಿಗೆ ಹೆಚ್ಚುವರಿಯಾಗಿ ಬಾಯ್ಲರ್, 5 ಕೆ.ವಿ.ಎ ಜನರೇಟರ್, ಸೋಲಾರ್ ವಾಟರ್ ಹೀಟರ್, ಸೋಲಾರ್ ಪವರ್ ಜನರೇಟರ್, ಕೇಂದ್ರ ಪುರಸ್ಕೃತ ಸಿಲ್ಕ್ ಸಮಗ್ರ–2ರ ಯೋಜನೆಯಡಿ ಕಾಟೇಜ್ ಬೇಸಿನ್ ಉನ್ನತೀಕರಣ, ರೀಲ್ ಪರ್ಮಿಯೇಷನ್ ಛೇಂಬರ್, ರೀ–ರೀಲಿಂಗ್ ಯಂತ್ರೋಪಕರಣ, ಪ್ಯೂಪ್ ಪ್ರೊಸೆಸಿಂಗ್ ಘಟಕ, ನೀರು ಸಂಸ್ಕರಣಾ ಘಟಕ ಅಳವಡಿಕೆಗೆ ಸಹಾಯಧನದ ಕಾರ್ಯಕ್ರಮಗಳಿಗಾಗಿ (ಕೇಂದ್ರ ಪುರಸ್ಕೃತ ಸಿಲ್ಕ್ ಸಮಗ್ರ–2 ಯೋಜನೆಯಡಿ) ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ರೇಷ್ಮೆ ನೂಲು ಬಿಚ್ಚಾಣಿಕೆದಾರರು ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿಯನ್ನು ಇದೇ ಜೂ. 29ರ ವರೆಗೆ (ಸರ್ಕಾರಿ ರಜೆ ಹೊರತುಪಡಿಸಿ) ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ರೇಷ್ಮೆ ಸಹಾಯಕ ನಿರ್ದೇಶಕರು, ಗೂಡಿನ ನಂತರದ ಚಟುವಟಿಕೆ, ಗೌಸಿಯಾ ಇಂಜಿನಿಯರಿಂಗ್ ಕಾಲೇಜು ಎದುರು (ರೇಷ್ಮೆ ಭವನ) ಬಿ.ಎಂ. ರಸ್ತೆ, ರಾಮನಗರ ಈ ಕಚೇರಿಯನ್ನು ಸಂಪರ್ಕಿಸುವಂತೆ ರಾಮನಗರದ ಗೂಡಿನ ನಂತರದ ಚಟುವಟಿಕೆಗಳ ರೇಷ್ಮೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 21ರಂದು ಡಾಕ್ ಅದಾಲತ್

**ರಾಮನಗರ:** ಅಂಚೆ ಇಲಾಖೆ ವತಿಯಿಂದ ಇದೇ ಜೂ. 21 ರಂದು ಬೆಳಿಗ್ಗೆ 11 ಗಂಟೆಗೆ ಚನ್ನಪಟ್ಟಣದ ಅಂಚೆ ವಿಭಾಗೀಯ ಕಚೇರಿಯಲ್ಲಿ ಡಾಕ್ ಅದಾಲತ್ ಅನ್ನು ಆಯೋಜಿಸಲಾಗಿದೆ. ಅಂಚೆ ಇಲಾಖೆಯ ಸೇವೆಗೆ ಸಂಬಂಧಪಟ್ಟಂತೆ ಯಾವುದೇ ರೀತಿಯ ದೂರುಗಳನ್ನು ಸಲ್ಲಿಸಬಹುದಾಗಿದೆ. ದೂರುಗಳನ್ನು ಇದೇ ಜೂ. 19ರೊಳಗೆ ಪೂರ್ಣ ವಿಳಾಸದೊಂದಿಗೆ ಹಾಗೂ ಸೂಕ್ತ ದಾಖಲಾತಿಗಳೊಂದಿಗೆ ಚನ್ನಪಟ್ಟಣ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯ ವಿಳಾಸಕ್ಕೆ ಸಲ್ಲಿಸುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಅರ್ಹ ಕಲಾವಿದರಿಗೆ ಗುರುತಿನ ಚೀಟಿಯನ್ನು ನೀಡಲು ಅರ್ಜಿ ಆಹ್ವಾನಿಸಿದೆ. ಅರ್ಜಿಯೊಂದಿಗೆ ಕಲಾಪ್ರದರ್ಶನಗಳ ದಾಖಲೆಗಳು ಆಧಾರ್ ಕಾರ್ಡ್ ಪ್ರತಿ ಮತ್ತು ಇತರೆ ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ. ನಿಗಧಿತ ಅರ್ಜಿ ನಮೂನೆಯನ್ನು ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಂ 401, 3ನೇ ಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಆವರಣ, ರಾಮನಗರ ಇವರಿಂದ ಪಡೆದು ಜೂನ್ 29 ರೊಳಗೆ ಸಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ವಿದ್ಯುತ್ ವ್ಯತ್ಯಯ

**ರಾಮನಗರ:** 66 ಕೆವಿ ಕನಕಪುರ–ಚಿಕ್ಕೇನಹಳ್ಳಿ ಲೈನ್ ಮತ್ತು 66/11ಕೆವಿ ಅಳ್ಳಿಮಾರನಹಳ್ಳಿ ಮತ್ತು ಚಿಕ್ಕೇನಹಳ್ಳಿ ಉಪವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕಾ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವ ಹಿನ್ನೆಲೆಯಲ್ಲಿ ಇದೇ ಜೂ. 18ರ ಮಂಗಳವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಹೊಸಕೋಟೆ, ತಾಮಸಂದ್ರ, ಗೆಂಡೇಕೆರೆ, ಗಾಣಾಳು ಹಾಗೂ ಮಾಳಿಗೇಗೌಡನದೊಡ್ಡಿ ಗ್ರಾಮಗಳು ಮತ್ತು ಅಳ್ಳಿಮಾರನಹಳ್ಳಿ, ದೊಡ್ಡಮುದುವಾಡಿ, ಚಿಕ್ಕಮುದುವಾಡಿ ಹಾಗೂ ಕೊಟ್ಟಗಾಳು ಪಂಚಾಯಿತಿ ವ್ಯಾಪ್ತಿಯ ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂನ ಕನಕಪುರ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಪತ್ತೆಗೆ ಮನವಿ

**ರಾಮನಗರ:** ಬಿಡದಿ ಟೌನಿನ ದೀಪಕ್ ಥಿಯೇಟರ್ ಹಿಂಭಾಗದ ನಿವಾಸಿ ಉಪೇಂದ್ರ ಕುಮಾರ್ (38 ವರ್ಷ) ಎಂಬ ವ್ಯಕ್ತಿ ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ. ಚಹರೆಯ ವಿವರ:– 5.7 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ದುಂಡುಮುಖ, ಇವರು ಕಾಣೆಯಾಗುವಾಗ ಬಿಳಿ ಬಣ್ಣದ ಅರ್ಧ ತೋಳಿನ ಶರ್ಟ್, ಬಿಳಿ ಬಣ್ಣದ 3/4 ಚಡ್ಡಿ ಧರಿಸಿರುತ್ತಾರೆ. ಇವರು ಕಂಡು ಬಂದರೆ ಪೊಲೀಸ್ ಇನ್ಸ್‌ಪೆಕ್ಟರ್, ಬಿಡದಿ ಪೊಲೀಸ್ ಠಾಣೆ, ರಾಮನಗರ ಜಿಲ್ಲೆ ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

## ಆರೋಗ್ಯ ತಪಾಸಣೆ, ರಕ್ತದಾನ ಶಿಬಿರ

**ಮೈಸೂರು:** ನಗರದ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನಲ್ಲಿ ಜಿಎಸ್‌ಎಸ್ ಗ್ರೂಪ್, ಲಯನ್ಸ್ ಮೈಸೂರು ಮತ್ತು ಜೀವಧಾರ ಬ್ಲಡ್ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಆಯೋಜಿಸಲಾಗಿತ್ತು. ಹೆಚ್ಚಿನ ಸಂಖ್ಯೆಯಲ್ಲಿ ಜ್ಞಾನೋದಯ ಪಿಯು ಕಾಲೇಜಿನ ಪೋಷಕರು ಹಾಗೂ ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದರು. ಸುಮಾರು 25 ಯೂನಿಟ್ ರಕ್ತವನ್ನು ಕಾಲೇಜು ಸಿಬ್ಬಂದಿ, ಪೋಷಕರು, ಹಳೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ದಾನ ಮಾಡಿದರು. ಮುಖ್ಯ ಅತಿಥಿಯಾಗಿ ಶ್ರೀಹರಿ ದ್ವಾರಕ್‌ನಾಥ್ ಆಗಮಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ರಕ್ತದಾನದ ಅವಶ್ಯಕತೆ ಮತ್ತು ಅಗತ್ಯತೆ ಬಗ್ಗೆ ತಿಳಿಸಿಕೊಟ್ಟರು. ವಿವಿಧ ಆಸ್ಪತ್ರೆಗಳ ಮತ್ತು ಆರೋಗ್ಯ ಚಿಕಿತ್ಸಾಲಯಗಳ ವೈದ್ಯಕೀಯ ಬಂಧುಗಳು, ಜ್ಞಾನೋದಯ ಪಿಯು ಕಾಲೇಜಿನ ಆಡಳಿತ ಮಂಡಳಿಯ ರಾಮಚಂದ್ರ, ಎಸ್.ಕೆ.ಭಾಸ್ಕರ್, ಪ್ರಾಂಶುಪಾಲೆ ಪದ್ಮಾರವಿ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಪೋಷಕರು ಮತ್ತು ವಿದ್ಯಾರ್ಥಿಗಳು ಶಿಬಿರದಲ್ಲಿ ಉಪಸ್ಥಿತರಿದ್ದರು.



## ಅರಮನೆ ನಗರಿಯಲ್ಲಿ ಹಲಸಿನ ಘಮಲು

**ಮೈಸೂರು:** ಸಾಂಸ್ಕೃತಿಕ ನಗರಿಯಲ್ಲಿ ಬಿಸಿಲು ಕಳೆದು ಪೂರ್ವ ಮುಂಗಾರು ಆರಂಭವಾಗುತ್ತಿದ್ದಂತೆ ಹಲಸಿನ ಘಮಲು ಪಸರಿಸಿದೆ.

ಹರೆಮಲೆನಾಡು, ಮಲೆನಾಡು, ಬಯಲು ಸೀಮೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳ ಹಲಸಿನ ಹಣ್ಣುಗಳ ಮತ್ತು ಹಲಸಿನ ಖಾದ್ಯಗಳು, ಕುರುಕಲು ತಿಂಡಿಗಳ ಪ್ರದರ್ಶನ ಮತ್ತು ಮಾರಾಟದಲ್ಲಿ ಹಲಸಿನ ಘಮಲು ಸ್ವಾಗತಿಸುತ್ತಿದೆ. ನಗರದ ನಂಜರಾಜ ಬಹದ್ದೂರು ಛತ್ರದಲ್ಲಿ ಸಹಜ ಸಮೃದ್ಧಿ ಸಂಸ್ಥೆಯ ವತಿಯಿಂದ ಆಯೋಜಿಸಿರುವ ಎರಡು ದಿನಗಳ ಹಲಸಿನ ಮೇಳಕ್ಕೆ ಶನಿವಾರ ವಿಧ್ಯುಕ್ತವಾಗಿ ಚಾಲನೆ ದೊರೆತಿದ್ದು, ತರಹೇವಾರಿಯ ರುಚಿಕರವಾದ ಹಲಸಿನ ಹಣ್ಣುಗಳನ್ನು ಖರೀದಿ ಮಾಡಿ ವಿಶೇಷ ಖಾದ್ಯಗಳನ್ನು ಸವಿದು ಖುಷಿ ಪಡುತ್ತಿರುವ ದೃಶ್ಯಾವಳಿಗಳು ಕಂಡು ಬಂದವು.

ಅಂಟು ರಹಿತ ಹಲಸು, ತುಮಕೂರು ಮೂಲದ ಚಂದ್ರ ಹಲಸು, ಅತ್ಯಂತ ಜನಪ್ರಿಯ ಪಿರಿಯಾಪಟ್ಟಣದ ಕಗ್ಗುಂಡಿ ಹಲಸು, ಚಿಪ್ಸ್ ಮಾಡಲು ಹೇಳಿ ಮಾಡಿಸಿದ ತೂವಿನಕೆರೆ ಹಲಸು, ಸಿಂಗಪೂರ ಹಲಸು, ಚಿಕ್ಕಮಗಳೂರಿನ ರುದ್ರಾಕ್ಷಿ ಹಲಸು, ಜಾನಗೆರೆ ಹಲಸು, ತೂಬಗೆರೆ ಹಲಸು, ಲಾಲ್ ಬಾಗ್ ಮಧುರ ಹಲಸು, ಸದಾನಂದ ಹಲಸು, ಭೈರಸಂದ್ರ ಹಲಸು ಮುಂತಾದ ತಳಿಯ ಹಲಸುಗಳು ಮೇಳದಲ್ಲಿ ಲಭ್ಯ ಇವೆ. ಒಂದು ಕೆಜಿಗೆ 200 ರೂ.ನಂತೆ ಮಾರಾಟ ನಡೆಯುತ್ತಿದ್ದು, ಸಾಂಸ್ಕೃತಿಕ ನಗರಿಯ ಜನತೆ ಸೇರಿದಂತೆ ಜಿಲ್ಲೆಯಲ್ಲಿನ ಹಲಸು ಪ್ರಿಯರು ಸವಿಯುವ ಅವಕಾಶ ಒಂದೇ ಸೂರಿನಲ್ಲಿ ದೊರೆತಿದೆ.

ವಿಶೇಷ ಖಾದ್ಯಗಳು: ಕೇವಲ ಹಲಸಿನ ಹಣ್ಣಿನ ಮಾರಾಟವಲ್ಲದೇ ಹಸಲಿನಲ್ಲಿ ತಯಾರಿಸಿದ ರುಚಿಕರವಾದ ಖಾದ್ಯಗಳು ಮೇಳದಲ್ಲಿವೆ. ಹಲಸಿನ ಗೋಬಿಮಂಚೂರಿ, ಶಾವಿಗೆ, ಪೊಕ್ಕಡ, ಜಿಲೇಬಿ, ಪಾವ್‌ಬಜ್ಜಿ, ಐಸ್‌ಕ್ರೀಂ, ಹಲಸಿನ ಎಣ್ಣೆಗಾಯಿ, ಗುಜ್ಜೆ ಮಂಚೂರಿ, ಅಕ್ಕಿ ರೊಟ್ಟಿ, ಗುಜ್ಜೆ ವಡಪಾವ್ ಗಳು ರುಚಿಸಬಹುದಾಗಿದೆ. ಮೇಳದಲ್ಲಿ ಹಲಸಿನೊಂದಿಗೆ ಹಣ್ಣುಗಳ ರಾಜ



ಮಾವಿನ ಮಳಿಗೆಗಳು ಇವೆ. ಇದರಲ್ಲಿ ರಸಪುರಿ ಸೇರಿದಂತೆ ಅನೇಕ ಮಾವಿನ ತಳಿಗಳು ಸಿಗುತ್ತಿವೆ. ಜತೆಗೆ ತೋಟಗಾರಿಕೆ ಬೆಳೆಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ವಿವಿಧ ಜಾತಿಯ ಗಿಡಗಳನ್ನು ಮಾರಾಟ, ಸಾವಯವ ಮತ್ತು ಸಿರಿಧಾನ್ಯಗಳಿಂದ ತಯಾರಿಸಿದ ಕುರುಕಲು ತಿಂಡಿಗಳು, ಅನೇಕ ಮಾದರಿಯ ಅಕ್ಕಿ ಮೇಳದಲ್ಲಿ ಮಾರಾಟವಾಗುತ್ತಿದೆ.

ಮಳೆ ಪ್ರಮಾಣ ಕಡಿಮೆಯಾದಷ್ಟು ಹಲಸಿನ ಹಣ್ಣಿನ ಫಲ ರೈತರಿಗೆ ಸಿಗಲಿದೆ. ಹೀಗಾಗಿ ಈ ಬಾರಿ ಹೆಚ್ಚು ಹಲಸು ಸಿಕ್ಕಿವೆ. ಆದರೆ, ಕಳೆದ ಬಾರಿಗಿಂತ ಸಾರ್ವಜನಿಕರು ಕಡಿಮೆ ಇದ್ದು, ನಾಳೆ (ಭಾನುವಾರ) ಹೆಚ್ಚಿನ ನಿರೀಕ್ಷೆಯಲ್ಲಿದ್ದೇವೆ ಎಂದು ಮೇಳದ ನಿರ್ಮಾಣ ವ್ಯವಸ್ಥಾಪಕ ಮಂಜು ತಿಳಿಸಿದರು.

### ವಿಕೋಪ ತಡೆಗೆ ಮುಂದಾಗಲಿ | ಪ್ರೊ.ಎನ್.ಕೆ.ಲೋಕನಾಥ್ ಸಲಹೆ

# ಇತ್ತೀಚೆಗೆ ನೈಸರ್ಗಿಕ ವಿಕೋಪಗಳು ಹೆಚ್ಚಳ

**ಮೈಸೂರು:** ನಗರ ಪ್ರವಾಹ, ಭೂ ಕುಸಿತ ಸೇರಿದಂತೆ ನೈಸರ್ಗಿಕ ವಿಕೋಪ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿವೆ. ಇವುಗಳ ತಡೆಗೆ ಸರ್ಕಾರ, ಸಂಸ್ಥೆಗಳ ಕಣ್ತೆರೆಸುವ ಕೆಲಸವನ್ನು ಭೂ ವಿಜ್ಞಾನಿಗಳು ಮಾಡಬೇಕಿದೆ ಎಂದು ಮೈಸೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಹೇಳಿದರು.

ಮಾನಸಗಂಗೋತ್ರಿಯ ಭೂ ವಿಜ್ಞಾನ ಅಧ್ಯಯನ ವಿಭಾಗದಲ್ಲಿ ಗುರುವಾರ ಜಿಯೋಲಾಜಿಕಲ್ ಸೊಸೈಟಿಗೆ ಚಾಲನೆ ನೀಡಿ ಮಾತನಾಡಿ, ಜಾಗತಿಕ ತಾಪಮಾನ ಏರಿಕೆ, ಹವಾಮಾನ ಬದಲಾವಣೆ ನಮ್ಮ ಎದುರಿನ ವಾಸ್ತವ. ನಗರೀಕರಣ, ನೈಸರ್ಗಿಕ ಸಂಪನ್ಮೂಲಗಳ ಅನಿಯಮಿತ ಬಳಕೆಯಿಂದ ಭೂ ಸ್ವರೂಪದ ಬದಲಾವಣೆಯಾಗುತ್ತಿದೆ. ಈ ಸಂದರ್ಭ ಭೂ ವಿಜ್ಞಾನಿಗಳು ಸತ್ಯವನ್ನು ನಿಷ್ಠುರವಾಗಿ ಹೇಳಬೇಕು. ಯಾವುದೇ ಸಮಸ್ಯೆ ಇದ್ದರೂ ಅದನ್ನು ಸರ್ಕಾರ, ಸಂಘ ಸಂಸ್ಥೆಗಳ ಮುಂದೆ ತಂದು ಬಗೆಹರಿಸಲು ಪ್ರಯತ್ನಿಸಬೇಕೆಂದು ತಿಳಿಸಿದರು.

ಸರ್ಕಾರ, ಖಾಸಗಿ ಉದ್ಯಮಗಳಲ್ಲಿ ವಿಜ್ಞಾನಿಗಳು ಪ್ರಾಮಾಣಿಕವಾಗಿ ಜವಾಬ್ದಾರಿ ನಿಭಾಯಿಸಬೇಕು. ಪ್ರಕೃತಿಗೆ ಹಾನಿಯಾಗದಂತಹ ಸುಸ್ಥಿರ ಕ್ರಮಗಳ ಮಾರ್ಗೋಪಾಯಗಳನ್ನು ನೀಡಬೇಕು. ನೀರಿನ ಗುಣಮಟ್ಟ ಕಾಯ್ದುಕೊಳ್ಳಲು ಜಲಮೂಲಗಳನ್ನು ರಕ್ಷಿಸುವ ತುರ್ತಿನ ಬಗ್ಗೆ ಸರ್ಕಾರ, ಸಂಸ್ಥೆಗಳನ್ನು ಎಚ್ಚರಿಸುವ ಕೆಲಸ ಮಾಡಬೇಕು. ತುರ್ತು ಆದ್ಯತೆಗಳ ಕಡೆಗೆ ಹೆಚ್ಚಿನ ಗಮನ ನೀಡಬೇಕು ಎಂದು ತಿಳಿಸಿದರು.




ಜನಸಂಖ್ಯಾ ಹೆಚ್ಚಳ ಸವಾಲು ಒಡ್ಡಿದೆ. ಸಂಪನ್ಮೂಲಗಳ ಪುನರ್‌ಬಳಕೆ ಬಗ್ಗೆಯೂ ಸಂಶೋಧನೆ ನಡೆಸಬೇಕು. ಸುಸ್ಥಿರ ಸಮಾಜ ನಿರ್ಮಾಣ ಮಾಡಬೇಕು ಎಂದರು.

ನಗರಗಳು, ಅಂತರ್ಜಲ, ಕೃಷಿ, ಗಣಿಗಾರಿಕೆ, ಕೈಗಾರಿಕೆ ಅಭಿವೃದ್ಧಿ ಸೇರಿದಂತೆ ಎಲ್ಲ ವಲಯಗಳಿಗೂ ಭೂ ವಿಜ್ಞಾನಿಗಳ ನೆರವು ಅಗತ್ಯ ಎಂದರು.

ನಿವೃತ್ತ ಪ್ರಾಧ್ಯಾಪಕ ಎ.ಬಾಲಸುಬ್ರಹ್ಮಣ್ಯನ್, ಭೂ ವಿಜ್ಞಾನ ಓದಿದ ವಿದ್ಯಾರ್ಥಿಗಳಿಗೆ ವಿಪುಲ ಉದ್ಯೋಗವಕಾಶಗಳಿವೆ. ಜಿಯೊಲಾಜಿಕಲ್ ಸರ್ವೆ ಆಫ್ ಇಂಡಿಯಾ, ಎನ್‌ಎಂಡಿಸಿ, ಆಟೊಮಿಕ್ ಮಿನರಲ್ಸ್, ಕೋಲ್ ಇಂಡಿಯಾ, ಆಯಿಲ್ ಇಂಡಿಯಾ, ಎಂಜಿನಿಯರ್ಸ್ ಇಂಡಿಯಾ ಸೇರಿದಂತೆ ಹತ್ತಾರು ಕೇಂದ್ರ ಸರ್ಕಾರ ಸಾರ್ವಜನಿಕ ಉದ್ದಿಮೆಗಳಿವೆ. ಅವು ನುರಿತ ಭೂ ವಿಜ್ಞಾನಿಗಳನ್ನು ಬಯಸುತ್ತಿವೆ ಎಂದರು.

ಯುಪಿಎಸ್‌ಸಿ ಭೂ ವಿಜ್ಞಾನಿಗಳಿಗೆ ನಾಗರಿಕ ಸೇವಾ ಪರೀಕ್ಷೆಗಳನ್ನು ಆಯೋಜಿಸುತ್ತಿದೆ. ಜಿಎಸ್‌ಐ, ಸಿಜಿಡಬ್ಲ್ಯುಬಿ, ಒಎನ್‌ಜಿಸಿ, ಹಿಂದೂಸ್ತಾನ್ ಜಿಂಕ್ ಲಿಮಿಟೆಡ್, ಎಂಇಸಿಎಲ್ ಸೇರಿದಂತೆ ವಿವಿಧ ಉದ್ಯಮ ಹಾಗೂ ಸಂಸ್ಥೆಗಳಲ್ಲಿ ಕೆಲಸ ಪಡೆಯಬಹುದು ಎಂದು ಸಲಹೆ ನೀಡಿದರು. ಅಧ್ಯಯನ ವಿಭಾಗದ ಮುಖ್ಯಸ್ಥ ಪ್ರೊ.ಡಿ.ನಾಗರಾಜು, ಪ್ರೊ.ಬಿ.ವಿ.ಸುರೇಶ್ ಕುಮಾರ್, ಪ್ರೊ.ಮಾದೇಶ್, ಸಿಂಡಿಕೇಟ್ ಸದಸ್ಯರಾದ ಮಾದೇಶ್, ನಾಗರಾಜು, ಗೋಕುಲ್ ಗೋವರ್ಧನ್ ಹಾಜರಿದ್ದರು.

## ಯುವ ಸಂಘಟನೆ ಆಯೋಜನೆ

**ಬೆಂಗಳೂರು:** ಶ್ರೀ ಚಾಮರಾಜೇಂದ್ರ ಮೃಗಾಲಯವು 12 ರಿಂದ 18 ವರ್ಷದೊಳಗಿನ ವಿದ್ಯಾರ್ಥಿಗಳಿಗೆ 32ನೇ ಯುವ ಸಂಘಟನೆಯನ್ನು ಆಯೋಜಿಸಲು ಉದ್ದೇಶಿಸಿದ್ದು, ಕಾರ್ಯಕ್ರಮಗಳನ್ನು ಜುಲೈ 2024 ರಿಂದ ಜನವರಿ 2025ರ ವರೆಗೆ 25 ಭಾನುವಾರಗಳಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ನಡೆಸಲಾಗುವುದು. ಮೊದಲು ಬಂದವರಿಗೆ ಮೊದಲ ಆದ್ಯತೆ ಆಧಾರದ ಮೇಲೆ 60 ಮಂದಿ ವಿದ್ಯಾರ್ಥಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು. ಆಯ್ಕೆಯಾದ ಸದಸ್ಯರುಗಳಿಗೆ ವನ್ಯಪ್ರಾಣಿಗಳ ವೈವಿಧ್ಯತೆ, ಸಂರಕ್ಷಣೆ ಹಾಗೂ ಮೃಗಾಲಯ ಪರಿಸರದಲ್ಲಿ ಅವುಗಳ ನಿರ್ವಹಣೆ, ಪ್ರಾಣಿ ವರ್ತನೆ ಅಧ್ಯಯನದ ಬಗ್ಗೆ ಕಾಲಕಾಲಿಕ ತರಗತಿಗಳ ಮೂಲಕ ತಿಳಿಯಪಡಿಸಲಾಗುವುದು.

ಆಸಕ್ತಿಯುಳ್ಳವರು ಜೂನ್ 17 ರಿಂದ ಜೂನ್ 22 ರವರೆಗೆ ಮೃಗಾಲಯದ ಕಛೇರಿಯಿಂದ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಅರ್ಜಿಯನ್ನು ಜೂನ್ 22ರೊಳಗೆ ಕಚೇರಿಯ ಸಮಯದಲ್ಲಿ ಸಲ್ಲಿಸತಕ್ಕದ್ದು. ಭರ್ತಿ ಮಾಡಿದ ಅರ್ಜಿಯೊಂದಿಗೆ ಇತ್ತೀಚಿನ ಭಾವಚಿತ್ರ, ವಯಸ್ಸಿನ ಪುರಾವೆಗೆ ಆಧಾರ್ ಕಾರ್ಡ್ ಅಥವಾ ಜನನ ಪ್ರಮಾಣ ಪತ್ರದ ನಕಲು, ಶಿಬಿರದ ಶುಲ್ಕ ರೂ 2,500/-, ಪಾವತಿಸಬೇಕು. ಶಿಬಿರಕ್ಕೆ ಹಾಜರಾಗಲು ಆಯ್ಕೆಯಾದ ಸದಸ್ಯರಿಗೆ ಇ-ಮೇಲ್ ಮೂಲಕ ಸೂಚನೆ ಮತ್ತು ಹೆಚ್ಚಿನ ವಿವರಗಳನ್ನು ಕಳುಹಿಸಲಾಗುವುದು ಹೆಚ್ಚಿನ ಮಾಹಿತಿಗಾಗಿ, ಮೊಬೈಲ್ ಸಂಖ್ಯೆ: 9686668099 ಗೆ ಕರೆ ಮಾಡಬಹುದು ಅಥವಾ edumysore99@gmail.comಗೆ ಇ-ಮೇಲ್ ಕಳುಹಿಸಬಹುದು.

## ಇಂದು ವಿದ್ಯುತ್ ವ್ಯತ್ಯಯ

**ಮಂಡ್ಯ:** ಕೋಲಕಾರನದೊಡ್ಡಿ, ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಜೂನ್ 18 ರಂದು ಬೆಳಿಗ್ಗೆ 09 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ನಲ್ಲಿ ಅಡಚಣೆ ಉಂಟಾಗಲಿದೆ. ವ್ಯತ್ಯಯವಾಗಬಹುದಾದ ಪ್ರದೇಶಗಳು ತಗ್ಗಹಳ್ಳಿ, ಕೋಲಕಾರನದೊಡ್ಡಿ, ಹೆಮ್ಮಿಗೆ, ಸೂನಗನಹಳ್ಳಿ, ಪುರ, ಲೋಕಸರ, ಹಲುವಾಡಿ, ಕಮ್ನಾಯಕನಹಳ್ಳಿ, ಟಿ. ಮಲ್ಲಿಗೆರೆ, ಕಬ್ಬನಹಳ್ಳಿ, ತಿಮ್ಮನಹೊಸೂರು, ಬಿ.ಹೊಸೂರು , ಗೋಪನಹಳ್ಳಿ ಯಡಗನಹಳ್ಳಿ, ಮಾದರಹಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುವುದರಿಂದ ಕಂಪನಿಯೊಂದಿಗೆ ಸಹಕರಿಸಬೇಕೆಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೇಹದಾರ್ಢ್ಯತೆ ಪರಿಶೀಲನೆ

**ಬೆಂಗಳೂರು:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಚಾಲಕ-ಕಂ-ನಿರ್ವಾಹಕ ಹುದ್ದೆಗಳ ನೇರ ನೇಮಕಾತಿಗಾಗಿ ಹೊರಡಿಸಲಾಗಿದ್ದ ಅಧಿಸೂಚನೆಯನ್ವಯ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳಿಗೆ ಜೂನ್ 17 ರಂದು ನಿಗಧಿಪಡಿಸಲಾಗಿದ್ದ ಮೂಲ ದಾಖಲಾತಿ / ದೇಹದಾರ್ಢ್ಯತೆ ಪರಿಶೀಲನೆಯನ್ನು ಬಕ್ರೀದ್ ಹಬ್ಬದ ಹಿನ್ನಲೆಯಲ್ಲಿ ಸದರಿ ಪರಿಶೀಲನಾ ಕಾರ್ಯವನ್ನು ಜೂನ್ 18 ಕ್ಕೆ ಮುಂದೂಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಕೆಪಿಎಸಿ: 34 ಹುದೆಗಳ ಹೆಚ್ಚುವರಿ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು ಅಧಿಸೂಚಿಸಿರುವ ರಾಜ್ಯದ ವಿವಿಧ ಇಲಾಖೆಗಳಲ್ಲಿನ ಹೈದ್ರಬಾದ್-ಕರ್ನಾಟಕ ವೃಂದದ-201 ಕಿರಿಯ ಸಹಾಯಕರು/ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು ಜನವರಿ 9, 2023 ಹಾಗೂ ಹೆಚ್ಚುವರಿ ಪಟ್ಟಿಯನ್ನು ಮೇ 5, 2023 ರಂದು ಪ್ರಕಟಿಸಲಾಗಿರುತ್ತದೆ. ಪ್ರಸ್ತುತ ಸದರಿ ಹುದ್ದೆಗಳ ಹೆಚ್ಚುವರಿ ಆಯ್ಕೆಪಟ್ಟಿಗಾಗಿ 15 ಇಲಾಖೆಗಳಿಂದ ಸ್ವೀಕೃತವಾದ ಪ್ರಸ್ತಾವನೆಯ ಕಾಲಾನುಕ್ರಮದನುಸಾರ 34 ಹುದ್ದೆಗಳ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಹಾಗೂ ಕಟ್ಆಫ್ ಅಂಕಗಳ ಪಟ್ಟಿಯನ್ನು ಸಿದ್ಧಪಡಿಸಿ ಜೂನ್ 15 ರಂದು ಆಯೋಗದ ವೆಬ್ಸೈಟ್ http://kpsc.kar.nic.in ನಲ್ಲಿ ಪ್ರಕಟಿಸಲಾಗಿದೆ ಎಂದು ಆಯೋಗದ ಕಾರ್ಯದರ್ಶಿ ತಿಳಿಸಿದ್ದಾರೆ.

## ಹಿರಿಯ ಪತ್ರಕರ್ತ ಮದನಮೋಹನ್ ಮತ್ತಿಹಳ್ಳಿ ನಿಧನಕ್ಕೆ ಸಂತಾಪ

ಬೆಂಗಳೂರು: 'ದಿ ಹಿಂದು' ಪತ್ರಿಕೆಯಲ್ಲಿ ಸುಮಾರು ನಾಲ್ಕು ದಶಕಗಳಕಾಲ ಸುದೀರ್ಘವಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ಮದನ್ ಮೋಹನ್ ಅವರು ನಾಡಿನ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕ ಭಾಗದ ಸಮಸ್ಯೆ-ಸಂಕಷ್ಟಗಳ ಬಗ್ಗೆ ಬರೆಯುತ್ತಿದ್ದ ಮಾಹಿತಿಪೂರ್ಣ ಲೇಖನಗಳು, ಕಟು ವಿಮರ್ಶೆಯ ವರದಿ-ವಿಶ್ಲೇಷಣೆಗಳು ಸರ್ಕಾರಗಳ ಹಾಗೂ ಸಮಾಜದ ಕಣ್ತೆರುಸುವಂತಿದ್ದವು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮದನಮೋಹನ ಅವರ ಪತ್ರಿಕೋದ್ಯದ ಸೇವೆಯನ್ನು ಕೊಂಡಾಡಿದ್ದಾರೆ. ನಾಡಿನ, ಜಲವಿವಾದ ಮತ್ತು ಪಂಚಾಯತ್ ರಾಜ್ ಆಡಳಿತ ವ್ಯವಸ್ಥೆಯಲ್ಲಿ ಅಪಾರ ಆಸಕ್ತಿ ಹೊಂದಿದ್ದ ಮದನಮೋಹನ್ ಆಕ್ಷೇತ್ರಗಳ ಕುರಿತು ಆಳವಾದ ಅಧ್ಯಯನ ನಡೆಸಿ ಆ ಕುರಿತು ಹಲವಾರು ವಿಶೇಷ ಲೇಖನಗಳನ್ನು ಬರೆದಿದ್ದು, ಇಂದಿಗೂ ಜನಮಾನಸದಲ್ಲಿ ಹಸಿರಾಗಿವೆ. ಅವರ ಕಾರ್ಯಶೈಲಿ, ವೃತ್ತಿಬದ್ಧತೆ ಇಂದಿನ ಯುವ ಪತ್ರಕರ್ತರಿಗೆ ಪ್ರೇರಣೆಯಾಗಿದೆ ಎಂದು ಬಸವರಾಜ ಹೊರಟ್ಟಿ ಅವರು ತಿಳಿಸಿದ್ದು, ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ಮದನಮೋಹನ್ ಅವರ ಕುಟುಂಬದ ಸದಸ್ಯರಿಗೆ ಹಾಗೂ ಅವರ ಬಳಗಕ್ಕೆ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.



### ವಾಟ್ಸ್ಆಪ್ ಟಿಕೆಟ್ ಸೌಲಭ್ಯಕ್ಕೆ ಚಾಲನೆ, ಜಿರಾಫೆಗೆ ನಾಮಕರಣ

# ವಿಶ್ವಮಟ್ಟದ ಪ್ರವಾಸಿ ತಾಣವಾಗಲಿದೆ ಮೈಸೂರು ಮೃಗಾಲಯ

**ಮೈಸೂರು:** ಮೈಸೂರು ಮೃಗಾಲಯವನ್ನು ಅಭಿವೃದ್ಧಿಪಡಿಸಿ ವಿಶ್ವಮಟ್ಟದ ಪ್ರವಾಸಿ ತಾಣವನ್ನಾಗಿ ಮಾಡಲಾಗುವುದು ಎಂದು ಅರಣ್ಯ, ಪರಿಸರ ಜೀವ ಶಾಸ್ತ್ರ ಇಲಾಖೆಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದರು.

ಶನಿವಾರ ಮೃಗಾಲಯದಲ್ಲಿ ವಾಟ್ಸ್ ಅಪ್ ಟಿಕೆಟ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಮೃಗಾಲಯದ ವೀಕ್ಷಣೆಗೆ ಸಾಲಿನಲ್ಲಿ ಕಾಯಬೇಕಾಗಿತ್ತು. ಈಗ ವಾಟ್ಸಪ್‌ನಲ್ಲಿ ಮೃಗಾಲಯದ ವೀಕ್ಷಣೆ ಟಿಕೆಟ್ ಪಡೆಯಬಹುದಾಗಿದ್ದು ಈ ವ್ಯವಸ್ಥೆಗೆ ಚಾಲನೆ ನೀಡಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ನಂತರ ಮೃಗಾಲಯದ ಸಾವಯವ ತ್ಯಾಜ್ಯವನ್ನು ಎರೆಹುಳು ಗೊಬ್ಬರ ವನ್ನಾಗಿ ಪರಿವರ್ತಿಸುವ ಯೋಜನೆಗೆ ಚಾಲನೆ ನೀಡಿದರು. ನಂತರ ಮೃಗಾಲಯದಲ್ಲಿ ಜನಿಸಿದ ಜಿರಾಫೆ ಮರಿಗೆ ದಕ್ಷ ಎಂದು ನಾಮಕರಣ ಮಾಡಿದರು

ಅಧಿಕೃತ ವಾಟ್ಸ್ಆಪ್ ಟಿಕೆಟ್ ಸೌಲಭ್ಯ: ತೊಂದರೆ ರಹಿತ, ಸುಲಭವಾದ ಮೃಗಾಲಯದ ಭೇಟಿಗಾಗಿ ವೀಕ್ಷಕರು ಕೇವಲ ತಮ್ಮ ವಾಟ್ಸಪ್ ಖಾತೆಯಿಂದ ಮೊಬೈಲ್ ಸಂಖ್ಯೆ 9686668818ಕ್ಕೆ ಹಾಯ್ ಎನ್ನುವ ಸಂದೇಶ ಕಳುಹಿಸುವ ಮೂಲಕ ಟಿಕೆಟ್



ಪಡೆಯಬಹುದು. ಈ ಸೌಲಭ್ಯದಡಿ ಸಾರ್ವಜನಿಕರು ಮೃಗಾಲಯ ಟಿಕೆಟ್ ಪಡೆಯಲು ಸರದಿಯಲ್ಲಿ ನಿಲ್ಲುವುದನ್ನು ತಪ್ಪುತ್ತದೆ.

ವಿಸ್ತೃತ ಲೈವ್‌ಫೀಡ್ ಘಟಕದ ಕಾರ್ಯನಿರ್ವಹಣೆ: ಈ ಹಿಂದೆ ಮೃಗಾಲಯದ ಆವರಣದಲ್ಲಿ ಸಣ್ಣದಾಗಿ ಸ್ಥಾಪಿಸಿದ ಲೈವ್ ಫೀಡ್ ಘಟಕವನ್ನು ವಿಸ್ತಾರವಾಗಿ ನಿರ್ಮಾಣ ಮಾಡಲಾಗಿದೆ. ಮುಖ್ಯವಾಗಿ ಸರ್ಪಗಳ ಆಹಾರಕ್ಕಾಗಿ ಇಲಿ ಮತ್ತು ಮೊಲಗಳನ್ನು ಬೆಳೆಸಿ ಪೋಷಿಸಲಾಗುತ್ತಿದ್ದು, ಮೇಲಿನ ಜೀವಂತ ಪ್ರಾಣಿಗಳನ್ನು ರೋಗಮುಕ್ತ, ನೈರ್ಮಲ್ಯದ ಪರಿಸರದಲ್ಲಿ ಬೆಳಸಿ, ಉತ್ತಮ ಗುಣಮಟ್ಟ ಹಾಗೂ ಪೌಷ್ಟಿಕಾಂಕಾಂಶವುಳ್ಳ ಒದಗಿಸಲಾಗುತ್ತಿದೆ.

> **"ವಿದ್ಯುತ್ ಸ್ಪರ್ಶದಿಂದ ದಸರಾ ಆನೆ ಅಶ್ವತ್ಥಾಮ ಮೃತಪಟ್ಟಿದ್ದು, ಈ ಬಗ್ಗೆ ಸಮಿತಿ ರಚನೆ ಮಾಡಿ ತನಿಖೆ ನಡೆಸಿ ವರದಿ ಕೊಡುವಂತೆ ಸೂಚನೆ ನೀಡಲಾಗಿದೆ. ಜತೆಗೆ ಇಂತಹ ಪ್ರಕರಣಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು. ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ. ಈಗಾಗಲೇ ಅರ್ಜುನ ಆನೆ ಸ್ಮಾರಕದ ವಿನ್ಯಾಸ ರೂಪಿಸಲಾಗಿದೆ. ಮುಂದಿನ 15 ದಿನಗಳಲ್ಲಿ ಸ್ಮಾರಕ ನಿರ್ಮಾಣಕ್ಕೆ ಶಂಕು ಸ್ಥಾಪನೆ ಮಾಡುತ್ತೇವೆ. ಹಾಸನ ಮತ್ತು ಬಳ್ಳೆ ಎರಡು ಸ್ಥಳಗಳಲ್ಲಿಯೂ ಅರ್ಜುನನ ಸ್ಮಾರಕ ನಿರ್ಮಿಸುತ್ತೇವೆ.**
>
> **-ಈಶ್ವರ ಖಂಡ್ರೆ,** ಅರಣ್ಯ ಸಚಿವ

**ಜಿರಾಫೆಗೆ ನಾಮಕರಣ:** ಮೃಗಾಲಯದ ಭರತ್ ಮತ್ತು ಲಕ್ಷ್ಮೀ ಜಿರಾಫೆಗಳಿಗೆ ಜನಿಸಿದ ಗಂಡು ಜಿರಾಫೆಗೆ ದಕ್ಷ ಎಂದುನಾಮಕರಣ ಮಾಡಲಾಯಿತು.ವಿದೇಶಿ ಜಾತಿಯ ಈ ಪ್ರಾಣಿಯನ್ನು ಹೊಂದಿರುವ ಮೃಗಾಲಯವು ಹಲವಾರು ವರ್ಷಗಳಿಂದ ಇವುಗಳ ಸಂತಾನಾಭಿವೃದ್ಧಿ ಮಾಡಿರುವ ಹೆಗ್ಗಳಿಕೆಗೆ ಪಾತ್ರವಾಗಿದೆ.

ಯಾರೂ ರಾಯಭಾರಿ ಇಲ್ಲ: ಅರಣ್ಯ ಇಲಾಖೆಗೆ ಯಾರನ್ನು ರಾಯಭಾರಿಯಾಗಿ ನೇಮಿಸಿಲ್ಲ. ಅರಣ್ಯ ಇಲಾಖೆಗೆ ಯಾರು ರಾಯಭಾರಿ ಇಲ್ಲ. ಸುಮ್ಮನೆ ಏನೇನೋ ಹೇಳಬೇಡಿ ಎಂದು ದರ್ಶನ್ ಅರಣ್ಯ ಇಲಾಖೆ ರಾಯಭಾರಿಯಾಗಿದ್ದರು ಎನ್ನುವ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಆಂಧ್ರಪ್ರದೇಶದ ಸರ್ಕಾರದಿಂದ ಕುಮ್ಕಿ ಆನೆ ನೀಡುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಬಂದಿರುವುದು ನಿಜ. ಆದರೆ, ಈ ಬಗ್ಗೆ ಇನ್ನೂ ತೀರ್ಮಾನ ಮಾಡಿಲ್ಲ. ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ನಿರ್ಧಾರ ಮಾಡುತ್ತೇವೆ. ದಸರಾ ಆನೆಗಳನ್ನು ಮಾತ್ರ ಎಲ್ಲಿಗೂ ಕಳುಹಿಸುವುದಿಲ್ಲ. ಪರಿಸರವಾದಿಗಳು ಆತಂಕ ಪಡಬಾರದು ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಹೊರ ರಾಜ್ಯಗಳಲ್ಲಿ ಸಾಕಾನೆಗಳು ಕಡಿಮೆ ಇವೆ. ಹೀಗಾಗಿ ಮನವಿ ಸಲ್ಲಿಸಲಾಗಿದೆ. ಪುಂಡಾನೆಗಳ ಹಾವಳಿ ಹೆಚ್ಚಾಗಿರುವ ಕಾರಣ ಆನೆಗಳನ್ನು ಕಳುಹಿಸುವಂತೆ ಮನವಿ ಮಾಡಿದೆ. ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಆನೆಗಳನ್ನು ಕಳುಹಿಸುವ ತೀರ್ಮಾನ ಮಾಡುತ್ತೇವೆ. ದಸರಾ ಆನೆಗಳನ್ನು ಎಲ್ಲಿಗೂ ಕಳುಹಿಸುವುದಿಲ್ಲ ಎಂದು ಹೇಳಿದರು.

### ದಲಿತ ಕುಟುಂಬದ ಮೇಲೆ ದೌರ್ಜನ್ಯ ಎಸಗಿರುವ ಆರೋಪ

# ದಾವೆ ಇದ್ದರೂ ಬೆಳೆ ನಾಶ

**ಎಚ್.ಡಿ.ಕೋಟೆ (ನಿಂಗಣ್ಣ ಕೋಟೆ):** ಇಲ್ಲಿನ ತಹಶೀಲ್ದಾರ್, ಕಸಬಾ ರಾಜಸ್ವ ನಿರೀಕ್ಷಕ ಹಾಗೂ ಸಿಬ್ಬಂದಿ 20ಕ್ಕೂ ಹೆಚ್ಚು ಪೊಲೀಸರ ರಕ್ಷಣೆಯಲ್ಲಿ ಜೆಸಿಬಿ ಯಂತ್ರದಿಂದ ನ್ಯಾಯಾಲಯದಲ್ಲಿರುವ ಜಮೀನಿನಲ್ಲಿ ಹಾಕಿದ್ದ ಬೆಳೆ ನಾಶಪಡಿಸಿ ರಸ್ತೆ ಮಾಡುವ ಮೂಲಕ ಬಡ ದಲಿತ ಕುಟುಂಬದ ಮೇಲೆ ದೌರ್ಜನ್ಯ ಎಸಗಿರುವ ಘಟನೆ ನಡೆದಿದೆ.

ಘಟನೆಯಲ್ಲಿ ರಕ್ಷಣೆಗೆ ಬಂದಿದ್ದ ಪೊಲೀಸರು ಮಹಿಳೆಯರು ಎನ್ನದೇ ಎಳೆದಾಡಿದ ಪರಿಣಾಮ ಅಸ್ವಸ್ಥಗೊಂಡಿರುವ ಮಹಿಳೆಯರು ಎಚ್ .ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಪಡೆಯುತ್ತಿದ್ದಾರೆ.

ಘಟನೆ ವಿವರ: ಎಚ್.ಡಿ.ಕೋಟೆ ತಾಲೂಕಿನ ಕಸಬಾ ಹೋಬಳಿ ಕಟ್ಟೆಮನುಗನಹಳ್ಳಿ ಗ್ರಾಮದ ಸರ್ವೆ ನಂ.78 ರಲ್ಲಿ ಚಲುವಯ್ಯ ಬಿನ್ ಲೇ. ಮಾದಯ್ಯ ಅವರ ಕುಟುಂಬಕ್ಕೆ ಸೇರಿದ 4 ಎಕರೆ ಖುಷ್ಕಿ ಜಮೀನಿದ್ದು, ಈ ಕುಟುಂಬ ಸುಮಾರು 100 ವರ್ಷಗಳಿಂದ ಭೂಮಿ ಉಳುಮೆ ಮಾಡಿಕೊಂಡು ಜೀವನ ನಡೆಸುತ್ತಿದ್ದು, ಈ ಜಮೀನಿಗೆ ಸುಮಾರು 50 ವರ್ಷಗಳ ಹಿಂದೆಯೇ ಸರ್ಕಾರ ಸಾಗುವಳಿ ಪತ್ರ ನೀಡಿದೆ, ಈ ಜಮೀನಿನ ಮಧ್ಯೆ ನಾಲೆ ಬಂದ ಪರಿಣಾಮ ಒಂದೂವರೆ ಎಕರೆ ಭೂಮಿ ನಾಲೆಗೆ ಹೋಗಿದ್ದು ಇನ್ನುಳಿದ ಜಮೀನಿನಲ್ಲಿ ಉಳುಮೆ ಮಾಡಿಕೊಂಡು ಬರುತ್ತಿದ್ದಾರೆ.

ಈ ಜಮೀನು ಬಳಿ ಇದೆ ಸರ್ವೆ ನಂಬರ್‌ನಲ್ಲಿ 72 ಎಕರೆ ಸರ್ಕಾರಿ ಜಮೀನು, 48 ಗುಂಟೆ ಸರ್ಕಾರಿ ಬಂಜರು ಭೂಮಿ ಇದ್ದರೂ ಗ್ರಾಮದ ಪ್ರಭಾವಿಯೋರ್ವರ ಪ್ರಭಾವಕ್ಕೆ ಒಳಗಾದ ಕುಟುಂಬ ನೂರು ವರ್ಷಗಳಿಂದ ಭೂಮಿ ಉಳುಮೆ ಮಾಡುತ್ತಿರುವ ಬಡ ಕುಟುಂಬಕ್ಕೆ ರಸ್ತೆ ಸಂಬಂಧ ಯಾವುದೇ ನೋಟಿಸ್ ನೀಡದೆ ಆಗಾಗ ಜಮೀನಿಗೆ ಬಂದು ರಸ್ತೆ ಬಿಡುವಂತೆ ಇಲ್ಲ ಸಲ್ಲದ ತಗಾದೆ ಕಿರುಕುಳ ನೀಡುತ್ತಿದ್ದಾರೆ ಎಂದು ನೊಂದ ದಲಿತ ಕುಟುಂಬದ ಸದಸ್ಯರು ಆರೋಪಿಸಿದ್ದಾರೆ.

ಈ ಸಂಬಂಧ ಕುಟುಂಬ ನಮಗೆ ಸರ್ಕಾರದಿಂದ ಮಂಜೂರಾಗಿರುವ ಜಮೀನಲ್ಲಿ ತಿರುಗಾಡುವ ರಸ್ತೆ ಇಲ್ಲದಿದ್ದರೂ ಕಂದಾಯ ಇಲಾಖೆ ಮತ್ತು ಭೂ ಮಾಪನ ಇಲಾಖೆ ಅಧಿಕಾರಿಗಳು ಪಕ್ಕದಲ್ಲೇ ಇರುವ ಸರ್ಕಾರಿ ಬೀಳು ಮತ್ತು ಬಂಜರು ಭೂಮಿಯಲ್ಲಿ ರಸ್ತೆ ಪಡೆಯದೆ ನಮ್ಮ ಜಮೀನಿನಲ್ಲಿ ರಸ್ತೆಗೆ ಜಾಗ ಬಿಡುವಂತೆ ಪದೇ ಪದೇ ಬಂದು ಅಳತೆ ಮಾಡಿ ಬೆಳೆ ನಾಶ ಮಾಡಿ ದೌರ್ಜನ್ಯ ಎಸಗುತ್ತಿದ್ದಾರೆ ಎಂದು ಚಲುವಯ್ಯ ಕುಟುಂಬ ಆಕ್ರೋಶ ವ್ಯಕ್ತಪಡಿಸಿದೆ.

ಜಮೀನಿನಲ್ಲಿ ಬೆಳೆ ಇದ್ದಾಗ ಯಾವುದೇ ಆಳತೆ ಮಾಡುವಂತಿಲ್ಲ, ಜತೆಗೆ ಯಾವುದೇ ಸಾಗುವಳಿ ಭೂಮಿ ಅಳತೆಗೂ ಮುನ್ನ ಅಳತೆ ಮಾಡುವ ಜಮೀನು ಮಾಲೀಕರಿಗೆ ಆಜು ಬಾಜಿನ ಜಮೀನಿನ ಅಳತೆಗೆ ನೋಟಿಸ್ ನೀಡಿಲ್ಲ. ಮಾಲೀಕರಿಗೆ ನೋಟಿಸ್ ನೀಡಿ ಭೂಮಿ ಆಳತೆ ಮಾಡಬೇಕು, ಅದರೆ ಇಲ್ಲಿನ ತಹಸೀಲ್ದಾರ್ ಶ್ರೀನಿವಾಸ್, ರಾಜಸ್ವ ನಿರೀಕ್ಷಕ ವಿಶ್ವನಾಥ್, ಸರ್ವೆಯರ್ ಶಂಭು ಹೆಚ್ಚಿನ ಪೊಲೀಸರ ರಕ್ಷಣೆಗೆ ಕರೆತಂದು ನಮ್ಮಂತ ಬಡ ದಲಿತ ಕುಟುಂಬದ ಮೇಲೆ ದೌರ್ಜನ್ಯ ಮಾಡುತ್ತಿದ್ದಾರೆ ಎಂದು ಜಮೀನು ಮಾಲೀಕ ಚಲುವಯ್ಯ ಪುತ್ರ ವೈಕುಂಠರಾಜು ಕಿಡಿಕಾರಿದ್ದಾರೆ, ನ್ಯಾಯಾಲಯದಲ್ಲಿ ದಾವೆ ಹೂಡಿದ್ದೇವೆ, ಅದರೂ ನಮ್ಮ ಜಮೀನಿಗೆ ಬಂದು ಆಳತೆ ನೆಪದಲ್ಲಿ ಜೆಸಿಬಿ ಯಂತ್ರ ಬಳಸಿ ಹಾಕಿದ್ದ ಬೆಳೆ ನಾಶ ಮಾಡಿರುವ ಕಂದಾಯ ಅಧಿಕಾರಿಗಳು ಹಾಗೂ ಭೂ ಮಾಪನ ಇಲಾಖೆ ಸರ್ವೆಯರ್ ಮೇಲೆ ಸೂಕ್ತ ಕ್ರಮಕ್ಕೆ ಆಗ್ರಹಿಸಿದ್ದಾರೆ.

ಈ ಸಂಬಂಧ ಎಚ್.ಡಿ.ಕೋಟೆಯಲ್ಲಿ ಜಮೀನಿನ ಮಾಲೀಕರು ಹಾಗೂ ಕರ್ತವ್ಯ ಅಡ್ಡಿಪಡಿಸಿದ್ದಾರೆ ಎಂದು ಕಸಬಾ ರಾಜಸ್ವ ನಿರೀಕ್ಷಕರಿಂದ ದೂರು ಪ್ರತಿ ದೂರು ದಾಖಲಾಗಿದೆ.



### ಉಪವಾಸ ಸತ್ಯಾಗ್ರಹ ಎಚ್ಚರಿಕೆ:

**ಜಮೀನು ಮಾಲೀಕ ಚಲುವಯ್ಯ ಪತ್ನಿ ಜಯಮ್ಮ ಮಾತನಾಡಿ ನಮ್ಮ ಕುಟುಂಬ ಕಳೆದ ನೂರು ವರ್ಷದಿಂದ ಈ ಜಮೀನು ಉಳುಮೆ ಮಾಡುತ್ತಿದ್ದು, ನನ್ನ ಪತಿ ಚಲುವಯ್ಯ ಅವರಿಗೆ 50 ವರ್ಷದ ಹಿಂದೆ ಸರ್ಕಾರ ಸಾಗುವಳಿ ಮಂಜೂರು ಮಾಡಿದೆ. ನಮ್ಮ ಜಮೀನಿನ ಪಕ್ಕದಲ್ಲೇ 72 ಎಕರೆ ಸರ್ಕಾರಿ ಜಮೀನು ಇದ್ದರೂ, ಕಂದಾಯ ಇಲಾಖೆ ಮತ್ತು ಸರ್ವೆಯರ್ ಶಂಭು ನಮ್ಮ ಜಮೀನಿಗೆ ಪದೇ ಪದೇ ಬಂದು ನಿಮ್ಮ ಜಮೀನಿನಲ್ಲಿ ತಿರುಗಾಡುವ ರಸ್ತೆ ಇದೆ ಎಂದು ತಗಾದೆ ತಗೆದು ಆಳತೆ ನೆಪದಲ್ಲಿ ಬೆಳೆ ನಾಶ ಮಾಡುತ್ತಿದ್ದಾರೆ. ನ್ಯಾಯಾಲಯದಲ್ಲಿ ದಾವೆ ಇದೆ ಎಂದರೂ ಬಿಡದೆ ಜೆಸಿಬಿಯಿಂದ ಬೆಳೆ ನಾಶ ಮಾಡಿ ರಸ್ತೆ ಮಾಡಿದ್ದಾರೆ, ಸರ್ಕಾರ ಈ ಅಧಿಕಾರಿಗಳ ಮೇಲೆ ಕ್ರಮಕ್ಕೈಗೊಂಡು ನಮಗೆ ನ್ಯಾಯ ಕೊಡಿಸದಿದ್ದರೇ, ನಮ್ಮ ಕುಟುಂಬ ಜಿಲ್ಲಾಧಿಕಾರಿಗಳ ಕಚೇರಿ ಎದುರು ಉಪವಾಸ ಕುಳಿತು ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದ್ದಾರೆ. ಸುಮಾರು 50 ವರ್ಷಗಳಿಂದ ಸಾಗುವಳಿ ಜಮೀನನ್ನು ಉಳುಮೆ ಮಾಡಿಕೊಂಡು ಬರುತ್ತಿರುವ ದಲಿತ ರೈತ ಕುಟುಂಬದ ಜಮೀನಿಗೆ ತಿರುಗಾಡುವ ರಸ್ತೆ ಸಂಬಂಧ ಈ ಜಮೀನಿನಲ್ಲಿ ರಸ್ತೆ ಇಲ್ಲದಿದ್ದರೂ ಗ್ರಾಮದ ಪ್ರಭಾವಿ ವ್ಯಕ್ತಿಯ ಕುಮ್ಮಕ್ಕಿನಿಂದ ಪ್ರೇರೇಪಿತರಾದ ಇಲ್ಲಿನ ಕಂದಾಯ ಮತ್ತು ಭೂ ಮಾಪನ ಇಲಾಖೆ ಸರ್ವೆಯರ್‌ಗಳು ಜಮೀನಿಗೆ ಪದೇ ಪದೇ ಬಂದು ಕಿರುಕುಳ ನೀಡುತ್ತಿದ್ದರಿಂದ ಬೇಸತ್ತ ಕುಟುಂಬ ಈ ಸಂಬಂಧ ನ್ಯಾಯಾಲಯದಲ್ಲಿ ದಾವೆ ಹೂಡಿದ್ದರು. ಶನಿವಾರ**

# ಕಾಡಾನೆ ಹಾವಳಿ ತಡೆಗೆ ವೈಜ್ಞಾನಿಕ ಕಾರ್ಯಕ್ರಮ ರೂಪಿಸಿ

**ಮಡಿಕೇರಿ** :ವೈಜ್ಞಾನಿಕ ಕಾರ್ಯಕ್ರಮ ರೂಪಿಸಿ ಕಾಡಾನೆ ಹಾವಳಿ ನಿಯಂತ್ರಣಕ್ಕೆ ಮುಂದಾಗಬೇಕಿದೆ. ಈ ಸಂಬಂಧ ಸೋಲಾರ್ ತಂತಿಬೇಲಿ ಅಳವಡಿಸುವುದು, ಟ್ರಂಚ್‌ಗಳ ನಿರ್ಮಾಣ, ರೈಲ್ವೆ ಬ್ಯಾರಿಕೇಡ್... ಹೀಗೆ ಹಲವು ಕ್ರಮ ಕೈಗೊಳ್ಳಬಹುದು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದರು.

ಜಿಲ್ಲೆಯಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿದ್ದು, ಕಾಡಾನೆಗಳ ಉಪಟಳ ನಿಯಂತ್ರಿಸುವಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ನಗರದ ಜಿಲ್ಲಾಧಿಕಾರಿ ಅವರ ಕಚೇರಿಯಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಯಿತು.

ಕೊಡಗು ವನ್ಯಜೀವಿ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಕರ್ನಲ್(ನಿ) ಸಿ.ಪಿ.ಮುತ್ತಣ್ಣ ಮಾತನಾಡಿ, ಅರಣ್ಯ ಪ್ರದೇಶದಲ್ಲಿ ಕಾಡಾನೆಗಳ ಚಲನವಲನಗಳ ಬಗ್ಗೆ ದಿನನಿತ್ಯ ಗಮನಹರಿಸಿ ಸ್ಥಳೀಯರಿಗೆ ಮಾಹಿತಿ ನೀಡುವಂತಾಗಬೇಕು ಎಂದು ಕೋರಿದರು. ಕಾಡಾನೆ ಹಾವಳಿಯಿಂದ ಕೃಷಿಬೆಳೆ ಸಂರಕ್ಷಿಸುವಲ್ಲಿ ಅಗತ್ಯ ಕ್ರಮವಹಿಸಬೇಕಿದೆ. ಹಾಗೆಯೇ ಸ್ಥಳೀಯರಿಗೆ ಎಸ್‌ಎಂಎಸ್ ಮೂಲಕ ಮಾಹಿತಿ ನೀಡಿ, ಕಾಡಾನೆಗಳಿಂದ ರಕ್ಷಿಸಬೇಕಿದೆ ಎಂದು ಮುತ್ತಣ್ಣ ಸಲಹೆ ಮಾಡಿದರು.

ಹೆಚ್ಚಿನ ತೊಂದರೆ ನೀಡುವ ಕಾಡಾನೆಗಳನ್ನು ಬೇರೆಡೆ ಸ್ಥಳಾಂತರಿಸಬೇಕು. ವನ್ಯಪ್ರಾಣಿಗಳು ಹೆಚ್ಚಾಗಿರುವ ಪ್ರದೇಶಗಳಲ್ಲಿನ ಹಾಡಿಗಳಲ್ಲಿ ಶೌಚಾಲಯ ಸೇರಿದಂತೆ ಕನಿಷ್ಠ ಮೂಲ ಸೌಲಭ್ಯ ಕಲ್ಪಿಸಬೇಕಿದೆ ಎಂದು ಕರ್ನಲ್(ನಿ) ಮುತ್ತಣ್ಣ ನವಿ ಮಾಡಿದರು.

ನಾಗರಹೊಳೆ-ಬ್ರಹ್ಮಗಿರಿ ವ್ಯಾಪ್ತಿಯ ಕುಟ್ಟ ಬಳಿ ಆನೆ ಕಾರಿಡಾರ್ ನಿರ್ಮಿಸಿದಲ್ಲಿ ನಾಡಿಗೆ ಬರುವ ಕಾಡಾನೆಗಳನ್ನು ತಡೆಯಬಹುದಾಗಿದೆ ಎಂದು ಕರ್ನಲ್(ನಿ) ಮುತ್ತಣ್ಣ ಅಭಿಪ್ರಾಯಪಟ್ಟರು.

ವಯಸ್ಸಾದ ಹಾಗೂ ಗಾಯಗೊಂಡಿರುವ ಹುಲಿಗಳನ್ನು ಗುರುತಿಸಿ ಅಂತಹ ಹುಲಿಗಳಿಗೆ ಕಾಲರ್‌ಗಳನ್ನು ಅಳವಡಿಸುವಂತಾಗಬೇಕು. ಇದರಿಂದ ಜನ-ಜಾನುವಾರುಗಳ ರಕ್ಷಣೆ ಮಾಡಬಹುದಾಗಿದೆ ಎಂದು ಮುತ್ತಣ್ಣ ಸಲಹೆ ಮಾಡಿದರು.

ವನ್ಯಜೀವಿ ತಜ್ಞರಾದ ಸಂಜಯ್ ಗುಬ್ಬಿ



ಮಲೆನಾಡು ಭಾಗದಲ್ಲಿ ಆನೆಗಳ ಚಲನವಲನಗಳ ಬಗ್ಗೆ ಮಾಹಿತಿ ನೀಡಿದರು.

ವನ್ಯ ಪ್ರಾಣಿಗಳಿಗೆ ಕುಡಿಯುವ ನೀರು ಮತ್ತು ಮೇವು ಅತೀ ಮುಖ್ಯ. ಆದ್ದರಿಂದ ಅರಣ್ಯ ಪ್ರದೇಶದಲ್ಲಿ ಹೆಚ್ಚಿನ ಮೇವು ಮತ್ತು ಕುಡಿಯುವ ನೀರು ಲಭ್ಯವಾಗುವಂತೆ ಮಾಡಬೇಕು. ಆನೆಗಳು 200 ಕಿ.ಮೀ.ವರೆಗೆ ಸಂಚಾರ ಮಾಡುತ್ತವೆ ಎಂದು ಸಂಜಯ್ ಗುಬ್ಬಿ ಹೇಳಿದರು.

ನಾಗರಹೊಳೆ ಹುಲಿಯೋಜನೆ ನಿರ್ದೇಶಕರಾದ ಹರ್ಷಕುಮಾರ್ ಮಾತನಾಡಿ ಕಾಡಾನೆ ಹಾವಳಿ ತಪ್ಪಿಸುವಲ್ಲಿ ಅರಣ್ಯ ಇಲಾಖೆಯಿಂದ ಸಾಕಷ್ಟು ಪ್ರಯತ್ನ ನಡೆದಿದೆ. ಆ ನಿಟ್ಟಿನಲ್ಲಿ ಮತ್ತಷ್ಟು ಕ್ರಮ ಕೈಗೊಳ್ಳಲಾಗುವುದು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಭಾಸ್ಕರ್ ಮಾತನಾಡಿ ಕಾಡಾನೆಗಳು ಸಂಚರಿಸುವ ಮಾರ್ಗದಲ್ಲಿ ಬೆಳಗಿನ ಜಾವದಲ್ಲಿ ಮತ್ತು ಹೆಚ್ಚಿನ ಮಂಜು ಆವರಿಸುವ ಸಂದರ್ಭದಲ್ಲಿ ಸಾರ್ವಜನಿಕರು ಓಡಾಡುವುದನ್ನು ತಪ್ಪಿಸಬೇಕು. ಇದರಿಂದ ಸಾಕಷ್ಟು ಸುರಕ್ಷತೆ ಕಾಪಾಡಬಹುದಾಗಿದೆ ಎಂದು ಹೇಳಿದರು.

ವಿರಾಜಪೇಟೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಎನ್.ಎಚ್.ಜಗನ್ನಾಥ್ ಅವರು ಅರಣ್ಯ ಪ್ರದೇಶದಲ್ಲಿ ವಾಸಿಸುವ ಜನರಿಗೆ ಇಲಾಖೆಯಿಂದ ಸೋಲಾರ್ ಲೈಟ್ ಮತ್ತಿತರ ಸೌಲಭ್ಯ ಕಲ್ಪಿಸಬಹುದಾಗಿದೆ ಎಂದರು.

ಕೊಡಗು ಜಿಲ್ಲೆಯಲ್ಲಿ ಕಾಡಾನೆ ಸೇರಿದಂತೆ ವನ್ಯಪ್ರಾಣಿಗಳ ಹಾವಳಿಯು ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದ್ದು, ಇವುಗಳ ನಿಯಂತ್ರಣ ಅಗತ್ಯ ಎಂದು ಕೂರ್ಗ್ ವೈಲ್ಡ್ ಲೈಫ್ ಸೊಸೈಟಿಯ ಹಲವರು ಅಭಿಪ್ರಾಯ ವ್ಯಕ್ತಪಡಿಸಿದರು. ಜಿ.ಪಂ.ಸಿಇಒ ವರ್ಣಿತ್ ನೇಗಿ, ಉಪ ಪೊಲೀಸ್ ವರಿಷ್ಠಾಧಿಕಾರಿ ಸುಂದರರಾಜ್ ಇತರರು ಇದ್ದರು.



**ಸ್ಕೂಲ್ ಆಫ್ ಪಬ್ಲಿಕ್ ಹೆಲ್ತ್ ಮತ್ತು ಜೆಎಸ್‌ಎಸ್ ಆಸ್ಪತ್ರೆ, ರಕ್ತ ಕೇಂದ್ರ, ಸಹಯೋಗದೊಂದಿಗೆ ವಿಶ್ವ ರಕ್ತದಾನಿಗಳ ದಿನಾಚರಣೆ ಆಚರಿಸಲಾಯಿತು. ಜೆಎಸ್‌ಎಸ್ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲ ಡಾ.ಹೆಚ್.ಬಸವನಗೌಡಪ್ಪ, ಆಡಳಿತಾಧಿಕಾರಿ ಸತೀಶ್ ಚಂದ್ರ, ಜೆಎಸ್‌ಎಸ್ ಆಸ್ಪತ್ರೆಯ ರಕ್ತಕೇಂದ್ರದ ಅಧಿಕಾರಿ ಡಾ.ಪಿ.ಪಲ್ಲವಿ, ಡಾ. ಅನಿಲ್ ಬಿಳಿಮಲೆ, ಡಾ.ಅರ್ಚನಾ ಇದ್ದರು.**

# ರಕ್ತದಾನದ ಬಗ್ಗೆ ಆಗಬೇಕಿದೆ ಜನಜಾಗೃತಿ

**ಮೈಸೂರು:** ರಕ್ತದ ಮಹತ್ವ ಕುರಿತು ಅರಿವು ಮೂಡಿಸುವ ಮತ್ತು ರಕ್ತದಾನದ ಬಗ್ಗೆ ಇರುವಂತಹ ತಪ್ಪು ತಿಳುವಳಿಕೆ ಹೋಗಲಾಡಿಸಲು ಸರ್ಕಾರ ಮತ್ತು ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಪ್ರಜ್ಞಾವಂತ ನಾಗರಿಕರು ನಮ್ಮ ಸಮಾಜವನ್ನು ಹೆಚ್ಚು ಹೆಚ್ಚು ಜನಜಾಗೃತಿಗೊಳಿಸುವ ಅಗತ್ಯವಿದೆಯೆಂದು ಸಾಹಿತಿ ಬನ್ನೂರು ಕೆ.ರಾಜು ಅಭಿಪ್ರಾಯಪಟ್ಟರು.

ಒಂದು ಹೆಜ್ಜೆ ರಕ್ತ ದಾನಿಗಳ ಬಳಗ ಮತ್ತು ಸಮೃದ್ಧಿ ವಾರ್ತೆ ಪತ್ರಿಕೆ ಹಾಗೂ ರಿಲಯನ್ಸ್ ಇನ್ಸೂರೆನ್ಸ್ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಶ್ರೀ ಯೋಗಾನರಸಿಂಹ ಸ್ವಾಮಿ ದೇವಾಲಯದ ಆವರಣದಲ್ಲಿ ನಡೆದ ವಿಶ್ವ ರಕ್ತದಾನಿಗಳ ದಿನಾಚರಣೆ ಮತ್ತು ಹೆಚ್ಚು ಬಾರಿ ರಕ್ತದಾನ ಮಾಡಿರುವವರಿಗೆ ಕರುನಾಡ ಸೇನಾನಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿಶ್ವ ಆರೋಗ್ಯ ಸಂಸ್ಥೆ ರಕ್ತದಾನ ಕುರಿತು ಜನರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಪ್ರತಿವರ್ಷ ಜೂ.14ರಂದು ವಿಶ್ವ ರಕ್ತದಾನಿಗಳ ದಿನಾಚರಣೆ ಆಚರಿಸುತ್ತಿದ್ದು ಪ್ರಸ್ತುತ ವರ್ಷ ಇದಕ್ಕೆ ಇಪ್ಪತ್ತು ವರ್ಷಗಳು ತುಂಬುತ್ತಿದ್ದು ದ್ವಿದಶಮಾನೋತ್ಸವದ ಹಾದಿಯಲ್ಲಿದ್ದರೂ ಸಹ ನಿರೀಕ್ಷಿತ ಮಟ್ಟದಲ್ಲಿ ರಕ್ತದಾನದ ಬಗ್ಗೆ ಜನಜಾಗೃತಿಯ ಕೆಲಸ ಆಗಿಲ್ಲವೆಂದರು.

ಹೆಚ್ಚು ಬಾರಿ ರಕ್ತದಾನ ಮಾಡಿರುವ ಅಭಿ (20 ಬಾರಿ), ಮಧುಸೂದನ್ (12 ಬಾರಿ), ಅನಿಲ್ (10ಬಾರಿ), ಉಮೇಶ್ (10ಬಾರಿ), ಪ್ರಿಯದರ್ಶಿನಿ ಹೋಟೆಲ್ ಸುರೇಶ್ (10 ಬಾರಿ) ಅವರುಗಳಿಗೆ ಶ್ರೀಯೋಗಾನರ



ಸಿಂಹಸ್ವಾಮಿ ದೇವಸ್ಥಾನದ ಕಾರ್ಯದರ್ಶಿ ಶ್ರೀನಿವಾಸ ಸ್ವಾಮೀಜಿ ಕರುನಾಡ ಸೇನಾನಿ ಎಂಬ ಪ್ರಶಂಸನಾ ಪ್ರಶಸ್ತಿ ಪ್ರದಾನಿಸಿ ಗೌರವಿಸಿದರು. ಒಂದು ಹೆಜ್ಜೆ ರಕ್ತ ದಾನಿಗಳ ಬಳಗದ ಅಧ್ಯಕ್ಷ ರಕ್ತದಾನಿ ಮಂಜು, ಸಮೃದ್ಧಿವಾರ್ತೆ ಪತ್ರಿಕೆ ಸಂಪಾದಕಿ ಸಹನಾ ಗೌಡ, ರಿಲಯನ್ಸ್ ಇನ್ಸೂರೆನ್ಸ್ ಕಂಪನಿಯ ಅಜಯ್ ಕೆ.ಕುತ್ನಿಕರ್ ಮುಂತಾದವರಿದ್ದರು.

# ಖಾಸಗಿ ಆಸ್ಪತ್ರೆ ವೈದ್ಯ,ಸಿಬ್ಬಂದಿಯಿಂದ ಹಲ್ಲೆ

**ಹುಣಸೂರು:** ಅಪಘಾತದಲ್ಲಿ ಗಾಯಗೊಂಡಿದ್ದ ಗಾಯಾಳುವಿಗೆ ಚಿಕಿತ್ಸೆ ನೀಡುವ ವಿಚಾರದಲ್ಲಿ ಇಲ್ಲಿನ ಖಾಸಗಿ ಆಸ್ಪತ್ರೆ ವೈದ್ಯರು ಸಂಪೂರ್ಣ ನಿರ್ಲಕ್ಷವಹಿಸಿದ್ದಾರೆಂದು ಆರೋಪಿಸಿ ಪ್ರಶ್ನಿಸಲು ಹೋದ ಗಾಯಾಳು ಕುಟುಂಬದವರಿಗೆ ವೈದ್ಯರು ಹಾಗೂ ಸಿಬ್ಬಂದಿ ಹಲ್ಲೆ ನಡೆಸಿದ್ದಾರೆಂದು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹುಣಸೂರಿನ ಬೈಪಾಸ್ ರಸ್ತೆಯ ಕಾವೇರಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಘಟನೆ ನಡೆದಿದ್ದು, ತಾಲೂಕಿನ ಕಾಮಗೌಡನಹಳ್ಳಿಯ ಗಾಯಾಳು ಚಂದ್ರಪ್ಪ ಮತ್ತವರ ಕಡೆಯವರು ಆಸ್ಪತ್ರೆಯ ನಿರ್ಲಕ್ಷತೆ ಹಾಗೂ ಹಲ್ಲೆ ಮಾಡಿರುವ ಆರೋಪದಡಿ ಡಾ.ಲೋಹಿತ್ ಮತ್ತು ಸಿಬ್ಬಂದಿ ವಿರುದ್ದ ದೂರು ದಾಖಲಿಸಿದ್ದಾರೆ.

ಬುಧವಾರ ರಾತ್ರಿ ಕಲ್ಕುಣಿಕೆ ಬಳಿಯಲ್ಲಿ ಗೂಡ್ಸ್ ಆಟೋ ಮತ್ತು ಬೈಕ್ ನಡುವೆ ನಡೆದ ಅಪಘಾತದಲ್ಲಿ ಚಂದ್ರಪ್ಪ ಅವರ ಕಾಲಿಗೆ ತೀವ್ರಗಾಯವಾಗಿತ್ತು. ಗಾಯಗೊಂಡಿದ್ದ ಚಂದ್ರಪ್ಪ ಅವರನ್ನು ಸರಕಾರಿ ಆಸ್ಪತ್ರೆಗೆ ದಾಖಲಿಸಿದ್ದರು. ಹೆಚ್ಚಿನ ಚಿಕಿತ್ಸೆಗಾಗಿ ಕೆ.ಆರ್.ಆಸ್ಪತ್ರೆಗೆ ಕರೆದೊಯ್ಯಲು ವೈದ್ಯರು ಸಲಹೆ ನೀಡಿದ್ದರು.

ಆದರೆ ಆಟೋ ಚಾಲಕ ಒಳ್ಳೆಯ ವೈದ್ಯರಿದ್ದಾರೆಂದು ಹುಣಸೂರಿನ ಕಾವೇರಿ ಆಸ್ಪತ್ರೆಗೆ ಕರೆತಂದು ದಾಖಲಿಸಿದ್ದರು. ಮೂಳೆ ವೈದ್ಯರು ಪರೀಕ್ಷಿಸಿ, ಎಕ್ಸರೆ ಮಾಡಿಸಿ ಚಿಕ್ಕಗಾಯವಾಗಿದೆಯಷ್ಟೆ ಎಂದು ಕಾಲಿನ ಗಾಯಕ್ಕೆ ಹೊಲಿಗೆ ಹಾಕಿ ಚಿಕಿತ್ಸೆ ನೀಡಿ ಒಳ ರೋಗಿಯಾಗಿ ದಾಖಲುಮಾಡಿಕೊಂಡಿದ್ದರು. ಆದರೆ ತೀವ್ರ ನೋವಿನಿಂದ ಬಳಲುತ್ತಿದ್ದರಿಂದ ಅನುಮಾನಗೊಂಡ ಗಾಯಾಳು ಕಡೆಯವರು ಬೆಳಗ್ಗೆ ಸ್ಕ್ಯಾನಿಂಗ್ ಮಾಡಿಸಲು ಮೈಸೂರಿಗೆ ಕರೆದೊಯ್ದ ವೇಳೆ ಕಾಲಿನ ನರಕ್ಕೆ ತೀವ್ರಪೆಟ್ಟು ಬಿದ್ದಿರುವುದು ಪತ್ತೆಯಾಗಿದ್ದು, ಗಾಯಾಳುವಿಗೆ ಸಮರ್ಪಕ ಚಿಕಿತ್ಸೆ ನೀಡುವಂತೆ ಮಾಡಿದ ಮನವಿಗೆ ಆಪರೇಷನ್ ಮಾಡಬೇಕೆಂದು ಮೂಳೆ ವೈದ್ಯ ಡಾ.ಅರ್ಜುನ್ ಹೇಳಿದ್ದರಿಂದ ಕುಪಿತಗೊಂಡು ಏನೂ ಆಗಿಲ್ಲವೆಂದಿರಿ, ಆದರೆ ಈಗ ಆಪರೇಷನ್ ಎಂದು ಹೇಳುತ್ತಿದ್ದೀರಾ ಎಂದು ಮಾತಿನ ಚಕಮುಕಿ ನಡೆದು,



ಗಾಯಾಳುವನ್ನು ಡಿಸ್‌ಚಾರ್ಜ್ ಮಾಡಿ ಮೈಸೂರಿಗೆ ಕರೆದೊಯ್ಯುತ್ತೇವೆ. ಡಿಸ್ ಚಾರ್ಜ್ ಸಮ್ಮರಿ ಹಾಗೂ ಎಕ್ಸರೆ ಕಾಪಿ ಕೊಡುವಂತೆ ಪಟ್ಟು ಹಿಡಿದಿದ್ದಾರೆ. ಈ ವೇಳೆ ಮಾತಿನ ಚಕಮುಕಿ, ತಳ್ಳಾಟ ನೂಕಾಟ ನಡೆದಿದೆ. ಘಟನೆಯನ್ನು ಗಾಯಾಳು ಕಡೆಯವರು ಮೊಬೈಲ್‌ನಲ್ಲಿ ವಿಡಿಯೋ ಮಾಡುತ್ತಿರುವುದನ್ನು ಕಂಡ ಆಸ್ಪತ್ರೆ ಮುಖ್ಯಸ್ಥ ಡಾ.ಲೋಹಿತ್ ಸಹ ಜೋರಾಗಿ ಮಾತನಾಡಿದರಲ್ಲದೆ ಇವರನ್ನು ಹೊರಗಟ್ಟುವಂತೆ ಸಿಬ್ಬಂದಿಗೆ ಹೇಳಿ ಜೋರಾಗಿ ಕೂಗಾಡುತ್ತಾ ಡಾ.ಲೋಹಿತ್ ಹಾಗೂ ಆಸ್ಪತ್ರೆ ಸಿಬ್ಬಂದಿಯೊಬ್ಬರು ತಮ್ಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಗಾಯಾಳುವಿನ ಕಡೆಯವರಾದ ಸಂತೋಷ್‌ಕುಮಾರ್ ಮತ್ತು ಚಂದ್ರಪ್ಪ, ರಾಜೇಶ್ ಅವರುಗಳು ಹಲ್ಲೆನಡೆಸಿದ ವೈದ್ಯರು ಹಾಗೂ ಸಿಬ್ಬಂದಿ ವಿರುದ್ದ ಕ್ರಮ ಕೈಗೊಂಡು ನ್ಯಾಯಕೊಡಿಸಬೇಕೆಂದು ನಗರ ಠಾಣೆ ಪೊಲೀಸರಿಗೆ ದೂರು ನೀಡಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಇನ್ಸ್‌ಪೆಕ್ಟರ್ ಸಂತೋಷ್ ಕಶ್ಯಪ್ ತಿಳಿಸಿದ್ದಾರೆ.

# ಅಧಿಕಾರಿಗಳು ಸಾರ್ವಜನಿಕರಿಗೆ ಸ್ಪಂದಿಸಿ

**ಮಡಿಕೇರಿ** : ನಗರಸಭೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸುವಂತೆ ಪೌರಾಯುಕ್ತರಿಗೆ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಸೂಚಿಸಿದ್ದಾರೆ.

ನಗರದ ತಹಶೀಲ್ದಾರ್ ಕಚೇರಿಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಬೀದಿ ನಾಯಿಗಳ ಹಾವಳಿ ಜೊತೆಗೆ ಬಿಡಾಡಿ ಜಾನುವಾರುಗಳ ಸಂಖ್ಯೆ ಹೆಚ್ಚಾಗಿದ್ದು, ಜಾನುವಾರುಗಳನ್ನು ಗೋಶಾಲೆಗೆ ಸ್ಥಳಾಂತರಿಸುವುದು. ಮತ್ತಿತರ ಸಂಬಂಧ ಅಗತ್ಯ ಕ್ರಮ ಕೈಗೊಳ್ಳುವಂತೆ ಲೋಕಾಯುಕ್ತ ಡಿವೈಎಸ್‌ಪಿ ಅವರು ನಿರ್ದೇಶನ ನೀಡಿದರು.

ನಗರ ಸ್ವಚ್ಚತೆ ಸಂಬಂಧಿಸಿದಂತೆ ಕಸ ವಿಲೇವಾರಿ ಸಮರ್ಪಕ ನಿರ್ವಹಣೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಈ ಕುರಿತು ಪ್ರತಿಕ್ರಿಯಿಸಿದ ನಗರಸಭೆ ಪೌರಾಯುಕ್ತರು ಬೀದಿನಾಯಿ ಹಾವಳಿ ನಿಯಂತ್ರಣಕ್ಕೆ ನಿಯಮಾನುಸಾರ ಕ್ರಮವಹಿಸಲಾಗಿದೆ. ಕಸ ವಿಲೇವಾರಿ ಸಂಬಂಧ 10 ಎಕರೆ ಜಾಗ ಗುರುತಿಸಲಾಗಿದ್ದು, ಅರಣ್ಯ ಇಲಾಖೆಯಿಂದ ಎನ್‌ಒಸಿ ನೀಡಬೇಕಿದೆ ಎಂದು ಮಾಹಿತಿ ನೀಡಿದರು.

ಹೆಬ್ಬೆಟ್ಟಗೇರಿ ಗ್ರಾಮದ ಸಾರ್ವಜನಿಕರೊಬ್ಬರು



2018 ಮತ್ತು 2019 ರಲ್ಲಿ ಸಂಭವಿಸಿದ ಪ್ರಾಕೃತಿಕ ವಿಕೋಪದಿಂದ ಮನೆ ಕಳೆದುಕೊಳ್ಳಲಾಗಿದ್ದು, ಆದರೆ ಇದುವರೆಗೆ ಮನೆ ಕೊಟ್ಟಿಲ್ಲ ಎಂದು ದೂರಿದರು.

ಈ ಬಗ್ಗೆ ಮಾತನಾಡಿದ ಲೋಕಾಯುಕ್ತ ಡಿವೈಎಸ್‌ಪಿ ಪವನ್ ಕುಮಾರ್ ಅವರು ಉಪ ವಿಭಾಗಾಧಿಕಾರಿ ಅವರನ್ನು ದೂರವಾಣಿ ಮೂಲಕ ಅವರನ್ನು ಸಂಪರ್ಕಿಸಿದರು. ನೇರವಾಗಿ ಭೇಟಿ ಮಾಡಿ ಆದ್ಯತೆ ಮೇಲೆ ಮನೆ ಕೊಡಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಲೋಕಾಯುಕ್ತ ಸಂಸ್ಥೆಯು ಅಧಿಕಾರಿಗಳಿಗೆ ತೊಂದರೆ ಕೊಡುವುದಕ್ಕಲ್ಲ, ಒಳ್ಳೆಯ ಕೆಲಸ ಮಾಡುವವರಿಗೆ ಬೆನ್ನು ತಟ್ಟುವ ಕೆಲಸ ಆಗಬೇಕು ಎಂದರು.

ಖಾತೆ ಬದಲಾವಣೆ, ರಸ್ತೆ ಸಂಪರ್ಕ ಕಲ್ಪಿಸುವುದು ಮತ್ತಿತರ ಸಂಬಂಧ ಹಲವು ದೂರುಗಳು ಲೋಕಾಯುಕ್ತ ಅಹವಾಲು ಸಭೆಗೆ ಸಲ್ಲಿಕೆಯಾದವು. ತಹಶೀಲ್ದಾರ್ ಪ್ರವೀಣ್ ಕುಮಾರ್, ತಾ.ಪಂ.ಇಒ ಶೇಖರ್, ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.



## ಭಾರತದ ಮೊದಲ ಎಐ ಆಧಾರಿತ ನಿದ್ರಾ ಉತ್ಪನ್ನ ವೇಕ್ಫಿಟ್ ಝೂನ್ಸ್ ಬಿಡುಗಡೆ

ಭಾರತದ ಅತಿದೊಡ್ಡ ಡಿ2ಸಿ ಸ್ಲೀಪ್ ಆಂಡ್ ಹೋಮ್ ಸೊಲ್ಯೂಷನ್ಸ್ ಕಂಪನಿ ಆಗಿರುವ ವೇಕ್ಫಿಟ್.ಕೋ ಇಂದು ಭಾರತದ ಮೊತ್ತ ಮೊದಲ ಎಐ ಚಾಲಿತ ನಿದ್ರಾ ಉತ್ಪನ್ನವಾದ ವೇಕ್ಫಿಟ್ ಝೂನ್ಸ್ ಶ್ರೇಣಿಯನ್ನು ಬಿಡುಗಡೆ ಮಾಡಿದೆ. ಈ ವಿಶಿಷ್ಟ ಉತ್ಪನ್ನ ಶ್ರೇಣಿಯು ರೆಗ್ಯುಲ್8 ಮತ್ತು ಟ್ರ್ಯಾಕ್8 ಎಂಬ ಎರಡು ಅದ್ಭುತ ಉತ್ಪನ್ನಗಳನ್ನು ಒಳಗೊಂಡಿದೆ. ರೆಗ್ಯುಲ್8 ಭಾರತದ ಮೊತ್ತ ಮೊದಲ ಟೆಂಪರೇಚರ್ ಕಂಟ್ರೋಲರ್ ಹಾಸಿಗೆ ಆಗಿದ್ದು, ವೈಯಕ್ತಿಕ ಆದ್ಯತೆಗಳಿಗೆ ಅನುಗುಣವಾಗಿ ಹಾಸಿಗೆಯ ಮೇಲ್ಮೈ ತಾಪಮಾನವನ್ನು ಬದಲಾಯಿಸುವ ಮತ್ತು ನಿರ್ವಹಿಸುವ ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿದೆ. ಟ್ರ್ಯಾಕ್8 ಎಐ-ಚಾಲಿತ ನಾನ್-ವೇರೇಬಲ್ ಅಂದ್ರೆ ಧರಿಸಲಾಗದ (ಸಂಪರ್ಕವಿಲ್ಲದ) ನಿದ್ರಾ ಟ್ರ್ಯಾಕರ್ ಆಗಿದೆ. ವ್ಯಕ್ತಿಯ ನಿದ್ರೆಯ ಮಾದರಿಗಳ ಬಗ್ಗೆ ನಿಖರವಾದ ಮತ್ತು ವಿವರವಾದ ಒಳನೋಟಗಳನ್ನು ಈ ಟ್ರ್ಯಾಕರ್ ನೀಡುತ್ತದೆ. ಈ ಹೊಸ ಉತ್ಪನ್ನಗಳ ಬಿಡುಗಡೆಯ ಮೂಲಕ ವೇಕ್ಫಿಟ್.ಕೋ ತಂತ್ರಜ್ಞಾನವನ್ನು ನಿದ್ರಾ ಪರಿಸರಕ್ಕೆ ತಕ್ಕಂತೆ ಸಂಯೋಜಿಸಿದ್ದು, ಉತ್ತಮ ನಿದ್ದೆ ಮತ್ತು ನಿದ್ರಾ ಆರೋಗ್ಯವನ್ನು ಗ್ರಾಹಕರಿಗೆಒದಗಿಸುತ್ತದೆ. ವಿಶ್ವ-ಪ್ರಸಿದ್ಧ ನಿದ್ರಾ ಸಂಶೋಧಕ, ವಿಜ್ಞಾನಿ, ಲೇಖಕ ಮತ್ತು ನರವಿಜ್ಞಾನದ ಪ್ರೊಫೆಸರ್ ಮ್ಯಾಥ್ಯೂ ವಾಕರ್ ಪ್ರಕಾರ, ಅಸಮರ್ಪಕ ನಿದ್ರೆಯಿಂದ ಕಲಿಕೆಯ ಸಾಮರ್ಥ್ಯವು 40% ರಷ್ಟು ಕಡಿಮೆ ಆಗುತ್ತದೆ. ಸಾಮಾನ್ಯವಾಗಿ ನಿದ್ರೆಯ ಪ್ರಮಾಣವನ್ನು ಹೆಚ್ಚಾಗಿ ಪರಿಗಣಿಸಲಾಗುತ್ತದೆ. ಅದರ ಜೊತೆಗೆ ನಿದ್ರೆಯ ಗುಣಮಟ್ಟವನ್ನೂ ಪರಿಗಣಿಸುವುದು ಅಗತ್ಯವಾಗಿದ್ದರೂ ಅದನ್ನು ಕಡೆಗಣಿಸಲಾಗುತ್ತದೆ. ಇದರಿಂದ ಭಾರತೀಯ ಮಾರುಕಟ್ಟೆಗಳಲ್ಲಿ ಇರುವ ನಿಖರವಾದ ಹಾಗೂ ಕಸ್ಟಮೈಸ್ ಮಾಡಿದ ನಿದ್ರೆಯ ಟ್ರ್ಯಾಕಿಂಗ್ ಮತ್ತು ಉತ್ತಮ ನಿದ್ರೆಯ ವಿಚಾರದಲ್ಲಿ ಅರಿವು ಕಡಿಮೆ ಇದೆ ಅನ್ನುವುದು ತಿಳಿಯುತ್ತದೆ. ಝೂನ್ಸ್ ಶ್ರೇಣಿಯು ಗ್ರಾಹಕರಿಗೆ ಅವರ ನಿದ್ರೆಯ ಆರೋಗ್ಯವನ್ನು ಹೆಚ್ಚಿಸಲು ನೆಕ್ಸ್ಟ್-ಜೆನ್ ಉತ್ಪನ್ನಗಳನ್ನು ಒದಗಿಸುತ್ತಿದ್ದು, ಆ ಮೂಲಕ ನಿದ್ರೆಯ ಆರೋಗ್ಯ ಹೆಚ್ಚು ಮಾಡುವ ಗುರಿಯನ್ನು ಹೊಂದಿದೆ.

## ಸಿಹಿ ಗೆಣಸು ಹೋಳಿಗೆ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಗೋಧಿ ಹಿಟ್ಟು 1 ಬಟ್ಟಲು ಚಿರೋಟಿ ರವೆ ಎರಡು ಟೇಬಲ್ ಚಮಚ ಮೈದಾ ಎರಡು ಟೇಬಲ್ ಚಮಚ ಅರಿಷಿಣ ಬೇಯಿಸಿದ ಗೆಣಸು 1 ಬಟ್ಟಲು ಬೆಲ್ಲ ಮುಕ್ಕಾಲು ಬಟ್ಟಲು ಅಡುಗೆ ಎಣ್ಣೆ, ತುಪ್ಪ

### ಮಾಡುವ ವಿಧಾನ

ಮೊದಲಿಗೆ ಗೋಧಿ ಹಿಟ್ಟು, ಚಿರೋಟಿ ರವೆ, ಮೈದಾ, ಚಿಟಿಕೆಯಷ್ಟು ಅರಿಷಿಣ ಮತ್ತು ಉಪ್ಪನ್ನು ಹಾಕಿ ನೀರಿನಲ್ಲಿ ಚಪಾತಿ ಹಿಟ್ಟಿಗಿಂತ ಸ್ವಲ್ಪ ಅಳ್ಳಕಾಗಿ ಕಲಿಸಿಟ್ಟುಕೊಳ್ಳಬೇಕು. ಕಲಿಸಿಕೊಂಡ ಹಿಟ್ಟಿನ ಮೇಲೆ ಅಡುಗೆ ಎಣ್ಣೆಯನ್ನು ಹಾಕಿ ಅರ್ಧ ಗಂಟೆ ಕಾಲ ಮುಚ್ಚಿಡಬೇಕು. ಇಷ್ಟು ಆಗುವವರೆಗೆ ಒಲೆಯ ಮೇಲೆ ಸಿಹಿ ಗೆಣಸನ್ನು ಚೆನ್ನಾಗಿ ತೊಳೆದು ಬೇಯಿಸಿಟ್ಟುಕೊಂಡಿರಬೇಕು. ಗೆಣಸಿನ ಸಿಪ್ಪೆ ಸುಲಿದು ಪುಡಿಪುಡಿ ಮಾಡಿಕೊಳ್ಳಿ. ನಂತರ ಬೆಲ್ಲವನ್ನು ಪುಡಿ ಮಾಡಿ ಅಥವಾ ಹೆರೆದುಕೊಂಡು ಗೆಣಸಿನೊಂದಿಗೆ ಬೆರೆಸಿ ಮತ್ತೆ ಕುದಿಸಿರಿ. ಬೆಲ್ಲ ಮತ್ತು ಗೆಣಸಿನ ಹೂರಣ ಸರಿಯಾಗಿ ಮಿಳಿತವಾದ ಮೇಲೆ ಕೆಳಗಿಳಿಸಿ. ಈಗ, ಕಣಕವನ್ನು ಉಂಡೆಯಾಕಾರ ಮಾಡಿಕೊಂಡು ಕೈಯಿಂದ ತಟ್ಟಿ ಅದರಲ್ಲಿ ಹೂರಣವನ್ನು ತುಂಬಿ ಎಲ್ಲ ಬದಿಯಿಂದ ಮತ್ತೆ ಮುಚ್ಚಿರಿ. ಹಿಟ್ಟನ್ನು ಕೈಯಿಂದ ದುಂಡಗೆ ಹುಣ್ಣಿಮೆ ಚಂದ್ರನಾಕಾರಕ್ಕೆ ಅಗಲ ಮಾಡಿಕೊಂಡು ಅಥವಾ ಲಟ್ಟಿಸಿಕೊಂಡು ಕಾವಲಿನ ಮೇಲೆ ಎರಡೂ ಬದಿಯನ್ನು ಕಂದು ಬಣ್ಣ ಬರುವವರೆಗೆ ಬೇಯಿಸಿ. ಹೋಳಿಗೆಯನ್ನು ಬಿಸಿಬಿಸಿಯಿರುವಾಗಲೇ ಊಟದ ಜೊತೆ ತಿನ್ನಿರಿ

## ನಟಿ ಸಿಲ್ಕ್ ಸ್ಮಿತಾ ರನ್ನು ನೆನಸಿಕೊಂಡ ಬಾಲಕೃಷ್ಣ



ನಟಿಯಾಗಿ, ನೃತ್ಯಗಾರ್ತಿಯಾಗಿ ಅಚ್ಚಳಿಯದ ಛಾಪು ಮೂಡಿಸಿದ್ದ ಸಿಲ್ಕ್ ಸ್ಮಿತಾ ಚಿಕ್ಕ ವಯಸ್ಸಿನಲ್ಲೇ ಇಹಲೋಕ ತ್ಯಜಿಸಿದ್ದಾರೆ. 80, 90ರ ದಶಕದಲ್ಲಿ ಬೋಲ್ಡ್ ಪಾತ್ರಗಳ ಮೂಲಕ ಸಿಲ್ಕ್ ಸ್ಮಿತಾ ಸೃಷ್ಟಿಸಿದ್ದ ಸದ್ದು ಅಷ್ಟಿಷ್ಟಲ್ಲ. ಜೀವನದಲ್ಲಿ ಎದುರಿಸಿದ ಏರಿಳಿತಗಳು ಮತ್ತು ಅವಮಾನಗಳಿಂದ ಅವಳು ಆತ್ಮಹತ್ಯೆ ಮಾಡಿಕೊಂಡಳು. ಅನೇಕ ಚಿತ್ರಗಳಲ್ಲಿ ಅವರ ಅಭಿನಯ ಮತ್ತು ನೃತ್ಯ ಅದ್ಭುತವಾಗಿದೆ. ಆದಿತ್ಯ 369 ನಂದಮೂರಿ ಬಾಲಕೃಷ್ಣ ಅವರ ವೃತ್ತಿಜೀವನದ ಶ್ರೇಷ್ಠ ಚಿತ್ರವಾಗಿದ್ದು, ಸಿಂಗೀತಂ ಶ್ರೀನಿವಾಸ ರಾವ್ ನಿರ್ದೇಶನದ ಈ ಚಿತ್ರದಲ್ಲಿ ಬಾಲಯ್ಯ ದ್ವಿಪಾತ್ರದಲ್ಲಿ ನಟಿಸಿದ್ದಾರೆ. ಶ್ರೀಕೃಷ್ಣದೇವರಾಯರು ನಿರ್ವಹಿಸಿದ ಪಾತ್ರಗಳಲ್ಲಿ ಒಂದು. ಈ ಚಿತ್ರದಲ್ಲಿ ಸ್ಮಿತಾ ಪ್ರಮುಖ ಪಾತ್ರ ನಿರ್ವಹಿಸಿದ್ದಾರೆ. ಅವರು ರಾಯಲ್ ಡ್ಯಾನ್ಸರ್ ಆಗಿ ನಟಿಸಿದ್ದರು. ಸಂದರ್ಶನವೊಂದರಲ್ಲಿ ಬಾಲಕೃಷ್ಣ ಅವರು ಸಿಲ್ಕ್ ಸ್ಮಿತಾ ಅವರನ್ನು ನೆನಪಿಸಿಕೊಂಡಿದ್ದಾರೆ. ಈ ಚಿತ್ರಕ್ಕೆ ಸಿಲ್ಕ್ ಸ್ಮಿತಾ ಅವರನ್ನು ಆಯ್ಕೆ ಮಾಡುವ ಯೋಚನೆ ನಿರ್ದೇಶಕರದ್ದು ಎಂದು ಬಾಲಯ್ಯ ಹೇಳಿದ್ದಾರೆ. ಈ ಹಿನ್ನೆಲೆಯಲ್ಲಿ ಬಾಲಯ್ಯ ಅವರು ಸಿಲ್ಕ್ ಸ್ಮಿತಾ ಅವರನ್ನು ಹೊಗಳಿ ಬೋಲ್ಡ್ ಕಾಮೆಂಟ್ ಮಾಡಿದ್ದಾರೆ. ಸಿಲ್ಕ್ ಸ್ಮಿತಾ ವೇಷಭೂಷಣ, ಮೇಕಪ್ ವಿಚಾರದಲ್ಲಿ ಅವರನ್ನು ಸೋಲಿಸುವ ಮಹಿಳೆ ಇಲ್ಲ ಎಂದು ಬಾಲಯ್ಯ ಹೇಳಿದ್ದಾರೆ.. ಶ್ರೀದೇವಿಯಂತಹ ಟಾಪ್ ಹೀರೋಯಿನ್ ಗಳು ಮೇಕಪ್ ವಿಚಾರದಲ್ಲಿ ಸಿಲ್ಕ್ ಸ್ಮಿತಾ ಅವರನ್ನು ಫಾಲೋ ಮಾಡುತ್ತಿದ್ದರು ಎಂದಿದ್ದಾರೆ. ನಟ ಬಾಲಕೃಷ್ಣ 'ಗ್ಯಾಂಗ್ಸ್ ಆಫ್ ಗೋದಾವರಿ' ಸಿನಿಮಾ ಇವೆಂಟ್ ವೇಳೆ ನಟಿ ಜೊತೆ ದುರ್ವರ್ತನೆ ತೋರಿದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ವೇದಿಕೆಯ ಮೇಲೆ ಬಂದ ಬಾಲಕೃಷ್ಣ ನಟಿ ಅಂಜಲಿಯನ್ನು ತಳ್ಳಿದರು. ಕ್ಷಣ ಹೊತ್ತು ಅಂಜಲಿ ಶಾಕ್ ಒಳಗಾಗಿ ಆಮೇಲೆ ಸುಧಾರಿಸಿಕೊಳ್ಳುತ್ತಾರೆ. ಈ ವಿಡಿಯೋ ಕುರಿತು ಪರ ವಿರೋಧ ಚರ್ಚೆ ಶುರುವಾಗಿತ್ತು. ಬಾಲಕೃಷ್ಣ ವೇದಿಕೆಗೆ ಬರುವ ಮುಂಚೆ ವೇದಿಕೆಯ ಮುಂಭಾಗದಲ್ಲಿ ಕೂತಿದ್ದರು. ಅಲ್ಲಿ ಅವರಿಗೆ ಕುಡಿಯಲು ಮದ್ಯ ಇಡಲಾಗಿತ್ತು. ಮದ್ಯವನ್ನು ನೀರಿನೊಂದಿಗೆ ಬೆರೆಸಿದ್ದ ಬಾಟಲ್ ಪತ್ತೆಯಾಗಿತ್ತು. ಹಾಗಾಗಿ ಕುಡಿದು ಬಾಲಕೃಷ್ಣ ಅವರು ಆ ರೀತಿ ನಡೆದುಕೊಂಡಿದ್ದಾರೆ ಎನ್ನುವುದು ದೊಡ್ಡ ಸುದ್ದಿ ಆಗಿತ್ತು.

## ರಕ್ತದಾನ ದೇಹಕ್ಕೆ ಒಳ್ಳೆಯದು



ಜಗತ್ತಿನಲ್ಲಿ ಒಂದು ಜೀವ ಉಳಿಸುವ ಕಾರ್ಯ ಮಾಡುವುದು ಅಂದ್ರೆ, ಅದೊಂದು ಪುಣ್ಯದ ಕೆಲಸವೇ ಸರಿ. ಆದ್ರೆ, ನಾವು ನೀವು ಒಬ್ಬರ ಜೀವ ಉಳಿಸೋದು ಅಂದ್ರೆ, ರಕ್ತದಾನ ಮಾಡುವುದು. ದಾನಗಳಲ್ಲಿ ರಕ್ತದಾನವೇ ಶ್ರೇಷ್ಠವಾದ ದಾನ ಎನ್ನಲಾಗುತ್ತದೆ. ಏಕೆಂದರೆ ನಿಮ್ಮ ರಕ್ತದ ಹನಿಯಿಂದ ಒಂದಿಷ್ಟು ಜೀವಗಳು ಬದುಕುತ್ತವೆ.

ರಕ್ತ ನೀಡುವುದು ಒಳಿತು ಎಂದು ಹೇಳಲಾಗುತ್ತದೆ. ಆದ್ರೆ, ಈ ಮಾತಿನಲ್ಲಿ ಎಷ್ಟು ಸತ್ಯವಿದೆ. ರಕ್ತ ನೀಡುವುದು ನಿಜವಾಗಲೂ ಒಳ್ಳೆಯದಾ? ರಕ್ತ ನೀಡುವುದರಿಂದ ನಮ್ಮ ದೇಹಕ್ಕೆ ಆಗುವ ಪ್ರಯೋಜನವೇನು? ರಕ್ತ ನೀಡಿದ ಬಳಿಕ ನಮ್ಮ ದೇಹದಲ್ಲಿ ಏನಾಗುತ್ತದೆ ಎಂಬುದನ್ನು ನಾವಿಂದು ತಿಳಿಯೋಣ.

ಆರೋಗ್ಯಯುತ ವ್ಯಕ್ತಿಯೊಬ್ಬ 18 ರಿಂದ 60 ವರ್ಷದವರೆಗೆ ಯಾವುದೇ ವ್ಯಕ್ತಿ 50 ಕ್ಕಿಂತ ಹೆಚ್ಚು ತೂಕ ಇರುವವರು 450 ಎಂ ಎಲ್ ನಷ್ಟು ರಕ್ತವನ್ನು ಕೊಡಬಹುದು. ಪುರುಷರು 3 ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ಸ್ತ್ರೀಯರು 4 ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು.

ರಕ್ತದಾನವು ಕೆಂಪು ರಕ್ತ ಕಣಗಳು, ಪ್ಲೇಟ್ಲೆಟ್ಗಳು ಮತ್ತು ರಕ್ತಪೂರಣಕ್ಕಾಗಿ ಪ್ಲಾಸ್ಮಾವನ್ನು ಒದಗಿಸುವ ಮೂಲಕ ಮೂರು ಜೀವಗಳನ್ನು ಸಂಭಾವ್ಯವಾಗಿ ಉಳಿಸುತ್ತದೆ. ರಕ್ತದಾನದಿಂದಾಗಿ ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ದಾನಿಗಳು ಉಚಿತ ಮಿನಿ-ದೈಹಿಕ ತಪಾಸಣೆಯನ್ನು ಸಹ ಪಡೆಯುತ್ತಾರೆ.

### ಹೆಲ್ತ್ ಟಿಪ್ಸ್

ನಿಯಮಿತವಾಗಿ ರಕ್ತದಾನ ಮಾಡುವುದರಿಂದ ದೇಹದಲ್ಲಿ ಕಬ್ಬಿಣದ ಅಂಶ ಸಮತೋಲನದಲ್ಲಿಡುತ್ತದೆ ಮತ್ತು ಹೃದಯಾಘಾತ ತಪ್ಪಿಸುತ್ತದೆ. ಹೆಚ್ಚಿನ ಕ್ಯಲೋರಿಯನ್ನು ಕಡಿಮೆ ಮಾಡುತ್ತದೆ ಮತ್ತು ಒಟ್ಟಾರೆ ದೇಹದ ತೂಕವನ್ನು ಸಮತೋಲನದಲ್ಲಿ ಇಡಲು ಸಹಕರಿಸುತ್ತದೆ. ದೇಹದಲ್ಲಿ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡುತ್ತದೆ ಮತ್ತು ರಕ್ತದೊತ್ತಡವನ್ನು ಹತೋಟಿಯಲ್ಲಿಡುತ್ತದೆ. ರಕ್ತದಾನ ಮಾಡುವುದರಿಂದ ದೇಹದಲ್ಲಿ ಬರುವ ವಿವಿಧ ರೀತಿಯ ಕ್ಯಾನ್ಸರ್ ನಿಂದ ದೂರ ಉಳಿಯಬಹುದು.ಆದ್ರೆ ರಕ್ತದಾನ ಮಾಡುವುದರಿಂದ ಹಲವು ರೀತಿಯ ಅಡ್ಡಪರಿಣಾಮವೂ ಇದೆ. ಕೆಲವರಿಗೆ ರಕ್ತದಾನದ ಬಳಿಕ ಸುಸ್ತು, ಸ್ವಲ್ಪ ತಲೆಭಾರವಾಗುವುದು, ಸುಸ್ತು ಕಂಡು ಬರುವುದು. ಆದರೆ ಒಂದೆರಡು ದಿನಗಳಲ್ಲಿ ಸರಿಯಾಗುವುದು. ಕೆಲವರಿಗೆ ಸೂಜಿ ಚುಚ್ಚಿದ ಭಾಗದಲ್ಲಿ ಊತ, ರಕ್ತ ಸೋರುವುದು ಕಂಡು ಬರುವುದು.

## ಹನಿ ರೋಸ್ ನಟನೆ ರೆಚೆಲ್ ಚಿತ್ರದ ಟೀಸರ್ ರಿಲೀಸ್



ಮಲಯಾಳಿ ನಟಿ ಹನಿ ರೋಸ್ ಪ್ರಮುಖ ಪಾತ್ರದಲ್ಲಿ ನಟಿಸಿರುವ 'ರೆಚೆಲ್' ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಮೂಲ ಮಲಯಾಳಂನಲ್ಲಿ ನಿರ್ಮಾಣವಾಗಿರುವ ಈ ಸಿನಿಮಾ ಕನ್ನಡದಲ್ಲೂ ರಿಲೀಸ್ ಆಗಲಿದೆ. ಚಿತ್ರವು ಹಿಂಸಾಚಾರ ಮತ್ತು ರಕ್ತಪಾತದ ಕಥೆಯಾಗಿರುತ್ತದೆ ಎಂದು ಟೀಸರ್ ಸುಳಿವು ನೀಡುತ್ತದೆ. ಎಬ್ರಿಡ್ ಶೈನ್ ಸಹ ನಿರ್ಮಾಣದ ಜತೆಗೆ ಮತ್ತು ಬರಹಗಾರರಾಗಿರುವ ಈ ಚಿತ್ರವನ್ನು ಆನಂದಿನಿ ಬಾಲಾ ನಿರ್ದೇಶಿಸಿದ್ದಾರೆ. ಹನಿ ರೋಸ್ ಈ ಸಿನಿಮಾದಲ್ಲಿ ನಾಯಕಿಯಾಗಿ ನಟಿಸಿದ್ದಾರೆ. ಚಿತ್ರದಲ್ಲಿ ಬಾಬು ರಾಜ್, ಕಲಾಭವನ್ ಶಾಜೋನ್, ರೋಷನ್ ಬಶೀರ್, ಚಂದು ಸಲೀಂಕುಮಾರ್, ರಾಧಿಕಾ ರಾಧಾಕೃಷ್ಣನ್, ಜಾಫರ್ ಇಡುಕ್ಕಿ, ವಿನೀತ್ ತಟ್ಟಿಲ್, ಜೋಜಿ, ದಿನೇಶ್ ಪ್ರಭಾಕರ್, ಪಾಲಿ ವಲ್ಸನ್, ವಂದಿತಾ ಮನೋಹರನ್ ಮುಂತಾದವರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಚಿತ್ರವು ಮಲಯಾಳಂ, ತಮಿಳು, ತೆಲುಗು, ಕನ್ನಡ ಮತ್ತು ಹಿಂದಿ ಭಾಷೆಗಳಲ್ಲಿ ಬಿಡುಗಡೆಯಾಗಲಿದೆ. ಈ ಚಿತ್ರವನ್ನು ಬಾದುಶಾ ಪ್ರೊಡಕ್ಷನ್ಸ್ ಬ್ಯಾನರ್‌ನಡಿಯಲ್ಲಿ ಬಾದುಶಾ ಎನ್ ಎಂ, ರಾಜನ್ ಚಿರಾಯಿಲ್ ಮತ್ತು ಎಬ್ರಿಡ್ ಶೈನ್ ನಿರ್ಮಿಸಿದ್ದಾರೆ. ಕಥೆಯನ್ನು ರಾಹುಲ್ ಮನಪ್ಪಟ್ಟು ಬರೆದಿದ್ದು, ಚಿತ್ರಕಥೆಯನ್ನು ರಾಹುಲ್ ಮನಪ್ಪಟ್ಟು ಮತ್ತು ಎಬ್ರಿಡ್ ಶೈನ್ ಮಾಡಿದ್ದಾರೆ. ಸಹ ನಿರ್ಮಾಪಕ ಹನ್ನನ್ ಮರಮುತ್ತಮ್, ಛಾಯಾಗ್ರಹಣ ಸ್ವರೂಪ್ ಫಿಲಿಪ್, ಸಂಗೀತ ಮತ್ತು ಬಿಜಿಎಂ ಇಶಾನ್ ಛಾಬ್ರಾ, ಸಂಕಲನ ಮನೋಜ್, ನಿರ್ಮಾಣ ವಿನ್ಯಾಸಕ ಸುಜಿತ್ ರಾಘವ್, ಧ್ವನಿ ಮಿಶ್ರಣ ರಾಜಕೃಷ್ಣನ್ ಎಂ ಆರ್, ಧ್ವನಿ ವಿನ್ಯಾಸ ಶ್ರೀ ಶಂಕರ್, ಕಾರ್ಯನಿರ್ವಾಹಕ ನಿರ್ಮಾಪಕರು ಮಂಜು ಬಾದುಷಾ, ಶೆಮಿ ಬಶೀರ್, ಶೈಮಾ ಮುಹಮ್ಮದ್ ಬಶೀರ್ ಅವರದ್ದು.

## ಕಲಾಸಿಂಧು ಅರ್ಪಿಸುವ 'ಏಕಾದಶ ರುದ್ರ' -ಕಣ್ಮನ ಸೂರೆಗೊಳ್ಳುವ ದೃಶ್ಯಕಾವ್ಯ

**ವೈ.ಕೆ. ಸಂಧ್ಯಾ ಶರ್ಮ**



ಶಿವನ ಹನ್ನೊಂದು ವಿಶಿಷ್ಟ ರೂಪಗಳ ಭವ್ಯದರ್ಶನ ಭಾರತೀಯ ಐದುಬಗೆಯ ಶಾಸ್ತ್ರೀಯ ನೃತ್ಯ ಪ್ರಕಾರಗಳ ಸಂಗಮದಲ್ಲಿ ಸಾಕಾರಗೊಳ್ಳುವ ದೃಶ್ಯಕಾವ್ಯವೇ ಶಿವನ ಪರಿಣಾಮಕಾರಿ ಕಥಾವಸ್ತುವಿನ ಸುತ್ತ ಪರಿಭ್ರಮಿಸುವ ಈ ನೃತ್ಯವೈಭವ 'ಏಕಾದಶ ರುದ್ರ' ನೃತ್ಯರೂಪಕ.

ಖ್ಯಾತ 'ಕಲಾಸಿಂಧು ಅಕಾಡೆಮಿ'ಯ ಅಂತರರಾಷ್ಟ್ರೀಯ ನೃತ್ಯಗುರು-ಕಲಾವಿದೆ ವಿದುಷಿ ಪೂರ್ಣಿಮಾ ಕೈವಾರ ಗುರುರಾಜ ಅವರ ಬಹುದಿನಗಳ ಕನಸಿನ ಸಾಕ್ಷಾತ್ಕಾರ ಈ ಮಹೋನ್ನತ ನಿರ್ಮಾಣ. ಅವರ ಆಳವಾದ ಅಧ್ಯಯನ-ಸಂಶೋಧನೆಗಳ ಫಲವೇ 'ಏಕಾದಶ ರುದ್ರ'ನ ಆವಿರ್ಭಾವ-ಆವಿಷ್ಕಾರ. ಈ ವಿಶಿಷ್ಟ ರೂಪಕದ ಪರಿಕಲ್ಪನೆ- ನಿರ್ದೇಶನ ಮತ್ತು ನಿರ್ಮಾಣ ವಿದುಷಿ ಪೂರ್ಣಿಮಾ ಅವರದು. ವಿವಿಧ ಭಿನ್ನ ಸನ್ನಿವೇಶಗಳಲ್ಲಿ ಸಾಕ್ಷಾತ್ ಶಿವನು ಪ್ರಕಟಪಡಿಸಿದ ಅವನ ಹನ್ನೊಂದು ಅವತಾರಗಳೇ ಎನ್ನಬಹುದಾದ ಅವನ ವ್ಯಕ್ತಿತ್ವದ ಹನ್ನೊಂದು ಆಯಾಮಗಳ ಅನಾವರಣ. ಅವನ ಭಾವ-ಸ್ವಭಾವಗಳ ಪ್ರತಿಯೊಂದು ಮುಖವೂ, ಚಹರೆಯೂ ವಿಸ್ಮಯಕರವಾದುದು. ರಂಜಿತ-ಅತಿರಂಜಿತವಾಗಿ ಸಾಗುವ 'ಏಕಾದಶ ರುದ್ರ'ನ ಕಥಾಸರಮಾಲೆಯು ಪ್ರೇಕ್ಷಕರ ಕಣ್ಮುಂದೆ ದೃಶ್ಯವತ್ತಾಗಿ ಅಷ್ಟೇ ವರ್ಣರಂಜಿತವಾಗಿ ಪ್ರಫುಲ್ಲಿಸಲಿದೆ. ಬಹುಕಾಲ ಕಿವಿಗಳಲ್ಲಿ ಅನುರಣಿಸುವ ಹೃನ್ಮನ ತುಂಬುವ ಸುಶ್ರಾವ್ಯ ಸಂಗೀತ, ಬೆರಗುಗೊಳಿಸುವ ಪಂಚಬಗೆಯ ಭಾರತೀಯ ನೃತ್ಯಗಳ ಸಂಗಮ, ಆಕರ್ಷಕ ಉಡುಗೆ-ತೊಡುಗೆ, ಕಥಾಕಲ್ಪನೆಗೆ ಪೂರಕವಾಗಿ ಹಿನ್ನಲೆಯಲ್ಲಿ ಮೂಡಿಬರುವ ಮಲ್ಟಿ ಮೀಡಿಯಾ ತಂತ್ರಜ್ಞಾನ, ನವ ಅನುಭವ ಸ್ಫುರಿಸುವ, ಮಾಹಿತಿಯುಕ್ತ ವಿವರಗಳ ನಿರೂಪಣೆ ಒಂದಕ್ಕಿಂತ ಒಂದು ಹೊಸಬಗೆಯಲ್ಲಿ ಆಕರ್ಷಿಸುವ 'ಏಕಾದಶ ರುದ್ರ' ನೃತ್ಯರೂಪಕ ನಿಜಕ್ಕೂ ಹೃದಯಸ್ಪರ್ಶಿಯಾಗಿರುತ್ತದೆ ಎಂದರೆ ಅತಿಶಯೋಕ್ತಿಯಲ್ಲ.

ವಿಶ್ವಮಾನ್ಯ ನೃತ್ಯಗುರುಗಳು, ಅಂತರರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದ ಪ್ರಖ್ಯಾತ ನೃತ್ಯಸಾಧಕರು ಈ ಮಹೋತ್ಸವದ ಭಾಗವಾಗಿರುವುದು ವಿಶೇಷ. ಭಾರತೀಯ ಐದುಬಗೆಯ ಶಾಸ್ತ್ರೀಯ ನೃತ್ಯಗಳಾದ ಭರತನಾಟ್ಯ (ಗುರು ಪೂರ್ಣಿಮಾ ಗುರುರಾಜ), ಕುಚಿಪುಡಿ (ಗುರು ಸಂಜಯ್ ಶಾಂತಾರಾಂ), ಮೋಹಿನಿಯಾಟಮ್ (ಗುರು ಗೋಪಿಕಾ ವರ್ಮ), ಕಥಕ್ ( ಗುರು ಮೈಸೂರು ಬಿ. ನಾಗರಾಜ್) ಮತ್ತು ಸಮುದ್ರನಟನಂ (ಗುರು ಮಧು ಗೋಪೀನಾಥ್) ಮಾರ್ಗದರ್ಶನದಲ್ಲಿ ರೂಪುಗೊಂಡಿರುವ ಸುಮಾರು ಐವತ್ತಕ್ಕೂ ಹೆಚ್ಚಿನ ರಾಷ್ಟ್ರೀಯ ಮಟ್ಟದ ಕಲಾವಿದರು ಆ ಮಹಾದೇವನ ಭವ್ಯವ್ಯಕ್ತಿತ್ವವನ್ನು ತಮ್ಮ ನರ್ತನದ ಮೂಲಕ ಕಟ್ಟಿಕೊಡಲಿದ್ದಾರೆ. ಒಂದೇ ವೇದಿಕೆಯ ಮೇಲೆ ವಿವಿಧ ನಾಟ್ಯಗಳ ಸಮ್ಮಿಲನ ಈ ನೃತ್ಯರೂಪಕದ ಅಸ್ಮಿತೆ. ಪ್ರೇಕ್ಷಕರು ಮಹಾಮಹಿಮ ರುದ್ರನ, ಮೈಮನ ನವಿರೇಳಿಸುವ ಕಥನದ ವಿವಿಧ ಮಜಲುಗಳ ರಸಾನುಭವ ಪಡೆಯಬಹುದಾದಂಥ ಅಪರೂಪದ-ಅನನ್ಯ ಸಂದರ್ಭ. ಪ್ರತಿಯೊಬ್ಬರೂ ನೋಡಲೇಬೇಕಾದ ವಿಶೇಷ ಪ್ರದರ್ಶನವಿದು. ಪ್ರದರ್ಶನವು ಇದೇ ತಿಂಗಳ 22 ನೇ ತಾ. ಶನಿವಾರ ಸಂಜೆ 6 ಗಂಟೆಗೆ ಚೌಡಯ್ಯ ಮೆಮೋರಿಯಲ್ ಹಾಲಿನಲ್ಲಿ ನಡೆಯಲಿದೆ. ಟಿಕೆಟ್ ಮೂಲಕ ಪ್ರವೇಶಾವಕಾಶ. ಟಿಕೆಟುಗಳಿಗಾಗಿ ಸಂಪರ್ಕ – ಬುಕ್ ಮೈ ಷೋ.

ಹೆಚ್ಚಿನ ಮಾಹಿತಿಗೆ 9035639212 / 9008960981 ದೂರವಾಣಿಯನ್ನು ಸಂಪರ್ಕಿಸಬಹುದು.

## 'ಕೂದಲು' ಬೆಳ್ಳಗಾಗ್ತಿದ್ದರೆ ಡಯಟ್ ಬದಲಾವಣೆ ಮಾಡಿ

### ಬ್ಯೂಟಿ ಟಿಪ್ಸ್



ಸಮತೋಲನ ಆಹಾರ ಹಾಗೂ ವ್ಯಾಯಾಮದ ಕೊರತೆ ನಮ್ಮ ಕೂದಲಿನ ಮೇಲೆ ಪರಿಣಾಮ ಬೀರುತ್ತದೆ. ವಯಸ್ಸಿಗಿಂತ ಮೊದಲೇ ಕೂದಲು ಬೆಳ್ಳಗಾಗುತ್ತದೆ. ಸಣ್ಣ ಸಣ್ಣ ಸಮಸ್ಯೆಗೆ ನಾವು ತಿನ್ನುವ ಔಷಧಿ ಹಾಗೂ ಡಯಟ್ ನಲ್ಲಿ ಬದಲಾವಣೆ ಮಾಡುವುದ್ರಿಂದ ನಮ್ಮ ಕೂದಲು ಬೇಗ ಬೆಳ್ಳಗಾಗುತ್ತದೆ.ನಮ್ಮ ಆರೋಗ್ಯ ನಮ್ಮ ಕೈನಲ್ಲಿ ಎನ್ನುವಂತೆ ನಮ್ಮ ಕೂದಲ ಸಮಸ್ಯೆಗೂ ನಾವೇ ಪರಿಹಾರ ಕಂಡುಕೊಳ್ಳಬೇಕು. ನಮ್ಮ ಜೀವನಶೈಲಿಯಲ್ಲಿ ನಾವು ಮಾಡುವ ಸಣ್ಣ-ಪುಟ್ಟ ಬದಲಾವಣೆಯಿಂದಾಗಿ ವಯಸ್ಸಿಗಿಂತ ಮೊದಲೇ ಕೂದಲು ಬೆಳ್ಳಗಾಗುವುದನ್ನು ತಪ್ಪಿಸಬಹುದು. ಆಹಾರದಲ್ಲಿ ಹಸಿರು ತರಕಾರಿ ಹಾಗೂ ಎಲೆಗಳನ್ನು ಸೇವಿಸುವ ಅಭ್ಯಾಸ ಮಾಡಿಕೊಳ್ಳಿ. ಇದ್ರಲ್ಲಿ ವಿಟಮಿನ್ ಬಿ 6 ಹಾಗೂ ವಿಟಮಿನ್ ಬಿ 12 ಇರುತ್ತದೆ. ಇದು ಕೂದಲಿಗೆ ಪೌಷ್ಠಿಕಾಂಶ ನೀಡುತ್ತದೆ. ವಯಸ್ಸಿಗಿಂತ ಮೊದಲೇ ಕೂದಲು ಬೆಳ್ಳಗಾಗುವುದನ್ನು ತಪ್ಪಿಸುತ್ತದೆ. ಬೆಳಗಿನ ತಿಂಡಿ ಜೊತೆ ನಿಯಮಿತವಾಗಿ ನಾಲ್ಕು ಬಾದಾಮಿಯನ್ನು ತಿನ್ನಿ. ಇದು ಕೂದಲು ಬೆಳ್ಳಗಾಗುವುದನ್ನು ತಪ್ಪಿಸುತ್ತದೆ. ಜೊತೆಗೆ ಕೂದಲು ಬಲಗೊಂಡು ಹೊಳೆಯುತ್ತದೆ. ಡಾರ್ಕ್ ಚಾಕೋಲೇಟ್‌ನಲ್ಲಿಯೂ ಪೌಷ್ಠಿಕಾಂಶ ಸಿಗುತ್ತದೆ. ಕೂದಲು ದಟ್ಟವಾಗಲು ಸಹಾಯ ಮಾಡುತ್ತದೆ.

ಮಾಂಸಹಾರಿಗಳು ನೀವಾಗಿದ್ದರೆ ಹೆಚ್ಚಿನ ಪ್ರಮಾಣದಲ್ಲಿ ಮೀನನ್ನು ತಿನ್ನಿ. ಇದು ಕೂದಲನ್ನು ಬಲಗೊಳಿಸಿ ಬೆಳ್ಳಗಾಗುವುದನ್ನು ತಡೆಯುತ್ತದೆ.ಹಾಲಿನ ಉತ್ಪನ್ನಗಳನ್ನು ಹೆಚ್ಚಾಗಿ ಸೇವನೆ ಮಾಡಿ. ಹಾಲು, ಮೊಸರು, ತುಪ್ಪ, ಚೀಸ್ ನಲ್ಲಿ ವಿಟಮಿನ್ ಬಿ ಹೇರಳವಾಗಿರುತ್ತದೆ. ಕೂದಲಿಗೆ ಸರಿಯಾದ ಪ್ರಮಾಣದಲ್ಲಿ ಆಮ್ಲಜನಕ ಸಿಗುವಂತೆ ಮಾಡಿ ಕೂದಲನ್ನು ಪೋಷಿಸುತ್ತದೆ.ಮಾಂಸ, ಮೊಟ್ಟೆ, ಹಣ್ಣುಗಳು ಹಾಗೂ ಧಾನ್ಯಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಸೇವನೆ ಮಾಡಿ. ಇದ್ರಲ್ಲಿ ಕೊಬ್ಬು ಹಾಗೂ ಪೋಷಕಾಂಶ ಹೆಚ್ಚಿನ ಪ್ರಮಾಣದಲ್ಲಿರುವುದ್ರಿಂದ ಕೂದಲು ಬೆಳ್ಳಗಾಗದೆ ಆರೋಗ್ಯವಾಗಿರುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವಿವಾಹ ಯೋಗ, ರಾಜಕೀಯ ಕ್ಷೇತ್ರದಲ್ಲಿ ಮನ್ನಣೆ, ಮನಶಾಂತಿ, ಹಣ ಬಂದರೂ ಉಳಿಯುವುದಿಲ್ಲ.

**ವೃಷಭ:** ಆತ್ಮೀಯರಲ್ಲಿ ಕಲಹ, ದಂಡ, ಅಧಿಕಾರಿಗಳಿಂದ ತೊಂದರೆ, ವಿವಾದಗಳಿಂದ ದೂರವಿರಿ.

**ಮಿಥುನ:** ಕಷ್ಟ ಕಾರ್ಪಣ್ಯಗಳು ಹೆಚ್ಚಾಗುವುದು, ಧೃತಿಗೆಡಬೇಡಿ, ಅನಗತ್ಯ ಅಸ್ತಕ್ಷೇಪ, ಉದ್ಯೋಗದಲ್ಲಿ ಸಮಸ್ಯೆ.

**ಕಟಕ:** ದೃಷ್ಟಿ ದೋಷದಿಂದ ತಂದರೆ, ಸರ್ಪ ಭಯ, ದೂರ ಪ್ರಯಾಣ, ಅಪರಿಚಿತರಿಂದ ಮೋಸ ಎಚ್ಚರ

**ಕನ್ಯಾ:** ಗುರಿಯನ್ನು ಸಾಧಿಸುವಿರಿ, ಆರ್ಥಿಕ ಪರಿಸ್ಥಿತಿ ಚೇತರಿಕೆ, ಸುಖ ಭೋಜನ.

**ತುಲಾ:** ಕಾರ್ಯ ಸಾಧನೆ, ತಾಳ್ಮೆ ಅಗತ್ಯ, ದುಡುಕು ಸ್ವಭಾವ, ಉದ್ಯೋಗದಲ್ಲಿ ತೊಂದರೆ, ಶತ್ರು ಭಾದೆ.

**ವೃಶ್ಚಿಕ:** ಮಾನಸಿಕ ವೇದನೆ, ಆದಾಯಕ್ಕಿಂತ ಖರ್ಚು ಜಾಸ್ತಿ, ಶರೀರದಲ್ಲಿ ತಳಮಳ, ವಿವಾಹಕ್ಕೆ ಅಡಚಣೆ.

**ಧನಸ್ಸು:** ಭೂ ಲಾಭ, ಯತ್ನ ಕಾರ್ಯಗಳಲ್ಲಿ ಜಯ, ಮಾತಿನ ಚಕಮುಖಿ, ದಾಂಪತ್ಯದಲ್ಲಿ ಪ್ರೀತಿ

**ಮಕರ:** ಸುಳ್ಳು ಮಾತನಾಡುವುದು,ವ್ಯರ್ಥ ಧನ ಹಾನಿ,ಅತಿಯಾದ ನಿದ್ರೆ, ಮನೋವ್ಯಥೆ

**ಕುಂಭ:** ಅಮೂಲ್ಯ ವಸ್ತುಗಳ ಖರೀದಿ, ವ್ಯಾಪಾರದಿಂದ ಲಾಭ, ಮಾತಾಪಿತರಲ್ಲಿ ಪ್ರೀತಿ, ಕೃಷಿಕರಿಗೆ ಉತ್ತಮ ಸಮಯ.

**ಮೀನ:** ಸಣ್ಣ ಪುಟ್ಟ ವಿಷಯಗಳಿಂದ ಕಲಹ, ಸಲ್ಲದ ಅಪವಾದ, ಗುರು ಹಿರಿಯರ ಸಲಹೆ, ಶೀತ ಸಂಬಂಧ ಕಾಯಿಲೆ.

## ಇಂಟರ್‌ನ್ಯಾಷನಲ್ ಪಿಕ್ನಿಕ್ ದಿನ




ಅಂತಾರಾಷ್ಟ್ರೀಯ ಪಿಕ್ನಿಕ್ ದಿನವು ಜೂನ್ 18 ರಂದು, ಮತ್ತು ನಾವು ಸುಲಭವಾಗಿ ಆಚರಿಸಲು ನಮ್ಮ ಸಮಯವನ್ನು ಬಳಸುತ್ತಿದ್ದೇವೆ – ಪಿಕ್ನಿಕ್ ಜೊತೆಗೆ! ಪಿಕ್ನಿಕ್‌ಗಳು ವರ್ಷಗಳಿಂದ ಹೆಚ್ಚಿನ ಸಂಸ್ಕೃತಿಗಳ ಪ್ರಧಾನ ಅಂಶವಾಗಿದೆ ಮತ್ತು ನಂಬಿ ಅಥವಾ ಇಲ್ಲ, ಅವರ ಜನಪ್ರಿಯತೆಯನ್ನು ಫ್ರೆಂಚ್ ಕ್ರಾಂತಿಗೆ ನೇರವಾಗಿ ಕಂಡುಹಿಡಿಯಬಹುದು. ಪಿಕ್ನಿಕ್ ನಮ್ಮ ವ್ಯಾಖ್ಯಾನಗಳು ವಿಭಿನ್ನವಾಗಿರಬಹುದು, ಆದರೆ ಸಂತೋಷಕರ ದಿನಕ್ಕಾಗಿ ಜನರನ್ನು ಒಟ್ಟುಗೂಡಿಸಲು ಇದು ಉತ್ತಮ ಮಾರ್ಗವಾಗಿದೆ.

ಪ್ರಪಂಚದಾದ್ಯಂತದ ಅನೇಕರಿಗೆ, ಪಿಕ್ನಿಕ್ಗಳು ತಮ್ಮ ದೈನಂದಿನ ಜೀವನದಿಂದ ವಿಶ್ರಾಂತಿಯ ವೇಗವನ್ನು ಬದಲಾಯಿಸುತ್ತವೆ. ಆದಾಗ್ಯೂ, ಇಂದು ನಮಗೆ ತಿಳಿದಿರುವಂತೆ ಪಿಕ್ನಿಕ್ ಫ್ರೆಂಚ್ ಕ್ರಾಂತಿಯವರೆಗೂ ಅಸ್ತಿತ್ವದಲ್ಲಿಲ್ಲ, ಸಾರ್ವಜನಿಕ ಉದ್ಯಾನವನಗಳು ಅಂತಿಮವಾಗಿ ಸಾಮೂಹಿಕವಾಗಿ ಲಭ್ಯವಾದವು.

ಆಧುನಿಕ ಪಿಕ್ನಿಕ್‌ಗಳ ಸೃಷ್ಟಿಗೆ ಫ್ರೆಂಚ್ ಕಾರಣವಾದರೂ, ಜಾಗತೀಕರಣ ಮತ್ತು ವೈಯಕ್ತಿಕ ಸಂಸ್ಕೃತಿಗಳು ಅವರ ಭವ್ಯವಾದ ಜನಪ್ರಿಯತೆಗೆ ಕಾರಣವಾಗಿವೆ. 2018 ರಲ್ಲಿ, 55% ಯುವ ಅಮೆರಿಕನ್ನರು ಪಿಕ್ನಿಕ್ ಹೊಂದುವುದು ತಮ್ಮ ನೆಚ್ಚಿನ ಬೆಚ್ಚಗಿನ ಹವಾಮಾನ ಚಟುವಟಿಕೆಯಾಗಿದೆ ಎಂದು ಹೇಳಿದರು.

ಮತ್ತು ಪಿಕ್ನಿಕ್ ಪರಿಕಲ್ಪನೆಯು ಹರಡಿದಂತೆ, ವಿವಿಧ ಸ್ಥಳಗಳಲ್ಲಿ ಅಸಂಖ್ಯಾತ ವಿಭಿನ್ನ ಸಂಪ್ರದಾಯಗಳು ಹುಟ್ಟಿಕೊಂಡಿವೆ. ಪ್ರಪಂಚದಾದ್ಯಂತ ತಮ್ಮದೇ ಆದ ರೀತಿಯಲ್ಲಿ ಪಿಕ್ನಿಕ್‌ನಲ್ಲಿ ತೊಡಗಿಸಿಕೊಳ್ಳದ ಸಂಸ್ಕೃತಿಗಳು ಬಹಳ ಕಡಿಮೆ.

ಪಿಕ್ನಿಕ್‌ಗಳು ಹೊರಗೆ ಹೋಗಲು ಮತ್ತು ನಿಮ್ಮ ನಗರವು ನಿಮಗೆ ಏನನ್ನು ನೀಡುತ್ತದೆ ಎಂಬುದನ್ನು ಆನಂದಿಸಲು ಅದ್ಭುತವಾದ ಮಾರ್ಗವಾಗಿದೆ. ಮತ್ತು ಪಾದಯಾತ್ರೆ ಅಥವಾ ನಡಿಗೆಯ ನಂತರ, ನೀವು ಉತ್ತಮವಾದ ವಿರಾಮ ಮತ್ತು ರುಚಿಕರವಾದ ಊಟಕ್ಕಾಗಿ ಉತ್ಸುಕರಾಗುತ್ತೀರಿ.

# ಪ್ರಧಾನಿ ಮೋದಿ- ಪೋಪ್ ಭೇಟಿ ಕುರಿತ ಪೋಸ್ಟ್‌ನಲ್ಲಿ ಕ್ರೈಸ್ತರಿಗೆ ಅಪಮಾನ



**ಇಟಾಲಿ:** ಇತ್ತೀಚೆಗೆ ಇಟಾಲಿಯಲ್ಲಿ ನಡೆದ ಜಿ-7 ಶೃಂಗಸಭೆಯಲ್ಲಿ ಪ್ರಧಾನಿ ಮೋದಿ- ಪೋಪ್ ಭೇಟಿ ಕುರಿತು ಕೇರಳ ಕಾಂಗ್ರೆಸ್ ಪ್ರಕಟಿಸಿದ್ದ ಸಾಮಾಜಿಕ ಜಾಲತಾಣ ಪೋಸ್ಟ್ ನಲ್ಲಿ ಕ್ರೈಸ್ತರಿಗೆ ಅಪಮಾನವಾಗಿರುವ ಆರೋಪ ಕೇಳಿಬಂದಿದ್ದು ಕಾಂಗ್ರೆಸ್ ಪಕ್ಷ ಕ್ಷಮೆಯಾಚಿಸಿದೆ.

ಪ್ರಧಾನಿ ಮೋದಿ ಪೋಪ್ ಅವರನ್ನು ಭೇಟಿ ಮಾಡಿದ್ದ ಫೋಟೋ ಹಂಚಿಕೊಂಡಿದ್ದ ಕಾಂಗ್ರೆಸ್ ಪಕ್ಷ, ಪೋಪ್ ಗೆ ಕೊನೆಗೂ ದೇವರನ್ನು ನೋಡುವ ಅವಕಾಶ ಸಿಕ್ಕಿತು ಎಂದು ಹೇಳಿತ್ತು.

ಪ್ರಧಾನಿ ಮೋದಿ ಚುನಾವಣೆಯ ಸಂದರ್ಭದಲ್ಲಿ ಸಂದರ್ಶನವೊಂದರಲ್ಲಿ ನಿಮಗೆ ಇಷ್ಟು ಶಕ್ತಿ ಎಲ್ಲಿಂದ ಬರುತ್ತದೆ ಎಂಬ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ್ದ ಪ್ರಧಾನಿ, ನನಗೆ ಈ ಶಕ್ತಿ ಬರುವುದು ದೈಹಿಕವಾಗಿ ಅಲ್ಲ (ಟಿಂಣ ಛಿಂಟಿಂಠಿಛಿಟ) ದೇವರೇ ಆ ಶಕ್ತಿ ನೀಡುತ್ತಾನೆ ಎಂಬ ಅರ್ಥದಲ್ಲಿ ಹೇಳಿಕೆ ನೀಡಿದ್ದರು. ಇದನ್ನು ಪ್ರಧಾನಿ ತಾವೇ ದೇವರು ಎಂದು ಹೇಳಿಕೊಂಡಿದ್ದಾರೆಂಬ ಅರ್ಥದಲ್ಲಿ ಬಿಂಬಿಸಲಾಗಿತ್ತು. ಇದನ್ನೇ ಆಧಾರವಾಗಿಟ್ಟುಕೊಂಡ ಕೇರಳ ಕಾಂಗ್ರೆಸ್, ಪೋಪ್‌ಗೆ ಕೊನೆಗೂ ದೇವರನ್ನು ನೋಡುವ ಅವಕಾಶ ಸಿಕ್ಕಿತು ಎಂದು ವ್ಯಂಗ್ಯವಾಡಿದೆ.

# ಇವಿಎಂ ರದ್ದುಗೊಳಿಸಿ: ರಾಹುಲ್



**ನವದೆಹಲಿ:** ಇವಿಎಂ ಈಗ ಕಪ್ಪು ಪೆಟ್ಟಿಗೆ ಎನಿಸಿಕೊಳ್ಳುತ್ತಿದೆ. ಚುನಾವಣಾ ಆಯೋಗ ಈ ಯಂತ್ರಗಳು ಮತ್ತು ಪ್ರಕ್ರಿಯೆಗಳ ಸಂಪೂರ್ಣ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಬೇಕು ಇಲ್ಲವೇ ಅವುಗಳನ್ನು ರದ್ದುಗೊಳಿಸಬೇಕು ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಟ್ವೀಟ್‌ನಲ್ಲಿ ಬರೆದಿರುವ ರಾಹುಲ್ ಗಾಂಧಿ, ಪ್ರಜಾಸತ್ತಾತ್ಮಕ ಸಂಸ್ಥೆಗಳನ್ನು ವಶಪಡಿಸಿಕೊಂಡಾಗ, ಸಾರ್ವಜನಿಕರಿಗೆ ಪಾರದರ್ಶಗಿರುವ ಚುನಾವಣಾ ಪ್ರಕ್ರಿಯೆಗಳಲ್ಲಿ ಮಾತ್ರ ರಕ್ಷಣೆ ಇರುತ್ತದೆ. ಇವಿಎಂ ಪ್ರಸ್ತುತ ಕಪ್ಪು ಪೆಟ್ಟಿಗೆಯಾಗಿದೆ. ಚುನಾವಣಾ ಆಯೋಗ ಯಂತ್ರಗಳು ಮತ್ತು ಪ್ರಕ್ರಿಯೆಗಳ ಸಂಪೂರ್ಣ ಪಾರದರ್ಶಕತೆಯನ್ನು ಖಚಿತ ಪಡಿಸಿಕೊಳ್ಳಬೇಕು ಅಥವಾ ಅವುಗಳನ್ನು ರದ್ದುಗೊಳಿಸಬೇಕು ಎಂದಿದ್ದಾರೆ. ಹ್ಯಾಕರ್‌ಗಳು ಕೃತಕ ಬುದ್ಧಿಮತ್ತೆ ಬಳಸಿಕೊಂಡು ಇವಿಎಂಗಳನ್ನು ಹ್ಯಾಕ್ ಮಾಡಬಹುದು. ಹಾಗಾಗಿ, ಇವಿಎಂಗಳನ್ನು ಚುನಾವಣೆಯಲ್ಲಿ ಬಳಸಬಾರದು ಎಂದು ಟೆಸ್ಲಾ ಕಂಪನಿಯ ಸಿಇಒ ಎಲೋನ್ ಮಸ್ಕ್ ಹೇಳಿಕೆ ನೀಡಿದ್ದಾರೆ. ಇದರ ಬೆನ್ನಲ್ಲೇ ಇತ್ತೀಚೆಗೆ ಭಾರತದಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಮತದಾನಕ್ಕೆ ಇವಿಎಂ ಬಳಸಿ ಬಿಜೆಪಿ ಲಾಭ ಪಡೆದುಕೊಂಡಿದೆ ಎಂದು ಪ್ರತಿಪಕ್ಷಗಳು ಆರೋಪಿಸಿವೆ.

# ಖಲಿಸ್ತಾನಿ ಉಗ್ರ ಪನ್ನುನ್ ಹತ್ಯೆಗೆ ಯತ್ನ: ಆರೋಪಿ ಗಡಿಪಾರು



**ನ್ಯೂಯಾರ್ಕ್:** ಖಲಿಸ್ತಾನಿ ಪರವಾಗಿರುವ ಉಗ್ರ ಗುರ್ಪತ್ವಂತ್ ಸಿಂಗ್ ಪನ್ನುನ್ ಹತ್ಯೆ ಯತ್ನ ಪ್ರಕರಣದಲ್ಲಿ ಆರೋಪಿಯಾಗಿರುವ ಭಾರತೀಯ ಪ್ರಜೆ ನಿಖಿಲ್ ಗುಪ್ತಾ ಅವರನ್ನು ಜೆಕ್ ರಿಪಬ್ಲಿಕ್ ದೇಶದಿಂದ ಅಮೆರಿಕಾಗೆ ಗಡಿಪಾರು ಮಾಡಲಾಗಿದೆ. ಈ ಕುರಿತು ಮಾಹಿತಿ ನೀಡಿರುವ ಅಮೆರಿಕಾ ವಕೀಲರು, ಆರೋಪಿ ಗುಪ್ತಾನನ್ನು ಇಂದೇ ಕೆಳಹಂತದ ಮ್ಯಾನ್ ಹಟ್ಟನ್ ನ್ಯಾಯಾಲಯಕ್ಕೆ ಹಾಜರುಪಡಿಸಲಾಗುತ್ತದೆ. ಈ ವೇಳೆ ಪೊಲೀಸರು ಕಸ್ಟಡಿಗೆ ಕೇಳುವ ಸಾಧ್ಯತೆ ಇದೆ ಎಂದಿದ್ದಾರೆ. ಇನ್ನು ಪನ್ನುನ್ ಹತ್ಯೆ ಮಾಡಲು ಗುಪ್ತಾಗೆ ಭಾರತ ಸರ್ಕಾರ ಕೂಡ ಸಹಾಯ ಮಾಡಿದೆ ಎಂದು ಅಮೆರಿಕಾದ ನ್ಯಾಯಾಂಗೀಯ ಇಲಾಖೆಯು ಆರೋಪಿಸಿದೆ. ಹತ್ಯೆಗೆ ಯತ್ನಿಸಿದ ಪ್ರಕರಣದಲ್ಲಿ ಗುಪ್ತಾನನ್ನು 2023ರ ಜೂನ್ ತಿಂಗಳಿನಲ್ಲಿ ಜೆಕ್ ರಿಪಬ್ಲಿಕ್ ನಲ್ಲಿ ಬಂಧಿಸಲಾಗಿತ್ತು. ನಂತರ ಕಳೆದ ನವಂಬರ್ ನಲ್ಲಿ ಆರೋಪಿ ವಿರುದ್ಧ ಅಮೆರಿಕಾ ದೂರು ದಾಖಲಿಸಿಕೊಂಡು ಕ್ರಮ ಕೈಗೊಳ್ಳುವುದಾಗಿ ಘೋಷಿಸಿತ್ತು. ಇನ್ನು ಪನ್ನುನ್ ಅಮೆರಿಕಾ ಮತ್ತು ಕೆನಡಾ ಪೌರತ್ವವನ್ನು ಹೊಂದಿದ್ದಾರೆ. ಈ ಹಿನ್ನೆಲೆಯಲ್ಲಿ ಅಮೆರಿಕಾ ಪನ್ನುನ್ ನನ್ನು ತನ್ನ ಪ್ರಜೆ ಎಂದು ಪರಿಗಣಿಸಿ ರಕ್ಷಣೆಗೆ ಮುಂದಾಗಿದೆ.

# ಇವಿಎಂ ಇಲ್ಲದಿದ್ದರೆ ಬಿಜೆಪಿ 40 ಸ್ಥಾನವು ಗೆಲ್ಲುತ್ತಿರಲಿಲ್ಲ



**ಮುಂಬೈ:** ನಾವು ಅಮೋಲ್ ಕೀರ್ತಿಕರ್ ಸ್ಥಾನವನ್ನು ಗೆದ್ದಿದ್ದೇವೆ. ನಡೆದಿರುವ ಅಕ್ರಮಕ್ಕೆ ನಾವು ನ್ಯಾಯಾಲಯಕ್ಕೆ ಹೋಗುತ್ತೇವೆ ಎಂದು ಶಿವಸೇನೆಯ ಮುಖಂಡ ಆದಿತ್ಯ ಠಾಕ್ರೆ ಹೇಳಿಕೆ ನೀಡಿದ್ದಾರೆ.

ಇವಿಎಂನಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಿದ ಅವರು, ಇಸಿ ಎಂದರೆ ಚುನಾವಣಾ ಆಯೋಗ ಅಲ್ಲ ಅದು ಈಸಿ ಕಾಂಪ್ರಮೈಸ್ (ಸುಲಭವಾಗಿ ರಾಜಿ) ಆಗಿದೆ.

ಇವಿಎಂ ಇಲ್ಲದೇ ಹೋಗಿದ್ದರೆ ಬಿಜೆಪಿ 40 ಸ್ಥಾನಗಳನ್ನು ಗೆಲ್ಲುತ್ತಿರಲಿಲ್ಲ ಎಂದಿದ್ದಾರೆ.

ಇದರೊಂದಿಗೆ ಉದ್ಧವ್ ಠಾಕ್ರೆ ನೇತೃತ್ವದ ಪಕ್ಷ ಲೋಕಸಭಾ ಚುನಾವಣೆಯಲ್ಲಿ ಗೆದ್ದಿರುವ ಅಭ್ಯರ್ಥಿ ಲೋಕಸಭಾ ಸದಸ್ಯರಾಗಿ ಪ್ರಮಾಣ ವಚನ ಸ್ವೀಕರಿಸದಂತೆ ನಿಲ್ಲಿಸಬೇಕು ಎಂದು ಒತ್ತಾಯಿಸಿದೆ.

ಇದಕ್ಕೂ ಮುನ್ನ ಟೆಸ್ಲಾ ಕಂಪನಿ ಸಿಇಒ ಎಲಾನ್ ಮಸ್ಕ್ ಚುನಾವಣೆಗಳಲ್ಲಿ ಬಳಸುವ ಇವಿಎಂ ಯಂತ್ರಗಳ ಬಗ್ಗೆ ಅನುಮಾನ ವ್ಯಕ್ತಪಡಿಸಿ ಹ್ಯಾಕರ್ಗಳು ಕೃತಕ ಬುದ್ಧಿಮತ್ತೆ ಬಳಸಿಕೊಂಡು ಇವಿಎಂಗಳನ್ನು ಹ್ಯಾಕ್ ಮಾಡಬಹುದು ಎಂದಿದ್ದರು. ಇದರ ಬೆನ್ನಲ್ಲೇ ಇತ್ತೀಚೆಗೆ ಭಾರತದಲ್ಲಿ ನಡೆದ ಲೋಕಸಭಾ ಚುನಾವನೆಯಲ್ಲಿ ಇವಿಎಂ ಬಳಕೆಯಿಂದ ಬಿಜೆಪಿ ಲಾಭಗಳಿಸಿದೆ ಎಂದು ಪ್ರತಿಪಕ್ಷಗಳು ಆರೋಪಿಸಿವೆ.

# ಕಾಂಚನಜುಂಗಾ ಎಕ್ಸ್‌ಪ್ರೆಸ್ ರೈಲು ದುರಂತ, 5 ಸಾವು



**ನವದೆಹಲಿ:** ಪಶ್ಚಿಮ ಬಂಗಾಳದಲ್ಲಿ ಸೋಮವಾರ ಬೆಳಗ್ಗೆ ಸರಕು ಸಾಗಣೆ ರೈಲು ಕಾಂಚನಜುಂಗಾ ಎಕ್ಸ್‌ಪ್ರೆಸ್ ರೈಲಿಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 5 ಪ್ರಯಾಣಿಕರು ಮೃತಪಟ್ಟಿದ್ದು, ಕನಿಷ್ಠ 30 ಪ್ರಯಾಣಿಕರು ಗಾಯಗೊಂಡಿದ್ದಾರೆ. ಸಾವಿನ ಸಂಖ್ಯೆ ಇನ್ನೂ ಹೆಚ್ಚಾಗಬಹುದು ಎಂಬ ಆತಂಕ ವ್ಯಕ್ತವಾಗಿದೆ.

ಸೀಲ್ದಾಗೆ ಹೋಗುತ್ತಿದ್ದ ಕಾಂಚನ್ಜುಂಗಾ ಎಕ್ಸ್‌ಪ್ರೆಸ್ ರೈಲಿಗೆ ಸರಕು ಸಾಗಣೆ ರೈಲು ಹಿಂಬದಿಯಿಂದ ಡಿಕ್ಕಿ ಹೊಡೆದು ಈ ರೈಲು ದುರಂತ ಸಂಭವಿಸಿತು. ಪಶ್ಚಿಮ ಬಂಗಾಳದ ರಂಗಪಾಣಿ ರೈಲ್ವೆ ನಿಲ್ದಾಣದ ಸಮೀಪ ಈ ಅಪಘಾತ ನಡೆಯಿತು. ರಂಗಪಾಣಿ ರೈಲ್ವೆ ನಿಲ್ದಾಣ ಸಮೀಪದ ಈ ದುರಂತ ಸ್ಥಳ ನ್ಯೂ ಜಲಪಾಯಿಗುರಿ ರೈಲ್ವೆ ನಿಲ್ದಾಣದಿಂದ 7 ಕಿ.ಮೀ. ದೂರದಲ್ಲಿದೆ. ಗಾಯಾಳುಗಳನ್ನು ಕೂಡಲೇ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾಗಿ ಪಿಟಿಐ ವರದಿ ಮಾಡಿದೆ. ಸರಕು ಸಾಗಣೆ ರೈಲು ಡಿಕ್ಕಿ ಹೊಡೆದ ಕಾರಣ, ಕಾಂಚನ್ಜುಂಗಾ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳು ಹಳಿ ತಪ್ಪಿ ಬಿದ್ದಿವೆ. ಪರಿಣಾಮ 5 ಪ್ರಯಾಣಿಕರು ಸ್ಥಳದಲ್ಲೇ ಮೃತಪಟ್ಟಿದ್ದು, 30 ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಆಸ್ಪತ್ರೆಗೆ ಸಾಗಿಸುವ ಕೆಲಸ ನಡೆದಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿ ತಿಳಿಸಿದ್ದಾಗಿ ವರದಿ ಹೇಳಿದೆ. ಕಾಂಚನಜುಂಗಾ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ 13174) ರೈಲಿನ ಹಿಂಬಂದಿಯ ಮೂರು ಬೋಗಿಗಳು ಹಳಿ ತಪ್ಪಿ ಉರುಳಿ ಬಿದ್ದಿವೆ. ಈ ರೈಲು ಅಗರ್ತಲಾದಿಂದ ಸೆಲ್ದಾಗೆ ಹೋಗುತ್ತಿತ್ತು ಎಂದು ಉತ್ತರ ರೈಲ್ವೆಯ ಕತಿಹಾರ್ ವಿಭಾಗೀಯ ಡಿಆರ್‌ಎಂ ತಿಳಿಸಿದ್ದಾಗಿ ಪಿಟಿಐ ವರದಿ ಹೇಳಿದೆ.

## ಸ್ಥಳಕ್ಕೆ ಭೇಟಿ ನೀಡಿದ ಮಮತಾ ಬ್ಯಾನರ್ಜಿ



**ಕೋಲ್ಕತ್ತಾ:** ಕಾಂಚನಜುಂಗಾ ಎಕ್ಸ್‌ಪ್ರೆಸ್ ರೈಲು ಅಪಘಾತದ ಬೆನ್ನಲ್ಲೇ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ವೇಳೆ ಮಾತನಾಡಿದ ಅವರು, ಅಪಘಾತದ ಬಗ್ಗೆ ನನಗೆ ಬೆಳಗ್ಗೆ 9 ಗಂಟೆಗೆ ಮಾಹಿತಿ ಸಿಕ್ಕಿತು.

ಅಂದಿನಿಂದ ನಾನು ನನ್ನ ಮುಖ್ಯ ಕಾರ್ಯದರ್ಶಿ ಮತ್ತು ಇತರ ಅಧಿಕಾರಿಗಳ ಮೂಲಕ ಪರಿಸ್ಥಿತಿಯನ್ನು ನಿರ್ವಹಿಸುತ್ತಿದ್ದೇನೆ ಎಂದರು. ವೈದ್ಯಕೀಯ ವ್ಯಾನ್‌ಗಳು, ವಿಪತ್ತು ತಂಡಗಳು ಮತ್ತು ವೈದ್ಯರನ್ನು ಕಳುಹಿಸಲಾಗಿದೆ. ಗಾಯಾಳುಗಳಿಗೆ ಸಹಾಯ ಮಾಡಲು ಮತ್ತು ಪುನಃಸ್ಥಾಪನೆ ಕಾರ್ಯವನ್ನು ಪ್ರಾರಂಭಿಸಲು ನಾನು ಇಲ್ಲಿಗೆ ಬಂದಿದ್ದೇನೆ ಎಂದು ತಿಳಿಸಿದರು.

# ಟೆಕ್ಸಾಸ್‌ನಲ್ಲಿ ಶೂಟೌಟ್: ಇಬ್ಬರ ಸಾವು, 6 ಮಂದಿ ಗಾಯ



**ನ್ಯೂಯಾರ್ಕ್:** ಅಮೆರಿಕದ ಟೆಕ್ಸಾಸ್‌ನಲ್ಲಿ ಶನಿವಾರ ನಡೆದ ಸಂಗೀತ ಕಾರ್ಯಕ್ರಮವೊಂದರ ಸಂದರ್ಭ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದು ಇಬ್ಬರು ಮಕ್ಕಳ ಸಹಿತ ಕನಿಷ್ಠ 6 ಮಂದಿ ಗಾಯಗೊಂಡಿರುವುದಾಗಿ ಪೊಲೀಸರು ಹೇಳಿದ್ದಾರೆ. ರೌಂಡ್ರಾಕ್ ನಗರದ ಓಲ್ಡ್ ಸೆಟ್ಲರ್ಸ್ ಪಾರ್ಕ್‌ನಲ್ಲಿ ಎರಡು ಗುಂಪಿನ ನಡುವೆ ಮಾತಿನ ಚಕಮಕಿ, ಹೊಡೆದಾಟ ನಡೆದಿದೆ. ಆಗ ಓರ್ವ ಪಿಸ್ತೂಲಿನಿಂದ ಗುಂಡು ಹಾರಿಸಿದ್ದು ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಇಬ್ಬರು ಮಕ್ಕಳ ಸಹಿತ 6 ಮಂದಿ ಗಂಭೀರ ಗಾಯಗೊಂಡಿದ್ದಾರೆ . ಪರಾರಿಯಾಗಿರುವ ಶಂಕಿತ ಆರೋಪಿಯ ಪತ್ತೆ ಕಾರ್ಯ ಮುಂದುವರಿದಿದೆ ಎಂದು ಪೊಲೀಸ್ ಮುಖ್ಯಸ್ಥ ಅಲೆನ್ ಬ್ಯಾಂಕ್ಸ್ ಹೇಳಿದ್ದಾರೆ.

**ಮಿಚಿಗನ್‌ನಲ್ಲಿ ಗುಂಡಿನ ದಾಳಿ:** ಶನಿವಾರ ಮಿಚಿಗನ್ನ ಡೆಟ್ರಾಯಿಟ್ ನಗರದಲ್ಲಿ ನಡೆದ ಮತ್ತೊಂದು ಗುಂಡಿನ ದಾಳಿ ಪ್ರಕರಣದಲ್ಲಿ ಇಬ್ಬರು ಮಕ್ಕಳ ಸಹಿತ 9 ಮಂದಿ ಗಾಯಗೊಂಡಿದ್ದಾರೆ. ರೋಚೆಸ್ಟರ್ ಹಿಲ್ಸ್‌ನಲ್ಲಿ ಕುಟುಂಬವೊಂದರ ಸದಸ್ಯರು ವಾರಾಂತ್ಯದ ಪ್ರವಾಸದಲ್ಲಿದ್ದಾಗ ಅಲ್ಲಿಗೆ ಬಂದ ಓರ್ವ ವ್ಯಕ್ತಿ ಮನಬಂದಂತೆ ಗುಂಡು ಹಾರಿಸಿ ಪರಾರಿಯಾಗಿದ್ದಾನೆ.

# ಏರ್‌ಪೋರ್ಟ್‌ನಲ್ಲಿ ಕೈಕೊಟ್ಟ ಕರೆಂಟ್!

**ನವದೆಹಲಿ:** ನೀರಿನ ಸಮಸ್ಯೆಯ ಜೊತೆಗೆ ರಾಷ್ಟ್ರರಾಜಧಾನಿಯಲ್ಲಿ ವಿದ್ಯುತ್ ಸಮಸ್ಯೆಯೂ ಉಲ್ಬಣಿಸಿದಂತೆ ಕಾಣುತ್ತಿದೆ. ವಿದ್ಯುತ್ ಸಮಸ್ಯೆಯ ಪರಿಣಾಮ ನೇರವಾಗಿ ದೆಹಲಿ ಏರ್‌ಪೋರ್ಟ್ ಮೇಲೆ ಬೀರಿದೆ. ಇಂದು ಮಧ್ಯಾಹ್ನ 2 ಗಂಟೆಗೆ ಟರ್ಮಿನಲ್ ಮೂರರಲ್ಲಿ ವಿದ್ಯುತ್ ಕೈಕೊಟ್ಟು, ಕೌಂಟರ್‌ಗಳು ಬಂದ್ ಆಗಿದ್ದವು. ಇ-ಗೇಟ್ ಗಳು ಕೆಲಸ ಮಾಡಲಿಲ್ಲ. ಲಗೇಜ್ ಸ್ವೀಕಾರ ಕೇಂದ್ರ ಸ್ಥಗಿತಗೊಂಡಿತ್ತು. ಇದರಿಂದ ಸುಮಾರು ಒಂದು ಗಂಟೆ ಕಾಲ ಪ್ರಯಾಣಿಕರು ಪರದಾಡಿದ್ರು. ಹೆಚ್ಚಿನ ಎಸಿ ಲೋಡ್‌ನಿಂದಾಗಿ, ಪೂರ್ಣ-ಪವರ್‌ಗೆ ಮರಳಲು ಒಂದೆರಡು ನಿಮಿಷಗಳನ್ನು ತೆಗೆದುಕೊಂಡಿತು. ಏರ್‌ಪೋರ್ಟ್ ಆಡಳಿತ ಮಂಡಳಿ ಸಮಸ್ಯೆಯನ್ನು ಹರಸಾಹಸ ಮಾಡಿ ಸರಿಪಡಿಸಿತು. ಇದರಿಂದ ಪ್ರಯಾಣಿಕರು ನಿಟ್ಟುಸಿರು ಬಿಟ್ಟರು. ಅದೃಷ್ಟವಶಾತ್ ವಿಮಾನಗಳ ಟೇಕ್ ಆಫ್, ಲ್ಯಾಂಡಿಂಗ್, ಎಟಿಸಿ ನಿರ್ವಹಣೆ ವಿಚಾರದಲ್ಲಿ ಯಾವುದೇ ಸಮಸ್ಯೆ ಆಗಲಿಲ್ಲ.



# ವಯನಾಡಿನಲ್ಲಿ ಪ್ರಿಯಾಂಕಾ ಸ್ಪರ್ಧೆ



**ನವದೆಹಲಿ:** 2024ರ ಲೋಕಸಭೆ ಚುನಾವಣೆಯಲ್ಲಿ ಎರಡು ಕ್ಷೇತ್ರದಲ್ಲಿ ಗೆಲುವು ಪಡೆದಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಈಗ ಕೇರಳದ ವಯನಾಡು ಕ್ಷೇತ್ರದ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡುತ್ತಿದ್ದಾರೆ. ಆ ಕ್ಷೇತ್ರದಲ್ಲಿ ಅವರ ತಂಗಿ ಪ್ರಿಯಾಂಕಾ ಗಾಂಧಿ ಸ್ಪರ್ಧಿಸಲಿದ್ದಾರೆ. 2019ರ ಲೋಕಸಭೆ ಸಂದರ್ಭದಲ್ಲಿ ವಯನಾಡು ಕ್ಷೇತ್ರದಲ್ಲಿ ರಾಹುಲ್ ಜಯ ಗಳಿಸಿದ್ದರು. 2024ರ ಚುನಾವಣೆಯಲ್ಲಿ ವಯನಾಡು ಜೊತೆಗೆ ಉತ್ತರ ಪ್ರದೇಶದ ರಾಯಬರೇಲಿಯಲ್ಲೂ ರಾಹುಲ್ ಸ್ಪರ್ಧಿಸಿಎರಡು ಕ್ಷೇತ್ರದಲ್ಲಿ ರಾಹುಲ್‌ಗೆ ಜಯ ಸಿಕ್ಕದೆ. ಆದರೆ, ನಿಯಮದ ಪ್ರಕಾರ ಒಂದು ಕ್ಷೇತ್ರಕ್ಕೆ ರಾಜೀನಾಮೆ ನೀಡಬೇಕಿದೆ. ಆದ್ದರಿಂದ ವಯನಾಡಿಗೆ ಕ್ಷೇತ್ರ ತೊರೆಯುತ್ತಿದ್ದಾರೆ. ಮಾಧ್ಯಮಗೋಷ್ಠಿಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ಮಲ್ಲಿಕಾರ್ಜುನ್ ಖರ್ಗೆ ಅವರು, ರಾಹುಲ್ ಗಾಂಧಿ ವಯನಾಡು ಕ್ಷೇತ್ರಕ್ಕೆ ರಾಜೀನಾಮೆ ನೀಡುತ್ತಿದ್ದು, ಆ ಕ್ಷೇತ್ರಕ್ಕೆ ನಡೆಯುವ ಉಪಚುನಾವಣೆಗೆ ಪ್ರಿಯಾಂಕಾ ಗಾಂಧಿ ಸ್ಪರ್ಧೆ ಮಾಡಲಿದ್ದಾರೆ ಎಂದರು.

# ಯುದ ಸಮಿತಿ' ವಿಸರ್ಜಿಸಿದ ಇಸ್ರೇಲ್ ಪ್ರಧಾನಿ

**ಟೆಲ್ ಅವಿವ್:** ಪ್ಯಾಲೆಸ್ಟೀನ್ ಮೇಲೆ ಯುದ್ಧ ನಡೆಸಿಕೊಂಡು ಹೋಗುವ ಜವಾಬ್ದಾರಿಯೊಂದಿಗೆ ರಚಿಸಲಾಗಿದ್ದ 'ಯುದ್ಧ ಕ್ಯಾಬಿನೆಟ್' (ಸಮಿತಿ) ಅನ್ನು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ವಿಸರ್ಜಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಯುದ್ಧದ ಆರಂಭಿಕ ದಿನಗಳಲ್ಲಿ ದೇಶವನ್ನು ಬೆಂಬಲಿಸುವ ಸಲುವಾಗಿ ರಚಿಸಲಾಗಿದ್ದ ಈ ಸಮಿತಿಯನ್ನು ಸೇರಿಕೊಂಡಿದ್ದ ವಿಪಕ್ಷ ಸಂಸದ ಬೆನ್ನಿ ಗ್ಯಾಂಟ್ಜ್ ಅವರು ಸಮಿತಿಯಿಂದ ಹಿಂದೆ ಸರಿದ ಬಳಿಕ ಅದನ್ನು ವಿಸರ್ಜನೆ ಮಾಡಲಾಯಿತು ಎನ್ನಲಾಗಿದೆ.



# ಯುದ್ಧ ವಿರಾಮದ ನಡುವೆ ದಾಳಿ

**ಓಸ್ಲೋ:** ಮಾನವೀಯ ನೆರವು ಪರಿಶೀಲಿಸಲು ಇಸ್ರೇಲ್ ಸೇನೆಯು ಭಾನುವಾರ ಯುದ್ಧ ವಿರಾಮವನ್ನು ಘೋಷಿಸಿದ ಹೊರತಾಗಿಯೂ ರಫಾ ಮತ್ತು ದಕ್ಷಿಣ ಗಾಜಾದ ಮೇಲೆ ಅದರ ದಾಳಿ ಮುಂದುವರಿದಿದೆ ಎಂದು ಯುಎನ್‌ಆರ್ಡಬ್ಲ್ಯುಎ ಮುಖ್ಯಸ್ಥ ಫಿಲಿಪ್ ಲಾಝರಿನಿ ಕಿಡಿಕಾರಿದ್ದಾರೆ. ಪ್ಯಾಲೆಸ್ಟೀನ್ ಎನ್ಕ್ಲೇವ್ ಅನ್ನು ಸಂಪರ್ಕಿಸುವ ಪ್ರಮುಖ ರಸ್ತೆಗಳಲ್ಲಿ ದೈನಂದಿನ ವಿರಾಮವನ್ನು ಘೋಷಿಸಿದ ಇಸ್ರೇಲ್ ಸೇನೆಯ ನಿರ್ಧಾರವನ್ನು ಭಾನುವಾರ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು ಟೀಕಿಸಿದ್ದರು.

# ಟಿಸಿಎಸ್‌ಗೆ 1600 ಕೋಟಿ ರೂ. ದಂಡ




**ವಾಷಿಂಗ್ಟನ್:** ವ್ಯವಹಾರ ರಹಸ್ಯಗಳನ್ನು ದುರುಪಯೋಗಪಡಿಸಿಕೊಂಡ ಆರೋಪದಲ್ಲಿ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ (ಟಿಸಿಎಸ್)ಗೆ ಅಮೆರಿಕದ ಜಿಲ್ಲಾ ನ್ಯಾಯಾಲಯ 1600 ಕೋಟಿ ರೂಪಾಯಿ (194.2 ದಶಲಕ್ಷ ಡಾಲರ್) ದಂಡ ವಿಧಿಸಿದೆ. ಇದೀಗ ಡಿಎಕ್ಸ್ಸಿ ಟೆಕ್ನಾಲಜಿ ಕಂಪನಿ (ಡಿಎಕ್ಸ್ಸಿ) ಜತೆ ವಿಲೀನಗೊಂಡಿರುವ ಕಂಪ್ಯೂಟರ್ ಸೈನ್ಸ್ ಕಾರ್ಪೊರೇಷನ್ (ಸಿಎಸ್ಸಿ), ವ್ಯವಹಾರ ರಹಸ್ಯಗಳನ್ನು ದುರ್ಬಳಕೆ ಮಾಡಿಕೊಂಡ ಸಂಬಂಧ ಜಿಲ್ಲಾ ನ್ಯಾಯಾಲಯದಲ್ಲಿ ದಾಖಲಿಸಿದ ದೂರಿನ ಆಧಾರದಲ್ಲಿ ಈ ದಂಡ ವಿಧಿಸಲಾಗಿದೆ.

ಈ ನ್ಯಾಯಾಲಯ ಆದೇಶದ ಬಗ್ಗೆ ಟಿಸಿಎಸ್, ಸೆಬಿಗೆ ಸಲ್ಲಿಸಿದ ಬಿಎಸ್‌ಇ ಫೈಲಿಂಗ್ನಲ್ಲಿ ಈ ಅಂಶವನ್ನು ಬಹಿರಂಗಪಡಿಸಿದೆ. ಈ ನ್ಯಾಯಾಲಯದ ಆದೇಶ ವಿರುದ್ಧ ಮೇಲ್ಮನವಿ ಮತ್ತು ಮರುಪರಿಶೀಲನಾ ಅರ್ಜಿಯನ್ನು ಸಲ್ಲಿಸುವುದಾಗಿ ಟಿಸಿಎಸ್ ಸ್ಪಷ್ಟಪಡಿಸಿದೆ.

ಸೆಬಿ (ಲಿಸ್ಟಿಂಗ್ ಅಬ್ಲಿಗೇಶನ್ಸ್ ಅಂಡ್ ಡಿಸ್ಕ್ಲೋಶರ್ ರಿಕ್ವಯರ್ಮೆಂಟ್ಸ್) ನಿಬಂಧನೆಗಳು-2015ರ ಅನುಸಾರ ಅಮೆರಿಕದ ಡಲ್ಲಾಸ್ ಡಿವಿಷನ್ನ ಉತ್ತರ ಟೆಕ್ಸಾಸ್ ಜಿಲ್ಲೆಯ ನ್ಯಾಯಾಲಯ ಕಂಪನಿಗೆ ವಿರುದ್ಧವಾದ ತೀರ್ಪು ನೀಡಿದೆ ಎಂದು ವಿವರಿಸಲಾಗಿದೆ. ಈ ಪ್ರಕರಣದಲ್ಲಿ ಕಂಪನಿ ಸಿಎಸ್ಸಿಗೆ 56151 ಡಾಲರ್ ಪರಿಹಾರ ಮೊತ್ತ ನೀಡಬೇಕು ಮತ್ತು ವಿಶೇಷ ದಂಡವಾಗಿ 112,303,166 ಡಾಲರ್ ನೀಡಬೇಕು ಎಂದು ಆದೇಶಿಸಲಾಗಿದೆ. ಕಂಪನಿ 25,773,576.60 ಡಾಲರ್ಗಳ ತೀರ್ಪು ಪೂರ್ವದ ಬಡ್ಡಿಯನ್ನು ಕೂಡಾ ನೀಡಬೇಕಾಗುತ್ತದೆ ಎಂದು ಅಂದಾಜಿಸಲಾಗಿದೆ.

# ಪ್ರಯಾಣಿಕರನ್ನು ಹೊತ್ತೊಯ್ಯುವ ಡ್ರೋನ್ ಹಾರಾಟ ಪ್ರಯೋಗ ಯಶಸ್ವಿ!



**ಅಬುಧಾಬಿ:** ಪ್ರಯಾಣಿಕರನ್ನು ಹೊತ್ತೊಯ್ಯುವ ಮೊದಲ ಡ್ರೋನ್ ಪ್ರಯೋಗವು ಮಧ್ಯಪ್ರಾಚ್ಯದ ಯುಎಇ ರಾಜಧಾನಿ ಅಬುಧಾಬಿಯಲ್ಲಿ ಯಶಸ್ವಿಯಾಗಿ ನಡೆದಿದೆ. ಅಬುಧಾಬಿ ಮೊಬಿಲಿಟಿ ವೀಕ್ನಲ್ಲಿ ಮಲ್ಟಿ ಲೆವೆಲ್ ಗ್ರೂಪ್, ಫಿನ್ಟೆಕ್ ಸಹಯೋಗದೊಂದಿಗೆ ಎರಡು ಡ್ರೋನ್ಗಳ ಪ್ರಯೋಗ ನಡೆಯಿತು.

350 ಕೆಜಿ ಪೇಲೋಡ್ನೊಂದಿಗೆ 25 ಕಿಮೀ ಗಿಂತ ಹೆಚ್ಚು ಪ್ರಯಾಣಿಸುವ ಸಾಮರ್ಥ್ಯವಿರುವ ಐದು ಆಸನಗಳ ಡ್ರೋನ್ ಮೊದಲ ಪ್ರಯೋಗದಲ್ಲಿ ಪಾಲ್ಗೊಂಡಿತ್ತು. ಎರಡನೇ ಪ್ರಯೋಗವು, ಸಣ್ಣ ಗಾತ್ರದ ಡ್ರೋನ್ ಅನ್ನು ಒಳಗೊಂಡಿತ್ತು. 20 ನಿಮಿಷಗಳ ಅವಧಿಯಲ್ಲಿ 35 ಕಿಮೀ ವರೆಗೆ ಇಬ್ಬರು ಪ್ರಯಾಣಿಕರನ್ನು ಹೊತ್ತು ಪ್ರಯಾಣಿಸುವ ಸಾಮರ್ಥ್ಯವನ್ನು ಇದು ಹೊಂದಿದೆ.

ಐದು ಆಸನಗಳ ಡ್ರೋನ್, 123 ಕಿಮೀ ವಿಸ್ತಾರವಾದ ಪ್ರದೇಶದಲ್ಲಿ 40 ನಿಮಿಷಗಳ ದಾಖಲೆ ಅವಧಿಯ ಹಾರಾಟ ನಡೆಸಿದೆ. ಡ್ರೋನ್ ಹಾರಾಟದಲ್ಲೇ ಇದು ದಾಖಲೆ ಬರೆದಿದೆ. MLG ಮಂಡಳಿಯ ಸದಸ್ಯ ಮೊಹಮ್ಮದ್ ಹಮದ್ ಅಲ್ ಧಹೇರಿ ಮಾತನಾಡಿ, ಈ ಐತಿಹಾಸಿಕ ಕ್ಷಣದ ಭಾಗವಾಗಿರುವುದು ನಿಜಕ್ಕೂ ಹರ್ಷದಾಯಕವಾಗಿದೆ. ತಂತ್ರಜ್ಞಾನ ಮತ್ತು ವಾಯುಯಾನದ ಏಕೀಕರಣವು ನಮ್ಮ ರಾಷ್ಟ್ರದ ಪ್ರಗತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

# ಜು.1ರಿಂದ ದೇಶದಲ್ಲಿ ಹೊಸ ಕ್ರಿಮಿನಲ್ ಕಾನೂನು ಜಾರಿ: ಅರ್ಜುನ್ ರಾಮ್ ಮೇಘವಾಲ್



**ಕೋಲ್ಕತ್ತಾ:** ಜುಲೈ 1 ರಿಂದ ದೇಶದಲ್ಲಿ ಹೊಸ ಕ್ರಿಮಿನಲ್ ಕಾನೂನುಗಳು ಜಾರಿಗೆ ಬರಲಿವೆ. ಐಪಿಸಿ, ಇಂಡಿಯನ್ ಎವಿಡೆನ್ಸ್ ಆಕ್ಟ್, ಕ್ರಿಮಿನಲ್ ಪ್ರೊಸೀಜರ್ ಕೋಡ್ ಜಾಗದಲ್ಲಿ ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಎಂಬ ಮೂರು ಮಾದರಿ ಕಾನೂನುಗಳು ಜಾರಿಗೆ ಬರಲಿವೆ ಎಂದು ಕೇಂದ್ರ, ಕಾನೂನು ಮತ್ತು ನ್ಯಾಯ ಸಚಿವ ಅರ್ಜುನ್ ರಾಮ್ ಮೇಘವಾಲ್ ತಿಳಿಸಿದ್ದಾರೆ. ಕೋಲ್ಕತ್ತಾದಲ್ಲಿ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಏಕರೂಪ ನಾಗರಿಕ ಸಂಹಿತೆ ಜಾರಿಗೆ ಜಾರಿಗೊಳಿಸುವ ಬಗ್ಗೆ ವಿಶ್ವಾಸ ವ್ಯಕ್ತಪಡಿಸಿದರು. ಮುಂದುವರಿದು ಮೂರು ಹೊಸ ಕ್ರಿಮಿನಲ್ ಕಾನೂನುಗಳು ಜುಲೈ 1 ರಿಂದ ಜಾರಿಗೆ ಬರಲಿದ್ದು, ಅವುಗಳ ಅನುಷ್ಠಾನಕ್ಕೆ ಅಗತ್ಯ ತರಬೇತಿ ಈಗಾಗಲೇ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

ಇಂದಿನ ಕಾಲದ ಪರಿಸ್ಥಿತಿಗಳಿಗೆ ಅನುಗುಣವಾಗಿ ಈ ಮೂರು ಕಾಯ್ದೆಗಳನ್ನು ಜಾರಿ ಮಾಡಲಾಗುತ್ತದೆ. ಈಗಾಗಲೇ ಬಿಪಿಆರ್‌ಡಿ, ಜ್ಯೂಡಿಷಿಯಲ್ ಅಕಾಡೆಮಿಗಳು, ಕಾನೂನು ವಿಶ್ವವಿದ್ಯಾಲಯಗಳು ಅಧಿಕಾರಿಗಳಿಗೆ ತರಬೇತಿ ನೀಡುತ್ತಿವೆ ಎಂದು ವಿವರಿಸಿದ್ದಾರೆ. 2023ರ ಡಿಸೆಂಬರ್‌ನಲ್ಲಿ ಈ ಮೂರು ಕಾನೂನುಗಳನ್ನು ಸಂಸತ್‌ನಲ್ಲಿ ಅಂಗೀಕರಿಸಲಾಗಿತ್ತು. ಬಳಿಕ ಈ ಮೂರು ಕಾಯ್ದೆಗಳಿಗೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದರು. ಆದ್ರೆ ಕೇಂದ್ರ ಸರ್ಕಾರ ಅಧಿಸೂಚನೆ ಮುಂದೂಡಿದ್ದರಿಂದ ಅಧಿಕೃತವಾಗಿ ಜಾರಿಗೆ ಬಂದಿರಲಿಲ್ಲ. ಪ್ರಸಕ್ತ ವರ್ಷಾರಂಭದಲ್ಲಿ ಮೂರು ಕಾನೂನುಗಳು ಜಾರಿಗೆ ಬರಲಿವೆ ಎಂದು ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿತ್ತು.

# ಮುಸ್ಲಿಮರು, ಯಾದವರು ನನಗೆ ಮತ ಹಾಕಿಲ್ಲ!

**ಪಾಟ್ನ:** ಲೋಕಸಭೆ ಚುನಾವಣೆಯಲ್ಲಿ ಮುಸ್ಲಿಮರು ಮತ್ತು ಯಾದವರು ನನಗೆ ಮತ ಹಾಕಿಲ್ಲ. ಹೀಗಾಗಿ ಅವರಿಗಾಗಿ ನಾನು ಯಾವುದೇ ಕೆಲಸ ಮಾಡುವುದಿಲ್ಲ ಎಂದು ಬಿಹಾರದ ಜೆಡಿಯು ಸಂಸದ ದೇವೇಶ್ ಚಂದ್ರ, ಠಾಕೂರ್ ಹೇಳಿದ್ದಾರೆ.

ಸೀತಾಮರ್ಹಿ ಲೋಕಸಭಾ ಕ್ಷೇತ್ರದಲ್ಲಿ ಆರ್‌ಜೆಡಿಯ ಅರ್ಜುನ್ ರೈ ಅವರನ್ನು ಸೋಲಿಸಿದ್ದ ಠಾಕೂರ್, ಸೀತಾಮರ್ಹಿಯಲ್ಲಿ ನಡೆದ ಸಮಾರಂಭವನ್ನು ಉದ್ದೇಶಿಸಿ ಮಾತನಾಡುವಾಗ, ಚುನಾವಣೆಯಲ್ಲಿ ಯಾದವರು ಮತ್ತು ಮುಸ್ಲಿಮರು ನನಗೆ ಮತ ಹಾಕಲಿಲ್ಲ ಎಂದಿದ್ದಾರೆ.

ನನ್ನ ಬಳಿಗೆ ಬರುವ ಯಾದವರು ಮತ್ತು ಮುಸ್ಲಿಮರಿಗೆ ಸ್ವಾಗತ. ಅವರು ಚಹಾ ಮತ್ತು ಸಿಹಿತಿಂಡಿಗಳನ್ನು ಸೇವಿಸಬಹುದು. ಆದರೆ ನಾನು ಅವರಿಗೆ ಯಾವುದೇ ಕೆಲಸ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ.ನನ್ನ ಹೇಳಿಕೆಗೆ ಬದ್ಧನಾಗಿದ್ದೇನೆ. ಕಳೆದ 25 ವರ್ಷಗಳಿಂದ ಯಾವುದೇ ತಾರತಮ್ಯವಿಲ್ಲದೆ ಜನರಿಗಾಗಿ ದುಡಿಯುತ್ತಿದ್ದೇನೆ ಎಂದು ಸ್ಪಷ್ಟನೆ ನೀಡಿದ್ದಾರೆ.

ಜೆಡಿಯು ಸಂಸದರ ಹೇಳಿಕೆಗೆ ಸ್ವಪಕ್ಷೀಯರಿಂದಲೇ ವಿರೋಧ ವ್ಯಕ್ತವಾಗಿದೆ. ಬಿಹಾರ ವಿಧಾನ ಪರಿಷತ್ತಿನ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿದ ಠಾಕೂರ್ ಅವರು ಹೇಳಿಕೆಯು ಪ್ರತಿಸ್ಪರ್ಧಿ ಆರ್‌ಜೆಡಿಯಿಂದ ಮಾತ್ರವಲ್ಲದೆ ಕ್ಷಮೆಯಾಚಿಸಲು ಒತ್ತಾಯಿಸಿದ ಅವರದೇ ಪಕ್ಷದ ಬಂಕಾ ಸಂಸದರಿಂದಲೂ ತೀವ್ರ ಟೀಕೆಗೆ ಗುರಿಯಾಗಿದೆ.

# ಗಾಜಾದಲ್ಲಿನ ಹತ್ಯಾಕಾಂಡವನ್ನು ನಿಲ್ಲಿಸಲು ಭಾರತ ನೆರವು ಅಗತ್ಯ



**ಪ್ಯಾಲೆಸ್ತೀನ್:** ಪ್ರಧಾನಿ ಮೋದಿ ಅವರಿಗೆ ಪತ್ರ ಬರೆದು ಆಹ್ವಾನಿಸಿದ ಪ್ಯಾಲೆಸ್ತೀನ್ ಪ್ರಧಾನಿ ಮೊಹಮ್ಮದ್ ಮುಸ್ತಫಾ

ಟೆಲ್ ಅವಿವ್ (ಇಸ್ರೇಲ್) – ಭಾರತ ಜಾಗತಿಕ ನಾಯಕನಾಗಿದ್ದು, ಗಾಝಾದಲ್ಲಿ ನಡೆಯುತ್ತಿರುವ ನರಮೇಧವನ್ನು ಕೊನೆಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಬಹುದು. ಗಾಜಾದಲ್ಲಿ ತಕ್ಷಣದ ಕದನ ವಿರಾಮಕ್ಕಾಗಿ ಭಾರತವು ಎಲ್ಲಾ ರಾಜಕೀಯ ಮಾಧ್ಯಮಗಳನ್ನು ಉಪಯೋಗಿಸುವುದು ಮಹತ್ವದ್ದಾಗಿದೆಯೆಂದು ಪ್ಯಾಲೆಸ್ತೀನ್ ಮನವಿ ಮಾಡಿದೆ.

ಪ್ಯಾಲೆಸ್ತೀನ್ ಪ್ರಧಾನಿ ಮತ್ತು ವಿದೇಶಾಂಗ ಸಚಿವರಾಗಿರುವ ಮಹಮ್ಮದ ಮುಸ್ತಫಾ ಅವರು ಪ್ರಧಾನಿ ನರೇಂದ್ರ, ಮೋದಿಯವರಿಗೆ ಪತ್ರ ಬರೆದು ಈ ಮೇಲಿನಂತೆ ಮನವಿ ಮಾಡಿದ್ದಾರೆ. ಹಾಗೆಯೇ ಮೋದಿಯವರು ಮೂರನೇ ಬಾರಿ ಪ್ರಧಾನಿಯಾಗಿರುವುದಕ್ಕೆ ಅಭಿನಂದಿಸಿದ್ದಾರೆ. ಪ್ಯಾಲೆಸ್ತೀನ್ ಪ್ರಧಾನಿ ಮುಸ್ತಫಾ ಮಾತನ್ನು ಮುಂದುವರಿಸಿ, ಗಾಝಾಕ್ಕೆ ಮಾನವೀಯ ನೆರವು ನೀಡುವುದು ಸೇರಿದಂತೆ, ಭಾರತವು ಅಂತರರಾಷ್ಟ್ರೀಯ ಸಮುದಾಯದೊಂದಿಗೆ ಪ್ಯಾಲೆಸ್ತೀನಿಯನ್ನರ ಭದ್ರತೆಗಾಗಿ ಮತ್ತು ಅವರ ಮೇಲೆ ನಡೆಯುತ್ತಿರುವ ದೌರ್ಜನ್ಯದ ವಿರುದ್ಧ ಕಠಿಣ ನಿಲುವನ್ನು ಹೊಂದುವ ಅಗತ್ಯವಿದೆ ಎಂದು ಹೇಳಿದರು. ಭಾರತ ನಿರಂತರವಾಗಿ ತನ್ನ ವಚನಬದ್ಧತೆಯನ್ನು ತೋರಿಸಿದೆ ಮತ್ತು ಪ್ಯಾಲೆಸ್ತೀನ್ ಜನರ ಹಕ್ಕು ರಕ್ಷಣೆಗೆ ಕೊಡುಗೆ ನೀಡಿದೆ. 'ಯಾವುದೇ ಸಂಘರ್ಷದಲ್ಲಿ ಅಂತರರಾಷ್ಟ್ರೀಯ ಕಾನೂನನ್ನು ಪಾಲಿಸಲೇಬೇಕು' ಎಂದು ಭಾರತ ಯಾವಾಗಲೂ ಹೇಳುತ್ತದೆ. ಭಾರತ ಯಾವಾಗಲೂ ಮಾನವ ಹಕ್ಕುಗಳು ಮತ್ತು ಶಾಂತಿಯನ್ನು ಬೆಂಬಲಿಸುತ್ತದೆ ಎಂದು ಹೇಳಿದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹಾಸನದಲ್ಲಿ ಕಾಣಿಸಿಕೊಂಡ ನೀಲಿ ತಾರೆ



ಬಾಲಿವುಡ್ ಬೆಡಗಿ ಸನ್ನಿ ಲಿಯೋನ್‌ಗೆ ಕರ್ನಾಟಕವೇನು ಹೊಸದಲ್ಲ. ಈಗಾಗಲೇ ಕನ್ನಡದ ಸಿನಿಮಾಗಳಲ್ಲಿ ಕಾಣಿಸಿಕೊಂಡು ಸೈ ಎನಿಸಿಕೊಂಡಿದ್ದಾರೆ. ಆಗಾಗ ಬೆಂಗಳೂರಿಗೆ ಬಂದು ಸಿನಿಮಾ ಪ್ರಚಾರ ಕಾರ್ಯಕ್ಕೂ ಚಿತ್ರತಂಡಕ್ಕೆ ಸಾಥ್ ನೀಡಿದ್ದು ಇದೆ. ಆದರೆ ಈಗ ತಮಿಳು ಸಿನಿಮಾವೊಂದರ ಚಿತ್ರೀಕರಣಕ್ಕಾಗಿ ಹಾಸನ ಜಿಲ್ಲೆಯ ಚೆನ್ನರಾಯಪಟ್ಟಣದ ಕಬ್ಬಳಿ ಗ್ರಾಮದಲ್ಲಿ ಸನ್ನಿ ಲಿಯೋನ್ ಭಾಗಿಯಾಗಿದ್ದಾರೆ.

ಕಬ್ಬಳಿ ಗ್ರಾಮಕ್ಕೆ ಆಗಮಿಸಿದ ಸನ್ನಿ, ಶಾಲೆಯಲ್ಲಿ ಶೂಟಿಂಗ್ ನಡೆಸಿದ್ದಾರೆ. ಬಳಿಕ ತರಗತಿಗೂ ಭೇಟಿ ನೀಡಿ ಅಲ್ಲಿನ ಮಕ್ಕಳ ಜೊತೆ ನಟಿ ಕಾಲ ಕಳೆದಿದ್ದಾರೆ. ಇದೇ ವೇಳೆ, ಮಕ್ಕಳ ಜೊತೆ ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ. ಕಪ್ಪು ಬಣ್ಣ ಟೀ ಶರ್ಟ್ ಮತ್ತು ಪ್ಯಾಂಟ್‌ಗೆ ಬಿಳಿ ಬಣ್ಣದ ಶರ್ಟ್ ಧರಿಸಿದ್ದಾರೆ.

ಅಂದಹಾಗೆ, 'ಕೊಟೇಶನ್ ಗ್ಯಾಂಗ್' ಚಿತ್ರದ ಬಹುತೇಕ ಚಿತ್ರೀಕರಣ ಕರ್ನಾಟಕದಲ್ಲಿ ಪೂರ್ಣಗೊಂಡಿದೆ. ಈ ವೇಳೆ, ಸಾಕಷ್ಟು ಅಭಿಮಾನಿಗಳು ಸನ್ನಿ ಲಿಯೋನ್ ಅವರನ್ನು ಭೇಟಿಯಾಗಿ ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ.

'ಕೊಟೇಶನ್ ಗ್ಯಾಂಗ್' ಸಿನಿಮಾದಲ್ಲಿ ಸನ್ನಿ ಜೊತೆ ಜಾಕಿ ಶ್ರಾಫ್, ಪ್ರಿಯಾ ಮಣಿ ಸೇರಿದಂತೆ ಅನೇಕರು ನಟಿಸಿದ್ದಾರೆ. ಸದ್ಯದಲ್ಲೇ ಈ ಸಿನಿಮಾ ರಿಲೀಸ್ ಆಗಲಿದೆ.

# 'ಪುಷ್ಪ 2' ಸಿನಿಮಾ ರಿಲೀಸ್ ಆಗೋದು ಆಗಸ್ಟ್ ಅಲ್ಲ, ಮತ್ಯಾವಾಗ?





ಐಕಾನ್ ಸ್ಟಾರ್ ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಸಿನಿಮಾ ಬಗ್ಗೆ ಕೆಲದಿನಗಳಿಂದ ರಿಲೀಸ್ ಬಗ್ಗೆ ಗೊಂದಲ ಶುರುವಾಗಿದೆ. ಆಗಸ್ಟ್ 15ಕ್ಕೆ ರಿಲೀಸ್ ಆಗಬೇಕಿದ್ದ ಸಿನಿಮಾ ಮುಂದಕ್ಕೆ ಹೋಗಿದೆ. ಜೊತೆಗೆ ರಿಲೀಸ್ ಬಗ್ಗೆ ಬಿಗ್ ಅಪ್‌ಡೇಟ್ ಸಿಕ್ಕಿದೆ.

ಇಡೀ ಚಿತ್ರತಂಡ ಶೂಟಿಂಗ್ ಮತ್ತು ಪೋಸ್ಟ್ ಪ್ರೊಡಕ್ಷನ್ ಕೆಲಸದಲ್ಲಿ ಬ್ಯುಸಿಯಾಗಿರುವುದರಿಂದ ಆಗಸ್ಟ್ 15ಕ್ಕೆ ಬಿಡುಗಡೆಯಾಗೋದು ಕಷ್ಟ ಎನ್ನಲಾಗ್ತಿದೆ. ಸ್ಟಾರ್ ನಟನ ಬಿಗ್ ಬಜೆಟ್ ಸಿನಿಮಾ ಆಗಿರೋದ್ರಿಂದ ಎಚ್ಚರಿಕೆಯಿಂದ ಕೆಲಸದಲ್ಲಿ ಲೋಪ ಬರದಂತೆ ಸಿನಿಮಾ ಪೂರ್ಣಗೊಳಿಸಬೇಕಿದೆ. ಇದು ಪ್ಯಾನ್ ಇಂಡಿಯಾ ಸಿನಿಮಾ ಆಗಿರೋದ್ರಿಂದ ಪ್ರಚಾರಕ್ಕೂ ಸಮಯ ಮೀಸಲಿಡಬೇಕಿದೆ.

ಹಾಗಾಗಿ ಆಗಸ್ಟ್ 15ಕ್ಕೆ ರಿಲೀಸ್ ಆಗಬೇಕಿದ್ದ 'ಪುಷ್ಪ 2' ಸಿನಿಮಾವನ್ನು ಡಿಸೆಂಬರ್‌ನಲ್ಲಿ ರಿಲೀಸ್ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿದ್ದಾರೆ ಎನ್ನಲಾಗಿದೆ. 'ಪುಷ್ಪ ಪಾರ್ಟ್ 1' ಸಿನಿಮಾ ಡಿಸೆಂಬರ್ 17ರಂದು ರಿಲೀಸ್ ಆಗಿತ್ತು. ಹಾಗಾಗಿ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದ್ದಾರೆ.

ಅಂದಹಾಗೆ, ಈ ಹಿಂದೆ ತೆರೆಕಂಡ 'ಪುಷ್ಪ ಪುಷ್ಪ' ಟೈಟಲ್ ಸಾಂಗ್, ಅಲ್ಲು ಅರ್ಜುನ್ ಮತ್ತು ರಶ್ಮಿಕಾ ಮಂದಣ್ಣ ಹೆಜ್ಜೆ ಹಾಕಿದ ಕಪಲ್ ಸಾಂಗ್ ಮಿಲಿಯನ್ ಗಟ್ಟಲೇ ವಿವ್ಸ್ ಪಡೆದು ಉತ್ತಮ ರೆಸ್ಪಾನ್ಸ್ ಗಿಟ್ಟಿಸಿಕೊಂಡಿತ್ತು. ಆದರಿಂದಲೇ ಸಿನಿಮಾ ಬಗ್ಗೆ ಫ್ಯಾನ್ಸ್‌ಗೆ ನಿರೀಕ್ಷೆ ಕೂಡ ದುಪ್ಪಟ್ಟಾಗಿತ್ತು.

ಆದರೆ ಈಗ ರಿಲೀಸ್ ಡೇಟ್ ಮುಂದಕ್ಕೆ ಹೋಗುವ ಸಾಧ್ಯತೆ ಇದೆ ಎಂಬ ವಿಚಾರ ಕೇಳಿ ಫ್ಯಾನ್ಸ್ ನಿರಾಶರಾಗಿದ್ದಾರೆ. ಯಾವದಕ್ಕೂ ಚಿತ್ರತಂಡದ ಕಡೆಯಿಂದ ಅಧಿಕೃತ ಘೋಷಣೆ ಆಗುವವರೆಗೂ ಕಾದುನೋಡಬೇಕಿದೆ.

ಇನ್ನೂ ಸುಕುಮಾರ್ ನಿರ್ದೇಶನದ ಈ ಚಿತ್ರದಲ್ಲಿ ಹೀರೋ, ಸಾಮಾನ್ಯ ವ್ಯಕ್ತಿ ಆಗಿರುವ ಪುಷ್ಪರಾಜ್ ರಕ್ತ ಚಂದನದ ದಂಧೆಯಲ್ಲಿ ಸೇರಿಕೊಳ್ಳುತ್ತಾನೆ. ಆ ಬಳಿಕ ಆತ ದೊಡ್ಡ ವ್ಯಕ್ತಿಯಾಗಿ ಬೆಳೆಯುತ್ತಾನೆ. ಎರಡನೇ ಭಾಗದಲ್ಲಿ ಇದೇ ಕಥೆ ಹೈಲೈಟ್ ಆಗಲಿದೆ. ರಕ್ತ ಚಂದನದ ದಂಧೆಯಲ್ಲಿ ಬೆಳೆದು ನಿಂತ ಮೇಲೆ ಸಿನಿಮಾದಲ್ಲಿ ಏನೆಲ್ಲಾ ತಿರುವು ಇರಲಿದೆ ಎಂಬುದನ್ನ ಪಾರ್ಟ್ 2ನಲ್ಲಿ ತೋರಿಸಲಾಗುತ್ತದೆ.

ಸಿನಿಮಾದಲ್ಲಿ ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ, ಫಹಾದ್ ಫಾಸಿಲ್, ಅನಸೂಯ ಭಾರದ್ವಾಜ್, ಡಾಲಿ ಧನಂಜಯ್ ಸೇರಿದಂತೆ ಅನೇಕರು ನಟಿಸಿದ್ದಾರೆ.

# 'ಮ್ಯಾಕ್ಸ್' ಸಿನಿಮಾ ರಿಲೀಸ್ ಬಗ್ಗೆ ಗುಡ್ ನ್ಯೂಸ್ ಕೊಟ್ಟ ಸುದೀಪ್



ಅಭಿನಯ ಚಕ್ರವರ್ತಿ ಕಿಚ್ಚ ಸುದೀಪ್ ನಟನೆಯ 'ಮ್ಯಾಕ್ಸ್' ಸಿನಿಮಾಗಾಗಿ ಅಭಿಮಾನಿಗಳು ಎದುರು ನೋಡ್ತಿದ್ದಾರೆ. ಹೀಗಿರುವಾಗ 'ಮ್ಯಾಕ್ಸ್' ಚಿತ್ರ ರಿಲೀಸ್ ಆಗೋದು ಯಾವಾಗ ಎಂದು ಫ್ಯಾನ್ಸ್‌ಗೆ ಸುದೀಪ್ ಅಪ್‌ಡೇಟ್ ಕೊಟ್ಟಿದ್ದಾರೆ.

2022ರಲ್ಲಿ ತೆರೆಕಂಡ 'ವಿಕ್ರಾಂತ್ ರೋಣ' ಚಿತ್ರದ ನಂತರ ಸುದೀಪ್ ಗ್ಯಾಪ್ ತೆಗೆದುಕೊಂಡರು. ಬಿಗ್ ಬಾಸ್ ಶೋ ಸೇರಿದಂತೆ ಇತರೆ ಕೆಲಸಗಳಲ್ಲಿ ಬ್ಯುಸಿಯಾದರು. ಈಗ 'ಮ್ಯಾಕ್ಸ್' ಕಥೆ ಹೇಳೋಕೆ ಸುದೀಪ್ ರೆಡಿಯಾಗಿದ್ದಾರೆ. ಇದೇ ಆಗಸ್ಟ್‌ಗೆ ಸಿನಿಮಾ ಬರಲಿದೆ ಎಂದು ಮಾಹಿತಿ ನೀಡಿದ್ದಾರೆ.

ಸಿನಿಮಾ ಕಾರ್ಯಕ್ರಮವೊಂದರಲ್ಲಿ ಭಾಗಿಯಾಗಿದ್ದ ಸುದೀಪ್, 'ಮ್ಯಾಕ್ಸ್' ಚಿತ್ರದ ಡಬ್ಬಿಂಗ್ ಪೂರ್ಣಗೊಂಡಿದೆ. ಸದ್ಯ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿವೆ. ಆಗಸ್ಟ್‌ನಲ್ಲಿ ಸಿನಿಮಾ ಬಿಡುಗಡೆ ಮಾಡಬಹುದು ಎಂದು ಪ್ಲ್ಯಾನ್ ಮಾಡಿದ್ದೇವೆ ಎಂದು ಸುದೀಪ್ ತಿಳಿಸಿದರು. ಆಗಸ್ಟ್ ಅಥವಾ ಸೆಪ್ಟೆಂಬರ್‌ನಲ್ಲಿ ಸಿನಿಮಾ ರಿಲೀಸ್ ಆಗೋದು ಪಕ್ಕಾ. ಈ ಸುದ್ದಿ ಕೇಳಿ ಫ್ಯಾನ್ಸ್ ಸಂಭ್ರಮಿಸುತ್ತಿದ್ದಾರೆ.

ಅಂದಹಾಗೆ, ಸುದೀಪ್ ನಟನೆಯ 'ಮ್ಯಾಕ್ಸ್' ಚಿತ್ರಕ್ಕೆ ವಿಜಯ್ ಕಾರ್ತಿಕೇಯ ಆಕ್ಷನ್ ಕಟ್ ಹೇಳುತ್ತಿದ್ದಾರೆ. ವರಲಕ್ಷ್ಮಿ ಶರತ್‌ಕುಮಾರ್, ಸಂಯುಕ್ತಾ ಹೊರನಾಡ್ ಸೇರಿದಂತೆ ಅನೇಕರು ನಟಿಸಿದ್ದಾರೆ. ಬಹುಭಾಷೆಗಳಲ್ಲಿ ಸಿನಿಮಾ ರಿಲೀಸ್ ಆಗಲಿದೆ.

# ಹೊಸ ಹಾದಿ ತುಳಿದ ರಕ್ಷಿತ್ ಶೆಟ್ಟಿ; ಜುಲೈ 13ಕ್ಕೆ 'ಏಕಂ' ರಿಲೀಸ್

ರಕ್ಷಿತ್ ಶೆಟ್ಟಿ ಅವರು ನಟನಾಗಿ ಮಾತ್ರವಲ್ಲದೇ, ನಿರ್ದೇಶಕನಾಗಿ ಹಾಗೂ ನಿರ್ಮಾಪಕನಾಗಿಯೂ ಚಿತ್ರರಂಗದಲ್ಲಿ ಆ ಯಕ್ಟೀವ್ ಆಗಿದ್ದಾರೆ. ಹೊಸ ಪ್ರಯತ್ನಗಳಿಗೆ ಅವರು ಬೆನ್ನು ತಟ್ಟುತ್ತಾರೆ. ಬಹಳ ಹಿಂದೆ ಅವರು 'ಏಕಂ' ವೆಬ್ ಸರಣಿ ಬಗ್ಗೆ ಅನೌನ್ಸ್ ಮಾಡಿದ್ದರು. ಕನ್ನಡದ ಈ ವೆಬ್ ಸರಣಿ ನೋಡಲು ಫ್ಯಾನ್ಸ್ ಕಾದಿದ್ದರು. ಆದರೆ ಕಾರಣಾಂತರಗಳಿಂದ ಇದರ ರಿಲೀಸ್ ತಡವಾಯಿತು. ಈಗ 'ಏಕಂ' ವೆಬ್ ಸಿರೀಸ್ ಬಿಡುಗಡೆ ಮಾಡಲು ರಕ್ಷಿತ್ ಶೆಟ್ಟಿ ನಿರ್ಧರಿಸಿದ್ದಾರೆ. ಈ ಬಗ್ಗೆ ಅವರು ಸೋಶಿಯಲ್ ಮೀಡಿಯಾದಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.




'2020 ಜನವರಿ, ಅಥವಾ ಫೆಬ್ರವರಿಯೇ ನೆನಪು ಮಬ್ಬಾಗಿದೆ! ಇರಲಿ 'ಪರಂವಃ' ಹಾಗು 'ಜರ್ನಿಮ್ಯಾನ್ ಫಿಲ್ಮ್ಸ್ ' ಒಟ್ಟಿಗೆ 'ಏಕಂ' ಮಾಡಲು ಹೊರಟಿದ್ದು ಅಂದು. ಏನೋ ಹೊಸತೊಂದನ್ನು ಮಾಡುವ ಉತ್ಸಾಹ ನಮ್ಮಲ್ಲಿ. ಕನ್ನಡದಲ್ಲೊಂದು ವೆಬ್ ಸೀರೀಸ್ ಹೊರಬರಲು ಇದೇ ಸೂಕ್ತ ಸಮಯ ಎಂದೆನಿಸಿತ್ತು. ಆದರೆ ಅದೇ ಸಮಯಕ್ಕೆ ಕೊವಿಡ್ ವಕ್ಕರಿಸಿತು. ಜಗತ್ತೇ ತಲೆ ಕೆಳಗಾದ ಸಮಯ. ನಮ್ಮಲ್ಲೂ ಆತಂಕ, ಅನಿಶ್ಚಿತತೆ. ಆದರೂ ಹಿಂದೆ ಸರಿಯದೆ ಮುನ್ನುಗ್ಗಿದೆವು' ಎಂದು ರಕ್ಷಿತ್ ಶೆಟ್ಟಿ ಬರಹ ಆರಂಭಿಸಿದ್ದಾರೆ.

'ಕಟ್ ಟು ಅಕ್ಟೋಬರ್ 2021. 'ಏಕಂ'ನ ಫೈನಲ್ ಕಟ್ ನೋಡಿದೆ. ಖುಷಿ ಆಯಿತು. ಹೆಮ್ಮೆ ಎನಿಸಿತು. ಇದನ್ನ ಜಗತ್ತಿಗೆ ತೋರಿಸಬೇಕೆನಿಸಿತು. ಅದಾಗಿ ಇಂದಿಗೆ ಬರೋಬ್ಬರಿ ಎರಡೂವರೆ ವರ್ಷಗಳು! 'ಏಕಂ' ಅನ್ನು ಹೊರ ತರಲು ಪಟ್ಟ ಶ್ರಮ ಅಷ್ಟಿಷ್ಟಲ್ಲ! ಎಲ್ಲೆಡೆ ನಿರಾಸೆ, ಅದೇ ನೆಪ, ಅದೇ ಸಬೂಬು! ಯಾವುದೇ ಕೃತಿಯ ಅರ್ಹತೆಯನ್ನ ನಿರ್ಧರಿಸುವ ಅವಕಾಶ ಹಾಗು ಹಕ್ಕು ಪ್ರೇಕ್ಷಕರಿಗಿರಬೇಕು ಎಂದು ನಾನು ಭಾವಿಸುತ್ತೇನೆ' ಎಂದು ರಕ್ಷಿತ್ ಶೆಟ್ಟಿ ಪೋಸ್ಟ್ ಮಾಡಿದ್ದಾರೆ.

'ಹಾಗಾಗಿ ಏಕಂ ಅನ್ನು ನಾವು ನಮ್ಮದೇ ಆದ ವೇದಿಕೆಯಲ್ಲಿ ನಿಮ್ಮ ಮುಂದೆ ತರಲು ನಿಶ್ಚಯಿಸಿದ್ದೇವೆ. 'ಏಕಂ' ನಿಮಗೆ ಇಷ್ಟವಾಗಬಹುದು, ಇಷ್ಟವಾಗದೇ ಇರಬಹುದು. ಆದರೆ ಈ ಪ್ರಯತ್ನವನ್ನು ನಿರ್ಲಕ್ಷಿಸುವಂತಿಲ್ಲ ಎಂಬುದನ್ನು ನಾನು ಬಲವಾಗಿ ನಂಬಿದ್ದೇನೆ. 'ಏಕಂ' ಒಂದು ಶ್ಲಾಘನೀಯ ಪ್ರಯತ್ನ. ಇದನ್ನು ನಾವು ಎಷ್ಟು ಪ್ರೀತಿಯಿಂದ ಮಾಡಿದ್ದೇವೋ, ಅಷ್ಟೇ ಪ್ರೀತಿಯಿಂದ ನೀವು ನಮ್ಮ ಈ ಪ್ರಯತ್ನವನ್ನು ಸ್ವೀಕರಿಸುತ್ತೀರಿ ಅಂತ ಆಶಿಸುತ್ತೇನೆ' ಎಂದು ರಕ್ಷಿತ್ ಶೆಟ್ಟಿ ಅವರು ಈ ಬರಹ ಪೂರ್ಣಗೊಳಿಸಿದ್ದಾರೆ.

## 4 ಓವರ್, 4 ಮೇಡನ್, 3 ವಿಕೆಟ್

# ವಿಶ್ವದಾಖಲೆ ಬರೆದ ಲಾಕಿ ಫರ್ಗ್ಯೂಸನ್



**ಟ್ರಿನಿಡಾಡ್:** ಟಿ20 ಕ್ರಿಕೆಟ್‌ನಲ್ಲಿ ಒಂದು ಓವರ್ ಮೇಡನ್ ಮಾಡುವುದು ಅಪರೂಪ. ಹೀಗಿರುವಾಗ ಎಲ್ಲಾ 4 ಓವರ್ ಮೇಡನ್ ಮಾಡಿ 3 ವಿಕೆಟ್ ಕಿತ್ತು ನ್ಯೂಜಿಲೆಂಡ್‌ನ ವೇಗದ ಬೌಲರ್ ಲಾಕಿ ಫರ್ಗ್ಯೂಸನ್ ನೂತನ ದಾಖಲೆ ಬರೆದಿದ್ದಾರೆ.

'ಸಿ' ಗುಂಪಿನ ಲೀಗ್ ಪಂದ್ಯದಲ್ಲಿ ಪಾಪುವಾ ನ್ಯೂಗಿನಿ ವಿರುದ್ಧ ಫರ್ಗ್ಯೂಸನ್ ಈ ವಿಶಿಷ್ಟ ದಾಖಲೆ ಬರೆದಿದ್ದಾರೆ. 4 ಓವರ್ ಎಸೆದು ಯಾವುದೇ ರನ್ ಬಿಟ್ಟುಕೊಡದೇ 3 ವಿಕೆಟ್ ಪಡೆದಿದ್ದಾರೆ. ಈ ಮೂಲಕ ಅಂತಾರಾಷ್ಟ್ರೀಯ ಟಿ 20 ಕ್ರಿಕೆಟ್‌ನಲ್ಲಿ ಎಲ್ಲಾ ನಾಲ್ಕು ಓವರ್‌ಗಳಲ್ಲಿ ಮೇಡನ್ ಸಾಧನೆ ಮಾಡಿದ ಎರಡನೇ ಬೌಲರ್ ಎನಿಸಿದ್ದಾರೆ.

ಈ ಹಿಂದೆ 2021ರ ಟಿ20 ವಿಶ್ವಕಪ್ ಅರ್ಹತಾ ಪಂದ್ಯದಲ್ಲಿ ಕೆನಡಾದ ಸಾದ್ ಬಿನ್ ಜಾಫರ್ ಅವರು ಪನಮಾ ವಿರುದ್ಧ ನಾಲ್ಕು ಓವರ್‌ಗಳಲ್ಲಿ ಮೇಡನ್ ಸಾಧನೆ ಮಾಡಿ 2 ವಿಕೆಟ್ ಪಡೆದಿದ್ದರು.

ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಪಾಪುವಾ ನ್ಯೂಗಿನಿ 78 ರನ್‌ಗಳಿಗೆ ಆಲೌಟ್ ಆಯ್ತು. ಸುಲಭದ ಸವಾಲನ್ನು ಬೆನ್ನಟ್ಟಿದ ನ್ಯೂಜಿಲೆಂಡ್ 12.3 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 79 ರನ್ ಹೊಡೆದು ಜಯ ಸಾಧಿಸಿತು. ಏಳು ವಿಕೆಟ್ ಅಂತದ ಜಯ ಗಳಿಸಿದರೂ ನ್ಯೂಜಿಲೆಂಡ್ ತನ್ನ ಟಿ20 ಕ್ರಿಕೆಟ್ ಅಭಿಯಾನ ಕೊನೆಗೊಳಿಸಿತು.

ಸಿ ಗುಂಪಿನಲ್ಲಿ ಅಫ್ಘಾನಿಸ್ತಾನ ಮತ್ತು ವೆಸ್ಟ್ ಇಂಡೀಸ್ ತಲಾ 6 ಅಂಕ ಪಡೆದು ಸೂಪರ್ 8 ಪ್ರವೇಶಿಸಿದೆ. ನ್ಯೂಜಿಲೆಂಡ್ 2 ಪಂದ್ಯ ಗೆದ್ದು 4 ಅಂಕ ಪಡೆದ ಕಾರಣ ಟೂರ್ನಿಯಿಂದ ನಿರ್ಗಮಿಸಿದೆ.

ಈ ಪಂದ್ಯದ ಮೂಲಕ ಟ್ರೆಂಟ್ ಬೌಲ್ಟ್ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಗುಡ್‌ಬೈ ಹೇಳಿದರು. ತನ್ನ ಕೊನೆಯ ಟ್ವೆಂಟಿ2- ವಿಶ್ವಕಪ್ ಪಂದ್ಯದಲ್ಲಿ ಟ್ರೆಂಟ್ ಬೌಲ್ಟ್ 4 ಓವರ್ ಎಸೆದು 14 ರನ್ ತೆತ್ತು ಎರಡು ವಿಕೆಟ್ ಗಳಿಸಿದರು.

# ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಸಮಾವೇಶ

» **ಸಂಪಾದಕರ ಸಂಘದಿಂದ ಸಚಿವ ಎಚ್.ಕೆ. ಪಾಟೀಲರೊಂದಿಗೆ ಚರ್ಚೆ**



**ಗದಗ:** ಕರ್ನಾಟಕ ರಾಜ್ಯ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದಿಂದ ಜುಲೈ ತಿಂಗಳಲ್ಲಿ ರಾಜ್ಯ ಸಮಾವೇಶ ಆಯೋಜನೆಗೆ ರಾಜ್ಯ ಕಾರ್ಯಕಾರಿ ಸಮಿತಿಯಲ್ಲಿ ತೀರ್ಮಾನಿಸಲಾಗಿದ್ದು, ಇದಕ್ಕೆ ಸಹಾಯ, ಸಹಕಾರ ನೀಡುವ ಮೂಲಕ ಸಮಾವೇಶ ಯಶಸ್ವಿಗೆ ಸಹಕರಿಸಬೇಕು ಎಂದು ಕಾರ್ಯನಿರತ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ ಮನವಿ ಮಾಡಿದರು.

ಸಮಾವೇಶದ ಕುರಿತು ಸಚಿವ ಎಚ್.ಕೆ. ಪಾಟೀಲರನ್ನು ಜಿಲ್ಲಾ ಸಂಪಾದಕರ ಸಂಘದ ನಿಯೋಗದೊಂದಿಗೆ ಭೇಟಿ ಮಾಡಿ ಈ ಕುರಿತು ಸಚಿವರಿಗೆ ಮನವಿ ಮಾಡಿದರು.

ರಾಜ್ಯದ ಎಲ್ಲಾ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರು ಸಮಾವೇಶದಲ್ಲಿ ಭಾಗವಹಿಸಲಿದ್ದು, ಈ ಹಿನ್ನೆಲೆಯಲ್ಲಿ ಸಮಾವೇಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆಹ್ವಾನಿಸಲು ತೀರ್ಮಾನಿಸಲಾಗಿದೆ. ಹೀಗಾಗಿ ತಾವು ಮುಖ್ಯಮಂತ್ರಿಗಳ ದಿನಾಂಕ ನಿಗದಿಪಡಿಸಿ ಕೊಡಲು ಈ ವೇಳೆ ಸಚಿವರಿಗೆ ಮನವಿ ಮಾಡಲಾಯಿತು.

ಈ ವೇಳೆ ಪ್ರತಿಕ್ರಿಯಿಸಿದ ಸಚಿವ ಎಚ್.ಕೆ. ಪಾಟೀಲ್ ಈ ಕುರಿತು ಮುಖ್ಯಮಂತ್ರಿಗಳೊಂದಿಗೆ ಮಾತನಾಡಿ ದಿನಾಂಕ ನಿಗದಿ ಮಾಡಲಾಗುವುದು. ಜಿಲ್ಲೆಯಲ್ಲಿ ನಡೆಯುತ್ತಿರುವ ಸಮಾವೇಶ ಅಚ್ಚುಕಟ್ಟಾಗಿ ನಡೆಸಬೇಕು. ಇದಕ್ಕೆ ನನ್ನ ಸಹಕಾರ ಸಂಪೂರ್ಣ ಇದೆ ಎಂದು ಹೇಳಿದರು.

ಈ ವೇಳೆ ಸಂಘದ ಜಿಲ್ಲಾ ಉಪಾಧ್ಯಕ್ಷ ಎನ್. ಆರ್. ಭಾಂಡಗೆ, ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಅಜಿತ್ ಹೊಂಬಾಳಿ, ಜಗದೀಶ್ ಪೂಜಾರ್ ಹಾಗೂ ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಶಿದ್ದಲಿಂಗೇಶ್ ಪಾಟೀಲ್, ಕಾಂಗ್ರೆಸ್ ಮುಖಂಡರಾದ ಬಿ.ಬಿ. ಅಸೂಟಿ, ಬರಕತ್ ಅಲಿ ಮುಲ್ಲಾ, ಅಶೋಕ ಮಂದಾಲಿ, ಉಮರಫಾರೂಕ್ ಹುಬ್ಬಳ್ಳಿ ಸೇರಿದಂತೆ ಇತರರು ಇದ್ದರು.

# ಲೀಗ್ ಸುತ್ತಿನ ಬಹುತೇಕ ಪಂದ್ಯಗಳು ಮುಕ್ತಾಯ



ಬಾರಿಯ ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಿದ್ದ 20 ತಂಡಗಳಲ್ಲಿ 8 ತಂಡಗಳು ಸೂಪರ್ -8ಗೆ ಅರ್ಹತೆ ಪಡೆದಿವೆ.

ನಿನ್ನೆ ಬಾಂಗ್ಲಾದೇಶ ಮತ್ತು ನೇಪಾಳ ನಡುವೆ ನಡೆದ ಪಂದ್ಯದಲ್ಲಿ ಬಾಂಗ್ಲಾದೇಶ 21 ರನ್‌ಗಳಿಂದ ಎದುರಾಳಿ ತಂಡವನ್ನು ಮಣಿಸಿತು. ಇದರೊಂದಿಗೆ ಸೂಪರ್-8 ಸುತ್ತಿಗೆ ಅರ್ಹತೆ ಪಡೆದುಕೊಂಡಿತು. ಈ ಮೂಲಕ ಸೂಪರ್-8 ಆಡಲಿರುವ ಎಂಟು ತಂಡಗಳು ಖಚಿತವಾಗಿದೆ. ಈ ತಂಡಗಳನ್ನು ತಲಾ 4ರಂತೆ ಎರಡು ಗುಂಪುಗಳಾಗಿ ವಿಂಗಡಿಸಲಾಗಿದೆ. ಜೂ.19 ರಿಂದ ಸೂಪರ್-8 ಪಂದ್ಯಗಳು ವೆಸ್ಟ್ ಇಂಡೀಸ್‌ನಲ್ಲಿ ಆರಂಭವಾಗಲಿದೆ.

**ಸೂಪರ್-8 ತಲುಪಿದ ತಂಡಗಳು**

ಎ ಗುಂಪು: ಭಾರತ, ಯುಎಸ್ಎ

ಬಿ ಗುಂಪು: ಆಸ್ಟ್ರೇಲಿಯಾ, ಇಂಗ್ಲೆಂಡ್

ಸಿ ಗುಂಪು: ಅಫ್ಘಾನಿಸ್ತಾನ, ವೆಸ್ಟ್ ಇಂಡೀಸ್

ಡಿ ಗುಂಪು: ದಕ್ಷಿಣ ಆಫ್ರಿಕಾ, ಬಾಂಗ್ಲಾದೇಶ

ಈ 12 ತಂಡಗಳ ಪಯಣ ಅಂತ್ಯ: ಈ ಬಾರಿ ವಿಶ್ವಕಪ್‌ನಲ್ಲಿ ಬಾಗವಹಿಸಿದ್ದ 20 ತಂಡಗಳಲ್ಲಿ 8 ತಂಡಗಳು ಸೂಪರ್-8ಗೆ ಅರ್ಹತೆ ಪಡೆದಿದ್ದರೆ, ಇನ್ನೊಂದೆಡೆ 12 ತಂಡಗಳ ಟಿ20 ವಿಶ್ವಕಪ್ ಪಯಣ ಅಂತ್ಯಗೊಂಡಿದೆ. ಈ 12 ತಂಡಗಳಲ್ಲಿ ಪಾಕಿಸ್ತಾನ, ನ್ಯೂಜಿಲೆಂಡ್, ಪಪುವಾ ನ್ಯೂಗಿನಿಯಾ, ನಮೀಬಿಯಾ, ಐರ್ಲೆಂಡ್, ಕೆನಡಾ, ಓಮನ್, ಸ್ಕಾಟ್ಲೆಂಡ್, ಶ್ರೀಲಂಕಾ, ಉಗಾಂಡಾ, ನೇಪಾಳ ಮತ್ತು ನೆದರ್ಲ್ಯಾಂಡ್ಸ್ ತಂಡಗಳು ವಿಶ್ವಕಪ್ ನಿಂದ ಹೊರಬಿದ್ದಿವೆ.

ಅಫ್ಘಾನಿಸ್ತಾನ, ವೆಸ್ಟ್ ಇಂಡೀಸ್, ನ್ಯೂಜಿಲೆಂಡ್, ಪಾಪುವಾ ನ್ಯೂಗಿನಿಯಾ ತಂಡಗಳಿಗೆ ಲೀಗ್ ಸುತ್ತಿನಲ್ಲಿ ಒಂದೊಂದು ಪಂದ್ಯಗಳು ಬಾಕಿಯಿವೆ.

# ಕ್ರೀಡೆಗಳಿಗೆ ರಾಜ್ಯ ಸರ್ಕಾರದ ಪ್ರೋತ್ಸಾಹ ಅಗತ್ಯ



**ಬೆಂಗಳೂರು:** ಕ್ರೀಡೆಗೆ ರಾಜ್ಯ ಸರ್ಕಾರ ಪ್ರೋತ್ಸಾಹ ನೀಡಿ ಬೆಳೆಸಬೇಕು. ಇಂದಿನ ದಿನಗಳಲ್ಲಿ ಕ್ರಿಕೆಟ್ ರೀತಿ ಫುಟ್ಬಾಲ್ ಆಟವನ್ನು ಸಹ ಪ್ರೋತ್ಸಾಹಿಸಿ ಜನಪ್ರಿಯಗೊಳಿಸಬೇಕು ಎಂದು ಖ್ಯಾತ ಕನ್ನಡ ನಟರಾದ ಅನಿರುಧ್ ಜಾಟ್ಕರ್ ಆಶೀಸಿದರು.

ನಿಜ ಹೇಳಬೇಕೆಂದರೆ ನಾನು ಫುಟ್ಬಾಲ್ ಪಂದ್ಯಾವಳಿ ವೀಕ್ಷಿಸುವ ಭಾಗ್ಯ ದೊರೆತಿರಲಿಲ್ಲ. ಇಂದು ಅದ್ಭುತ ಪಂದ್ಯಾವಳಿ ವೀಕ್ಷಿಸುವ ಭಾಗ್ಯ ದೊರೆಯಿತು ಎಂದು ತಿಳಿಸಿದರು.

ಕರ್ನಾಟಕ ಮೀಡಿಯಾ ಜರ್ನಲಿಸ್ಟ್ ಅಸೋಸಿಯೇಷನ್ ವತಿಯಿಂದ ಆಯೋಜಿಸಲಾಗಿದ್ದ ಐದನೇ ವಾರ್ಷಿಕೋತ್ಸವದ ಅಂಗವಾಗಿ ಕಂಠೀರವ ಸ್ಟೇಡಿಯಂನಲ್ಲಿ ಜೂನ್ 15 ರಿಂದ ಜೂನ್ 17 ರವರೆಗೆ ಮೂರು ದಿನಗಳ ರಾಜ್ಯ ಮಟ್ಟದ ಫುಟ್ಬಾಲ್ ಪಂದ್ಯಾವಳಿಯ ಆಯೋಜಿಸಲಾಗಿದ್ದು ಇಂದು ಫೈನಲ್ ಪಂದ್ಯಾವಳಿಯಲ್ಲಿ ಬೆಂಗಳೂರು ರೂಟ್ಸ್ ತಂಡ ವಿಜಯೋತ್ಸವ ಭಾರಿಸಿತು. ಮಂಗಳೂರು ಎಫ್ ಸಿ ತಂಡ ಎರಡನೇ ತಂಡಕ್ಕೆ ತೃಪ್ತಿ ಪಡೆಯಬೇಕಾಯಿತು.

ವಿಜೇತ ತಂಡಕ್ಕೆ ಒಂದು ಲಕ್ಷ ಬಹುಮಾನವನ್ನು ನೀಡಲಾಯಿತು ಮತ್ತು ಎರಡನೇ ಸ್ಥಾನ ಪಡೆದ ಮಂಗಳೂರು ಎಫ್ ಸಿ ತಂಡಕ್ಕೆ ಎರಡನೇ ಸ್ಥಾನ ಲಭಿಸಿತು. ಎರಡನೇ ಸ್ಥಾನಕ್ಕೆ 50000 ರೂಪಾಯಿ ಬಹುಮಾನ ನೀಡಲಾಯಿತು.

ನಟ ಅನಿರುಧ್ ಮತ್ತು ಎಂಎಲ್ ಸಿ ರಾಮೋಜಿ ಗೌಡ, ನಿರ್ದೇಶಕರಾದ ಜಾಕೋಬ್ ವರ್ಗಿಸ್, ಹರಿ ಸಂತೋಷ್ ಮಾತ್ತು ಎಂ ಆನಂದ್ ರಾಜ್, ಸ್ಪರ್ಶ್ ಹಾಸ್ಪಿಟಲ್ ನ ಸಹಾಯಕ ವ್ಯವಸ್ಥಾಪಕರು (ಮಾರ್ಕೆಟಿಂಗ್ ) ಶಿವರಾಜ್ ಶರಣ್ ಪಾಟೀಲ್ ಬಹುಮಾನ ವಿತರಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com